ಸಂಪುಟ: 01 Volume | ಸಂಚಿಕೆ: 05 Issue | ಪುಟಗಳು 08 Pages | ಗುರುವಾರ 06 ಆಗಸ್ಟ್ 2026 | ₹4 | PRGI NO.KNKAN/26/A5871

mallammanudibangalore@gmail.com
www.mallammanudi.in
9448604450, 9845028349

ಬೆಂಗಳೂರು ಆವೃತ್ತಿ: ಕೋಲಾರ | ಚಿಕ್ಕಬಳ್ಳಾಪುರ | ರಾಮನಗರ | ಮಂಡ್ಯ | ಮೈಸೂರು | ತುಮಕೂರು ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

**ಬೆಳಗು**

ನಾವು ಬಿಡುಗಡೆ, ಸ್ವಾತಂತ್ರ್ಯ ಪಡೆಯಬೇಕಾದದ್ದು ಅಜ್ಞಾನದಿಂದ, ಅಧರ್ಮದಿಂದ.

–ಬಿ.ಎಂ.ಶ್ರೀ

ಸಂಪಾದಕರು: ರಮೇಶ ರೆಡ್ಡಿ | ಪ್ರಧಾನ ಸಂಪಾದಕರು: ಶ್ರೀ ಮಾಣಿಕರೆಡ್ಡಿ ಕೌಡಾಳೆ



ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿಯವರು ಪ್ರತಿಪಕ್ಷದ ನಾಯಕ ಆರ್. ಅಶೋಕ ಅವರೊಂದಿಗೆ ಇಂದು ನವದೆಹಲಿಯಲ್ಲಿ ಮಾಜಿ ಮುಖ್ಯಮಂತ್ರಿ ಹಾಗೂ ಕೇಂದ್ರ ಕೈಗಾರಿಕಾ ಸಚಿವ ಎಚ್. ಡಿ. ಕುಮಾರಸ್ವಾಮಿಯವರನ್ನು ಭೇಟಿ ಮಾಡಿ ಬಿಡದಿ ಟೌನ್ ಶಿಪ್ ವಿರುದ್ದ ಬಿಜೆಪಿ ಜೆಡಿಎಸ್ ಜಂಟಿ ಹೋರಾಟ ಮಾಡುವ ಕುರಿತು ಚರ್ಚೆ ನಡೆಸಿದರು. ಈ ಸಂದರ್ಭದಲ್ಲಿ ಸಂಸದ ಪಿ.ಸಿ.ಮೋಹನ್ ಹಾಜರಿದ್ದರು.

## ಸಚಿವ ಸ್ಥಾನ ನೀಡದಿರುವುದು ಖಂಡನೀಯ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರ ಸಚಿವ ಸಂಪುಟದಲ್ಲಿ ಟೋಕರೆ ಕೋಳಿ (ಕೋಲಿ, ಕಬ್ಬಲಿಗ, ಬೆಸ್ತ, ಮೊಗವೀರ, ಅಂಬಿಗ) ಸಮಾಜದ ಪ್ರಭಾವಿ ನಾಯಕರು, ಮಾಜಿ ಸಚಿವರು, ಉತ್ತರ ಕನ್ನಡ ಜಿಲ್ಲೆಯ ಭಟ್ಕಳ್ ವಿಧಾನ ಸಭಾ ಮತಕ್ಷೇತ್ರದ ಶಾಸಕರಾದ ಮಂಕಾಳ ವೈದ್ಯ ಅವರಿಗೆ ಸಚಿವ ಸ್ಥಾನ ನೀಡದಿರುವುದು ಅಂಬಿಗರ ಚೌಡಯ್ಯ ಯುವ ಸೇನೆಯ ಸಂಸ್ಥಾಪಕ ಅಧ್ಯಕ್ಷರಾದ ಸುನೀಲ ಭಾವಿಕಟ್ಟಿ ತೀವ್ರವಾಗಿ ಖಂಡಿಸಿದ್ದಾರೆ.



ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಕಾಂಗ್ರೆಸ್ ಹೈಕಮಾಂಡ್ ಅಂತಿಮಗೊಳಿಸಿದ್ದ ಪಟ್ಟಿಯಲ್ಲಿ ಕೋಲಿ ಸಮಾಜದ ಏಕೈಕ ಶಾಸಕ ಮಂಕಾಳ ವೈದ್ಯ ಅವರ ಹೆಸರು ಇದ್ದರೂ, ಕೊನೆಯ ಕ್ಷಣದಲ್ಲಿ ಯಾವುದೇ ಸಮರ್ಪಕ ಕಾರಣವಿಲ್ಲದೆ ಅವರನ್ನು ಕೈಬಿಡಲಾಗಿದೆ ಎಂದು ಆರೋಪಿಸಿದರು. ಇದು ಕೋಲಿ ಸಮಾಜಕ್ಕೆ ಮಾಡಿರುವ ಅನ್ಯಾಯವಾಗಿದ್ದು, ಇಡೀ ಸಮಾಜದ ಭಾವನೆಗಳಿಗೆ ಧಕ್ಕೆ ತಂದಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ರಾಜ್ಯದಲ್ಲಿ 50 ಲಕ್ಷಕ್ಕೂ ಅಧೀಕ ಸಂಖ್ಯೆಯಲ್ಲಿರುವ ಕೋಲಿ ಸಮಾಜಕ್ಕೆ ಸಚಿವ ಸಂಪುಟದಲ್ಲಿ ಸೂಕ್ತ ಪ್ರಾತಿನಿಧ್ಯ ನೀಡಬೇಕಾಗಿತ್ತು.ಆದರೆ ಸಮಾಜವನ್ನು ಕಡೆಗಣಿಸಿರುವ ಕ್ರಮವನ್ನು ಯಾವುದೇ ಕಾರಣಕ್ಕೂ ಒಪ್ಪಲು ಸಾಧ್ಯವಿಲ್ಲ. ಕಾಂಗ್ರೆಸ್ ಪಕ್ಷವು ಈ ನಿರ್ಧಾರವನ್ನು ಮರುಪರಿಶೀಲಿಸಿ, ಕೋಲಿ ಸಮಾಜಕ್ಕೆ ನ್ಯಾಯ ಒದಗಿಸುವಂತೆ ಅವರು ಆಗ್ರಹಿಸಿದರು. ಕೋಲಿ ಸಮಾಜದ ಸ್ವಾಭಿಮಾನಕ್ಕೆ ಧಕ್ಕೆ ತರುವಂತಹ ನಿರ್ಧಾರಗಳನ್ನು ಕೈಬಿಡಬೇಕು. ಸಮಾಜದ ನ್ಯಾಯಸಮ್ಮತ ಬೇಡಿಕೆಗಳನ್ನು ನಿರ್ಲಕ್ಷಿಸಿದರೆ ರಾಜ್ಯದ ಮುಂಬರುವ ಚುನಾವಣೆಯಲ್ಲಿ ಕೋಲಿ ಸಮಾಜ ತನ್ನ ಪ್ರಜಾಪ್ರಭುತ್ವದ ಹಕ್ಕನ್ನು ಚಲಾಯಿಸುವ ಮೂಲಕ ಸೂಕ್ತ ಉತ್ತರ ನೀಡಲಿದೆ ಎಂದು ಅಂಬಿಗರ ಚೌಡಯ್ಯ ಯುವ ಸೇನೆಯ ಸಂಸ್ಥಾಪಕ ಅಧ್ಯಕ್ಷರಾದ ಸುನೀಲ ಭಾವಿಕಟ್ಟಿ ಅವರು ಎಚ್ಚರಿಸಿದರು.

## ಸಂಪುಟದಲ್ಲಿ ಸ್ಥಾನ ಸಿಗದಿರುವುದು ದುರಾದೃಷ್ಟ..!

• ಮಲ್ಲಮ್ಮ ನುಡಿ ವಾರ್ತೆ ಚಿಕ್ಕಬಳ್ಳಾಪುರ

ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಸಚಿವ ಸಂಪುಟದಲ್ಲಿ ಪ್ರಾತಿನಿಧ್ಯ ಸಿಗದಿರುವುದು ದುರದೃಷ್ಟಕರ ಸಂಗತಿ ಎಂದು ಭಾಗ್ಯನಗರ ಶಾಸಕ ಎಸ್. ಎನ್. ಸುಬ್ಬಾರೆಡ್ಡಿ ಬೇಸರ ವ್ಯಕ್ತಪಡಿಸಿದರು. ಚಿಕ್ಕಬಳ್ಳಾಪುರದಲ್ಲಿ ಬುಧವಾರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಸ್ವಾತಂತ್ರ್ಯಾನಂತರ ಭಾಗ್ಯನಗರ ಕ್ಷೇತ್ರಕ್ಕೆ ಸಚಿವ ಸ್ಥಾನ ದೊರೆತಿಲ್ಲ ಈ ಬಾರಿ ಸಚಿವ ಸ್ಥಾನ ಸಿಕ್ಕಿದ್ದರೆ ಭಾಗ್ಯನಗರ ಸೇರಿದಂತೆ ಇಡೀ ಜಿಲ್ಲೆಗೆ ಹೊಸ ರೂಪ ನೀಡುವ ಯೋಜನೆ ಹೊಂದಿದ್ದೆ.ಆದರೆ ಅವಕಾಶ ಕೈತಪ್ಪಿರುವುದು ನಿರಾಸೆ ತಂದಿದೆ ಎಂದರು.



ನನಗೆ ಲಭಿಸಿದ ಮಾಹಿತಿಯ ಪ್ರಕಾರ ಸಚಿವ ಸಂಪುಟದ ಪಟ್ಟಿಯಲ್ಲಿ ನನ್ನ ಹೆಸರು ಇದ್ದಿತು.ಆದರೆ ಪಟ್ಟಿ ಪ್ರಕಟವಾಗುವ ಮೂರು–ನಾಲ್ಕು ದಿನಗಳ ಮೊದಲು ನನ್ನ ಹೆಸರು ಬದಲಾಗಿದೆ.ಯಾವ ಕಾರಣಕ್ಕೆ ಬದಲಾವಣೆ ಆಯಿತು ಎಂಬುದು ಗೊತ್ತಿಲ್ಲ.ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ನನ್ನ ಪರವಾಗಿಯೇ ಇದ್ದರು. ಆದರೆ ಹೈಕಮಾಂಡ್ ಮಟ್ಟದಲ್ಲಿ ಕೆಲವು ವ್ಯತ್ಯಾಸಗಳು ನಡೆದಿದ್ದು, ನನಗೆ ಅನ್ಯಾಯವಾಗಿದೆ ಎಂದು ಹೇಳಿದರು. ಈಗ ಸಚಿವನಾಗುವ ಆಸೆಯನ್ನು ಬಿಟ್ಟಿದ್ದೇನೆ.ಆದರೆ ನನ್ನ ಕ್ಷೇತ್ರದ ಅಭಿವೃದ್ಧಿಗಾಗಿ ಹೆಚ್ಚಿನ ಅನುದಾನ ನೀಡುವಂತೆ ಪಕ್ಷದ ನಾಯಕತ್ವವನ್ನು ವಿನಂತಿಸುತ್ತೇನೆ" ಎಂದು ತಿಳಿಸಿದರು.

ಭಾಗ್ಯನಗರ ಬಂದ್ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು,ನಾನು ಸಚಿವನಾಗುತ್ತೇನೆ ಎಂಬ ನಿರೀಕ್ಷೆಯನ್ನು ಪಕ್ಷದ ಕಾರ್ಯಕರ್ತರು,ಅಭಿಮಾನಿಗಳು ಮತ್ತು ಸ್ನೇಹಿತರು ಇಟ್ಟುಕೊಂಡಿದ್ದರು.ಅವಕಾಶ ಸಿಗದ ಕಾರಣ ಅವರು ಬೇಸರದಿಂದ ಬಂದ್ ನಡೆಸಿದ್ದಾರೆ.ನಾನು ಬಂದ್ ಮಾಡಬೇಡಿ ಎಂದು ಮನವಿ ಮಾಡಿದ್ದರೂ ಅವರು ತಮ್ಮ ಅಸಮಾಧಾನವನ್ನು ವ್ಯಕ್ತಪಡಿಸಿದ್ದಾರೆ ಎಂದರು.

## ಗ್ರಾಮೀಣರಿಗೆ ಗರಿಷ್ಠ ಉದ್ಯೋಗ ನೀಡಲು ಈಶ್ವರ ಖಂಡ್ರೆ ಸೂಚನೆ



**ಬೆಂಗಳೂರು:** ಮಳೆ ಕೊರತೆಯ ಪ್ರಸಕ್ತ ಸನ್ನಿವೇಶದಲ್ಲಿ ಎಲ್ಲ ಅರ್ಹ ಗ್ರಾಮೀಣರಿಗೆ ಉದ್ಯೋಗ ಖಾತ್ರಿಪಡಿಸಲು ಮತ್ತು ನಿತ್ಯ 5 ಲಕ್ಷ ಮಾನವ ದಿನ ಸೃಜನೆಗಾಗಿ ಗರಿಷ್ಠ ಉದ್ಯೋಗ ನೀಡುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ. ಈ ಸಂಬಂಧ ಇಲಾಖೆಯ ಕಾರ್ಯದರ್ಶಿಯವರಿಗೆ ಲಿಖಿತ ಸೂಚನೆ ನೀಡಿರುವ ಅವರು, ಮನ್ರೇಗಾದ ಬದಲಾದ ರೂಪ ವಿಬಿಜಿ ರಾಮ್ ಜಿಯನ್ನು ಆರ್ಥಿಕ ಹೊರೆಯ ನಡುವೆಯೂ ರಾಜ್ಯ ಸರ್ಕಾರ ಬಡವರ, ವಂಚಿತರ ಹಿತದೃಷ್ಟಿಯಿಂದ ಜಾರಿಗೆ ತಂದಿದ್ದು, ಪ್ರಮಾಣಿತ ಕಾರ್ಯಾಚರಣೆ ಮಾನದಂಡ, ಆಡಳಿತಾತ್ಮಕ, ತಾಂತ್ರಿಕ ಮಾರ್ಗಸೂಚಿಗಳನ್ನು ಎಲ್ಲ ಗ್ರಾ.ಪಂ.ಗಳಿಗೆ ಕಳುಹಿಸಿ ಗರಿಷ್ಠ ಪ್ರಮಾಣದಲ್ಲಿ ಉದ್ಯೋಗ ನೀಡಿ, ಶಾಶ್ವತ ಮತ್ತು ಗುಣಮಟ್ಟದ ಆಸ್ತಿ ಸೃಷ್ಟಿಸುವಂತೆ ಆದೇಶಿಸಿದ್ದಾರೆ.

ಕೆಲವು ಪಿಡಿಓಗಳು ವಿಬಿಜಿ ರಾಮ್ ಜಿ ಸ್ಪಷ್ಟ ಮಾರ್ಗಸೂಚಿ ಇಲ್ಲದ ಕಾರಣ ಅನುಷ್ಠಾನಕ್ಕೆ ತೊಡಕಾಗಿದೆ ಎಂದು ತಿಳಿಸಿದ್ದು, ವಿಬಿಜಿ ರಾಮ್ ಜಿಗೆ ಸಂಬಂಧಿಸಿದ ಪ್ರಮಾಣಿತ ಕಾರ್ಯಾಚರಣೆ ವಿಧಾನ (ಎಸ್.ಓ.ಪಿ.), ತಾಂತ್ರಿಕ ಮತ್ತು ಆಡಳಿತಾತ್ಮಕ ಮಾರ್ಗಸೂಚಿ, ಮಾದರಿ, ಅಂದಾಜು, ಕಾಮಗಾರಿ, ವೆಚ್ಚದ ಮಿತಿ, 60:40 ಕೂಲಿ–ಸಾಮಗ್ರಿ ಅನುಪಾತ, ಯುಕ್ತಧಾರಾ ಪೋರ್ಟಲ್ ಕಾರ್ಯವಿಧಾನ ಹಾಗೂ ಹೊಣೆಗಾರಿಕೆ ನಕ್ಷೆ, ಕ್ರಿಯಾ ಯೋಜನೆ ಸ್ವರೂಪ ಕುರಿತಂತೆ ಸ್ಪಷ್ಟ ಮಾಹಿತಿ ನೀಡಲು ಸೂಚನೆ ನೀಡಿದ್ದಾರೆ.

# ಮುಜರಾಯಿ ಖಾತೆಗೆ ಅಸ್ತು

## ಅರ್ಚಕರ ಬೇಡಿಕೆಯಂತೆ ರಾಮಲಿಂಗಾ ರೆಡ್ಡಿ ಅವರಿಗೆ ಮುಜರಾಯಿ ಇಲಾಖೆ ನೀಡಲು ಸಿದ್ಧ: ಸಿಎಂ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ನಿಮ್ಮ ಬೇಡಿಕೆಯಂತೆ ರಾಮಲಿಂಗಾ ರೆಡ್ಡಿ ಅವರಿಗೆ ಮುಜರಾಯಿ ಇಲಾಖೆ ನೀಡಲು ಸಿದ್ಧ, ನೀವು ಅವರೊಂದಿಗೆ ಮಾತನಾಡಿ ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ಅರ್ಚಕರಿಗೆ ಕರೆ ನೀಡಿದ್ದಾರೆ.

**ಅಭಿನಂದನಾ ಸಮಾರಂಭ:** ಕರ್ನಾಟಕ ರಾಜ್ಯ ಮುಜರಾಯಿ ದೇವಾಲಯಗಳ ಆರ್ಚಕರ ಆಗಮಿಕರ ಮತ್ತು ನೌಕರರ ಸಂಘ ಬೆಂಗಳೂರಿನಲ್ಲಿ ಬುಧವಾರ ಹಮ್ಮಿಕೊಂಡಿದ್ದ ರಾಜ್ಯ ಮಟ್ಟದ ಬೃಹತ್ ಸಮಾವೇಶ ಹಾಗೂ ಸಚಿವ ರಾಮಲಿಂಗಾರೆಡ್ಡಿ ಅವರ ಅಭಿನಂದನಾ ಸಮಾರಂಭವನ್ನು ಶಿವಕುಮಾರ್ ಅವರು ಉದ್ಘಾಟಿಸಿ ಮಾತನಾಡಿದ್ದಾರೆ.

**ಮತ್ತೆ ವಿಧಾನ ಸೌಧದಲ್ಲಿ ಕೂಡಿಸಿ:** ನಿಮ್ಮ ನಮ್ಮ ಈ ಬಾಂಧವ್ಯ ನನ್ನನ್ನು ಹಾಗೂ ರಾಮಲಿಂಗಾ ರೆಡ್ಡಿ ಅವರನ್ನು ಮತ್ತೇ ವಿಧಾನಸೌಧದಲ್ಲಿ ಕೂರಿಸುವಂತೆ ಮಾಡಬೇಕು. ದಿನ ನಿತ್ಯ ನಿಮ್ಮ ಬಳಿಗೆ ನೂರಾರು ಜನ ಬರುತ್ತಾರೆ. ನಾನು ಏನಾದರೂ ಮಾತನಾಡಿದರೆ ನನ್ನ ಸ್ವಾರ್ಥ ಎಂದು ಹೇಳುತ್ತಾರೆ. ನೀವು ಮಾತನಾಡಿದರೆ ದೇವರ ಪರವಾಗಿ ಮಾತನಾಡಿದಂತೆ ಎಂದು ಹೇಳಿದ್ದಾರೆ. 'ನಮ್ಮ ಸರ್ಕಾರ ನುಡಿದಂತೆ ನಡೆದಿದೆ. ಬೇರೆ ಯಾವ ಸರ್ಕಾರಗಳು ಮಾಡದ ಕೆಲಸ ಮಾಡಿ ನಿಮ್ಮ ಹೃದಯ ಗೆದ್ದಿದ್ದೇವೆ. ನೀವುಗಳು ನಿಮ್ಮ ಮನೆ, ದೇವಾಲಯಗಳನ್ನು ಕಾಪಾಡಿಕೊಳ್ಳುವಂತೆ ನಿಮ್ಮ ಸರ್ಕಾರವನ್ನು ಕಾಪಾಡಿಕೊಳ್ಳಿ" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ಅರ್ಚಕರಿಗೆ ಕರೆ ನೀಡಿದರು.



### ರೆಡ್ಡಿಯವರ ಮೇಲೆ ನಂಬುಗೆ..!

ನೀವೆಲ್ಲರೂ ನಮ್ಮ ಮೇಲೆ ಇಷ್ಟು ವಿಶ್ವಾಸ ಇಟ್ಟಿದ್ದೀರಿ. ಇತಿಹಾಸದಲ್ಲಿ ಯಾರೂ ಮಾಡದ ಕೆಲಸ ರಾಮಲಿಂಗಾ ರೆಡ್ಡಿ ಅವರು ಮಾಡಿದ್ದಾರೆ ಎಂದು ನೀವೆಲ್ಲರೂ ವಿಶ್ವಾಸ ವ್ಯಕ್ತಪಡಿಸಿದ್ದೀರಿ. ಶಂಭುವಿಗಿಂತ ದೊಡ್ಡ ದೇವರಿಲ್ಲ, ನಂಬಿಕೆಗಿಂತ ದೊಡ್ಡ ಗುಣವಿಲ್ಲ. ನೀವು ನಮ್ಮ ಸರ್ಕಾರ ಹಾಗೂ ರಾಮಲಿಂಗಾರೆಡ್ಡಿ ಅವರ ಮೇಲೆ ನಂಬಿಕೆ ಇಟ್ಟಿರುವುದಕ್ಕೆ ನಿಮ್ಮ ಪಾದಗಳಿಗೆ ನಮಿಸುತ್ತೇನೆ ಎಂದರು.

### ದೇವನೊಬ್ಬ ನಾಮ ಹಲವು

ನಮ್ಮ ಸರ್ಕಾರದಲ್ಲಿ ಧಾರ್ಮಿಕ ದತ್ತಿ ಇಲಾಖೆ ಇವೆ. ಧರ್ಮ ಯಾವುದಾದರೂ ತತ್ವವೊಂದೇ, ನಾಮ ನೂರಾದರೂ ದೈವವೊಂದೇ, ಪೂಜೆ ಯಾವುದಾದರೂ ಭಕ್ತಿಯೊಂದೇ, ಕರ್ಮ ಹಲವಾದರೂ ನಿಷ್ಠೆಯೊಂದೇ, ದೇವನೊಬ್ಬ ನಾಮ ಹಲವು. ನೀವು ಭಕ್ತರ ಪ್ರಾರ್ಥನೆಯನ್ನು ದೇವರಿಗೆ ತಲುಪಿಸುವ ಏಜೆಂಟರಿದ್ದಂತೆ. ಮುಂದೆ ನಿಮ್ಮ ಸರ್ಕಾರ ಅಧಿಕಾರಕ್ಕೆ ಬರಲು ನೀವು ಶ್ರಮಿಸಬೇಕು ಎಂದಿದ್ದಾರೆ.

### ನಾನು, ರೆಡ್ಡಿ ಹಿಂದೂ..!

ರಾಮಲಿಂಗಾ ರೆಡ್ಡಿ ಅವರನ್ನು ದೇವರ ಬಳಿ ಕರೆದೊಯ್ದು ಈ ಸರ್ಕಾರ ಇನ್ನು 10 ವರ್ಷ ಅಧಿಕಾರದಲ್ಲಿ ಇರಬೇಕು ಎಂದು ಪ್ರಾರ್ಥನೆ ಮಾಡಿದ್ದು ನನಗೆ ಬಹಳ ಸಂತೋಷ ತಂದಿದೆ. ಈ ಧರ್ಮವನ್ನು ಕೆಲವು ಪಕ್ಷದವರು ಗುತ್ತಿಗೆಗೆ ಪಡೆದಿದ್ದಾರೆ ಇದು ಸಲ್ಲ. ನಾನು, ರಾಮಲಿಂಗಾ ರೆಡ್ಡಿ, ಸಿದ್ರಾಮಯ್ಯ, ಮಲ್ಲಿಕಾರ್ಜುನ ಖರ್ಗೆ ಅವರು ಹಿಂದೂಗಳಲ್ಲವೇ? ಎಂದು ಪ್ರಶ್ನಿಸಿದ್ದಾರೆ.

### ಬೆಂಗಳೂರು ಖಾತೆ ಕೊಡುವಾಸೆ..!

ನೀವು ರಾಮಲಿಂಗಾ ರೆಡ್ಡಿ ಅವರಿಗೆ ಮುಜರಾಯಿ ಇಲಾಖೆ ಜವಾಬ್ದಾರಿ ನೀಡಬೇಕು ಎಂದು ಬೇಡಿಕೆ ಇಟ್ಟಿದ್ದೀರಿ. ನನಗೆ ಅವರಿಗೆ ಬೆಂಗಳೂರು ಖಾತೆ ನೀಡುವ ಆಸೆ ಇತ್ತು. ಆದರೆ ಪಕ್ಷ ತೀರ್ಮಾನ ಮಾಡಿತ್ತು. ಬೇರೆ ಯಾವುದೇ ಖಾತೆ ಕೇಳಿ, ಇದನ್ನು ಕೇಳಿದ್ರೂ ಕೊಡುವೆ. ನೀವು, ಅವರು ಕೂತು ಚರ್ಚಿಸಿ. ನೀರಾವರಿ ಇಲಾಖೆಯಲ್ಲಿ ಮಾತ್ರ ಸವಾಲುಗಳು ಹೆಚ್ಚಾಗಿರುತ್ತವೆ ಎಂದು ವಿವರಿಸಿದ್ದಾರೆ.



ಸಿಎಂ ಡಿ ಕೆ ಶಿವಕುಮಾರ್ ಅವರ ಸದಾಶಿವನಗರ ನಿವಾಸಕ್ಕೆ ಕನ್ನಡ ಚಿತ್ರರಂಗದ ಖ್ಯಾತ ನಟ, ನಿರ್ಮಾಪಕರಾದ ವಿ ರವಿಚಂದ್ರನ್ ಅವರು ಬುಧವಾರ ಭೇಟಿ ಮಾಡಿ ಸಮಾಲೋಚನೆ ನಡೆಸಿದರು.

## ಅಸ್ವಸ್ಥ ವಿದ್ಯಾರ್ಥಿಗಳ ಆರೋಗ್ಯ ವಿಚಾರಿಸಿದ ಪಂಪನಗೌಡ ಬಾದರ್ಲಿ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ನಗರದ ಡಾ. ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ಪೂರ್ವ ವಸತಿ ನಿಲಯಕ್ಕೆ ಆರ್.ಡಿ.ಸಿ.ಸಿ. ಬ್ಯಾಂಕ್ ನಿರ್ದೇಶಕರಾದ ಪಂಪನಗೌಡ ಬಾದರ್ಲಿ ಅವರು ಇಂದು ಭೇಟಿ ನೀಡಿ, ವಸತಿ ನಿಲಯದ ವಿದ್ಯಾರ್ಥಿಗಳ ಸಮಸ್ಯೆಗಳ ಕುರಿತು ಪರಿಶೀಲನೆ ನಡೆಸಿದ್ದಾರೆ.

ವಸತಿ ನಿಲಯದಲ್ಲಿ ನೀಡಲಾದ ಅನ್ನ ಮತ್ತು ಸಾಂಬಾರ್ ಸೇವಿಸಿದ ಬಳಿಕ ವಿದ್ಯಾರ್ಥಿಗಳಿಗೆ ತೀವ್ರ ಹೊಟ್ಟೆನೋವು ಕಾಣಿಸಿಕೊಂಡಿದೆ ಎಂದು ವಿದ್ಯಾರ್ಥಿಗಳು ಬಾದರ್ಲಿ ಅವರ ಬಳಿ ತಮ್ಮ ಅಳಲನ್ನು ತೋಡಿಕೊಂಡಿದ್ದಾರೆ ಎಂದು ತಿಳಿದು ಬಂದಿದೆ.

ವಸತಿ ನಿಲಯದಲ್ಲಿ ವಾರ್ಡನ್ ಹಾಗೂ ಅಡುಗೆ ಸಿಬ್ಬಂದಿ ನಡುವೆ ಸರಿಯಾದ ಹೊಂದಾಣಿಕೆ ಇಲ್ಲದಿರುವುದರಿಂದಲೇ ಅಡುಗೆ ಸರಿಯಾಗಿ ತಯಾರಾಗಿಲ್ಲ ಎಂದು ವಿದ್ಯಾರ್ಥಿಗಳು ದೂರಿದರು. ಸ್ಥಳದಲ್ಲಿ ಪರಿಶೀಲನೆ ನಡೆಸಿದಾಗ ಮೇಲ್ವಿಚಾರಕರ ನಿರ್ಲಕ್ಷ್ಯ ಹಾಗೂ ಬೇಜವಾಬ್ದಾರಿತನ ಮೇಲ್ನೋಟಕ್ಕೆ ಕಂಡುಬಂದಿತು. ಈ ಕುರಿತು ಕೂಡಲೇ ಮೇಲ್ವಿಚಾರಕರ ಮೇಲೆ ಕಠಿಣ ಕ್ರಮ ಕೈಗೊಳ್ಳಬೇಕೆಂದು ಸ್ಥಳದಲ್ಲಿದ್ದ ತಾಲೂಕು ಸಮಾಜ ಕಲ್ಯಾಣ ಅಧಿಕಾರಿಗೆ ಸೂಚನೆ ನೀಡಿದ್ದಾರೆ.



**ವಿದ್ಯಾರ್ಥಿಗಳ ಆರೋಗ್ಯ ವಿಚಾರಣೆ:** ಬಳಿಕ ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ಭೇಟಿ ನೀಡಿದ ಅವರು, ಅಸ್ವಸ್ಥಗೊಂಡು ಚಿಕಿತ್ಸೆ ಪಡೆಯುತ್ತಿರುವ ವಿದ್ಯಾರ್ಥಿಗಳನ್ನು ನೇರವಾಗಿ ಭೇಟಿ ಮಾಡಿ ಆರೋಗ್ಯ ವಿಚಾರಿಸಿ, ವಿದ್ಯಾರ್ಥಿಗಳಿಗೆ ಧೈರ್ಯ ತುಂಬಿ ಯಾವುದೇ ಕಾರಣಕ್ಕೂ ಆತಂಕಕ್ಕೆ ಒಳಗಾಗಬೇಡಿ, ಎಲ್ಲರೂ ಧೈರ್ಯದಿಂದ ಇರಿ ಎಂದು ಸಾಂತ್ವನ ಹೇಳಿದ್ದಾರೆ.

ಈ ವೇಳೆ ಎನ್ ಅಂಬರೀಶ್, ಅನಿಲ ಕುಮಾರ ವೈ ಸೇರಿದಂತೆ ಇತರು ಇದ್ದರು.

## 1.11 ಕೋಟಿಗೂ ಹೆಚ್ಚು ಮತದಾರರು ಗುರುತು..!

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

SIR–2026 ಮತದಾರರ ಪಟ್ಟಿ ಪರಿಷ್ಕರಣೆಯ ಸಮಯದಲ್ಲಿ ಕರ್ನಾಟಕದಲ್ಲಿ 1.11 ಕೋಟಿಗೂ ಹೆಚ್ಚು ಮತದಾರರನ್ನು ಗೈರುಹಾಜರಿ, ಸ್ಥಳಾಂತರಗೊಂಡವರು, ಸತ್ತವರು, ನಕಲು/ಈಗಾಗಲೇ ದಾಖಲಾಗಿರುವವರು ಮತ್ತು ಇತರರು ವರ್ಗದ ಅಡಿಯಲ್ಲಿ ಗುರುತಿಸಲಾಗಿದೆ, ಅವರಲ್ಲಿ 50 ಲಕ್ಷಕ್ಕೂ ಹೆಚ್ಚು ಜನರು ಬೆಂಗಳೂರಿನ ನಾಲ್ಕು ವಲಯಗಳಿಂದ ಬಂದವರಾಗಿದ್ದಾರೆ.

ಈ ಮತದಾರರನ್ನು ಪಟ್ಟಿಯಿಂದ ಹೊರಗಿಡಲಾಗಿಲ್ಲ ಮತ್ತು ಪರಿಶೀಲನೆಗೆ ಒಳಪಟ್ಟಿರುತ್ತದೆ ಎಂದು ಚುನಾವಣಾ ಆಯೋಗ ತಿಳಿಸಿದೆ. ಪ್ರಕ್ರಿಯೆ ಬಗ್ಗೆ ಮಾಹಿತಿ ಹಂಚಿಕೊಂಡಿರುವ ಮುಖ್ಯ ಚುನಾವಣಾ ಆಯುಕ್ತ ವಿ ಅನ್ಬುಕುಮಾರ್, ಎನುಮರೇಷನ್ ಫಾರ್ಮ್ ಗಳ ವಿತರಣೆ ಶೇ.100 ರಷ್ಟು ಪೂರ್ಣಗೊಂಡಿದೆ. ಡಿಜಿಟೈಸೇಷನ್ ಶೇ.79.93 ರಷ್ಟು ಪೂರ್ಣಗೊಂಡಿದ್ದು, ಆ.05 ರಂದು ಮಧ್ಯಾಹ್ನ 2 ಗಂಟೆ ವೇಳೆಗೆ 22,977 ಫಾರ್ಮ್ ಗಳು ಬಾಕಿ ಉಳಿದಿವೆ ಎಂದು ತಿಳಿಸಿದ್ದಾರೆ.



"ಜೂನ್ 16, 2026 ರ ಹೊತ್ತಿಗೆ, ಮತದಾರರ ಪಟ್ಟಿಯಲ್ಲಿ 5,54,32,314 ಮತದಾರರಿದ್ದಾರೆ. ಗಣತಿ ನಮೂನೆಗಳನ್ನು ಮುದ್ರಿಸಿ ಬಿಎಲ್‌ಒಗಳಿಗೆ ತಲುಪಿಸಲಾಗಿದೆ" ಎಂದು ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಪ್ರಕಟಣೆಯ ಪ್ರಕಾರ, 4.43 ಕೋಟಿ ಎಣಿಕೆ ನಮೂನೆಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ, ಆದರೆ ಎಎಸ್‌ಡಿಡಿಒ ವರ್ಗದ ಅಡಿಯಲ್ಲಿ ಪಟ್ಟಿ ಮಾಡಲಾದ ಮತದಾರರಿಗೆ ಸಂಬಂಧಿಸಿದ ಎಲ್ಲಾ 5.54 ಕೋಟಿ ನಮೂನೆಗಳನ್ನು ಪ್ರಕ್ರಿಯೆಗೊಳಿಸಲಾಗಿದೆ. ಒಟ್ಟು 1.11 ಕೋಟಿ ಮತದಾರರನ್ನು, ಅಂದರೆ ಶೇ. 20.03 ರಷ್ಟು ಮತದಾರರನ್ನು ಗೈರುಹಾಜರಿ, ಸ್ಥಳಾಂತರಗೊಂಡವರು, ಸತ್ತವರು, ನಕಲು/ಈಗಾಗಲೇ ದಾಖಲಾಗಿರುವವರು ಮತ್ತು ಇತರರು ಎಂದು ವರ್ಗೀಕರಿಸಲಾಗಿದೆ, ಉಳಿದಿರುವುದು ಕೇವಲ 22,977 ನಮೂನೆಗಳು ಅಥವಾ ಶೇ. 0.04 ರಷ್ಟು ಮಾತ್ರ ಡಿಜಿಟಲೀಕರಣಕ್ಕೆ ಬಾಕಿ ಉಳಿದಿದೆ. ಈ ವರ್ಗದಲ್ಲಿ 66,64,943 ಶಾಶ್ವತವಾಗಿ ಸ್ಥಳಾಂತರಗೊಂಡ ಮತದಾರರು, 16,30,012 ಗೈರುಹಾಜರಾದ ಅಥವಾ ಪತ್ತೆಯಾಗದ ಮತದಾರರು, 16,30,872 ಮೃತ ಮತದಾರರು, ಈಗಾಗಲೇ ಬೇರೆಡೆ ದಾಖಲಾಗಿರುವ 6,89,904 ಮತದಾರರು ಮತ್ತು ಇತರ ಕಾರಣಗಳ ಅಡಿಯಲ್ಲಿ ಪಟ್ಟಿ ಮಾಡಲಾದ 4,88,974 ಪ್ರಕರಣಗಳು ಸೇರಿವೆ.

ASDDO ವರ್ಗದ ಅಡಿಯಲ್ಲಿ ಪಟ್ಟಿ ಮಾಡಲಾದ ಮತದಾರರನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕಲಾಗಿಲ್ಲ ಎಂದು ಪ್ರಕಟಣೆ ಸ್ಪಷ್ಟಪಡಿಸಿದೆ. ASDDO ಪಟ್ಟಿಗಳನ್ನು ಮಾನ್ಯತೆ ಪಡೆದ ರಾಜಕೀಯ ಪಕ್ಷಗಳೊಂದಿಗೆ ಹಂಚಿಕೊಳ್ಳಲಾಗಿದೆ ಮತ್ತು ಪರಿಶೀಲನೆಗಾಗಿ ಬೂತ್ ಮಟ್ಟದ ಅಧಿಕಾರಿಗಳೊಂದಿಗೆ ಲಭ್ಯವಿದೆ ಎಂದು ಆಯೋಗ ಹೇಳಿದೆ.






**ಅಪರಾಧಿ ಪ್ರಜ್ಞೆಯಿಂದ ಅಮಿತ್ ಶಾ ಮುಖ ಮುಚ್ಚಿಕೊಂಡು ಓಡಾಡುತ್ತಿದ್ದಾರೆ; ಸಂಸತ್ತನ್ನು ಎದುರಿಸುವ ಧೈರ್ಯ ಇಲ್ಲ: ರಾಹುಲ್ ಗಾಂಧಿ**

# ಮಾಣಿಕನಗರ ಗುರುಗಂಗಾ ನದಿಗೆ ಅಧಿಕಾರಿಗಳು ತಕ್ಷಣ ಪರಿಶೀಲನೆ ನಡೆಸಿ ಸತ್ಯಾಂಶ ಬಹಿರಂಗಪಡಿಸಲಿ

ನದಿ ಎನ್ನುವುದು ಕೇವಲ ನೀರಿನ ಮೂಲವಲ್ಲ; ಅದು ಜನಜೀವನ, ಕೃಷಿ, ಪರಿಸರ ಮತ್ತು ಧಾರ್ಮಿಕ ನಂಬಿಕೆಗಳ ಆಧಾರವಾಗಿದೆ. ಮಾಣಿಕನಗರದ ಗುರುಗಂಗಾ ನದಿಗೆ ರಾಸಾಯನಿಕ ಮಿಶ್ರಿತ ನೀರು ಸೇರುತ್ತಿದೆ ಎಂಬ ಆರೋಪಗಳು ಕೇಳಿಬರುತ್ತಿರುವುದು ಅತ್ಯಂತ ಗಂಭೀರ ವಿಷಯವಾಗಿದೆ. ಇಂತಹ ಆರೋಪಗಳನ್ನು ನಿರ್ಲಕ್ಷಿಸುವ ಬದಲು, ಸಂಬಂಧಿತ ಇಲಾಖೆಗಳು ತಕ್ಷಣ ಸ್ಥಳಕ್ಕೆ ಭೇಟಿ ನೀಡಿ ವೈಜ್ಞಾನಿಕ ಪರೀಕ್ಷೆ ನಡೆಸುವುದು ಅಗತ್ಯವಾಗಿದೆ.

## ಸಂಪಾದಕೀಯ



**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**

ಸತ್ಯಾಂಶವನ್ನು ತಿಳಿಯಲು ನೀರಿನ ಮಾದರಿಗಳನ್ನು ಸಂಗ್ರಹಿಸಿ ಪ್ರಯೋಗಾಲಯದಲ್ಲಿ ಪರೀಕ್ಷಿಸಬೇಕು. ಆ ಪರೀಕ್ಷೆಯ ವರದಿಯನ್ನು ಸಾರ್ವಜನಿಕರ ಮುಂದಿಡಬೇಕು. ಆರೋಪಗಳು ಸತ್ಯವೆಂದು ಕಂಡುಬಂದರೆ, ಪರಿಸರ ಮಾಲಿನ್ಯಕ್ಕೆ ಕಾರಣರಾದವರ ವಿರುದ್ಧ ಕಾನೂನು ಪ್ರಕಾರ ಕಠಿಣ ಕ್ರಮ ಕೈಗೊಳ್ಳಬೇಕು. ಆರೋಪಗಳು ಸುಳ್ಳಾಗಿದ್ದರೆ ಅದನ್ನೂ ಸ್ಪಷ್ಟವಾಗಿ ತಿಳಿಸಿ ಸಾರ್ವಜನಿಕರಲ್ಲಿರುವ ಅನುಮಾನಗಳಿಗೆ ತೆರೆ ಎಳೆಯಬೇಕು.

ಗುರುಗಂಗಾ ನದಿ ಅನೇಕ ಜನರ ಭಕ್ತಿ ಮತ್ತು ಜೀವನೋಪಾಯದೊಂದಿಗೆ ಬೆಸೆದುಕೊಂಡಿದೆ. ನದಿಯ ಸ್ವಚ್ಛತೆಯನ್ನು ಕಾಪಾಡುವುದು ಸರ್ಕಾರ, ಕೈಗಾರಿಕೆಗಳು ಮತ್ತು ಸಾರ್ವಜನಿಕರ ಸಮಾನ ಜವಾಬ್ದಾರಿಯಾಗಿದೆ. ಪರಿಸರ ಸಂರಕ್ಷಣೆಯಲ್ಲಿ ಯಾವುದೇ ರಾಜಿ ಸಲ್ಲದು.

ಆದ್ದರಿಂದ ಅಧಿಕಾರಿಗಳು ಯಾವುದೇ ವಿಳಂಬವಿಲ್ಲದೆ ಸ್ಥಳ ಪರಿಶೀಲನೆ ನಡೆಸಿ, ಪಾರದರ್ಶಕ ವರದಿ ಸಲ್ಲಿಸಿ, ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು. ಇದು ಕೇವಲ ಒಂದು ನದಿಯನ್ನು ಉಳಿಸುವ ಕಾರ್ಯವಲ್ಲ; ಮುಂದಿನ ಪೀಳಿಗೆಗೆ ಶುದ್ಧ ಪರಿಸರವನ್ನು ಉಳಿಸುವ ಹೊಣೆಗಾರಿಕೆಯಾಗಿದೆ.

# ರಸ್ತೆ ಕಾಮಗಾರಿ ವಿಳಂಬ, ಮಾಜಿ ಸಚಿವ ವೆಂಕಟರಾವ್ ನಾಡಗೌಡ ಭೇಟಿ



**ಸಿಂಧನೂರು:** ನಗರದ ರೈಲ್ವೆ ನಿಲ್ದಾಣಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ಕಾಮಗಾರಿ ಅತ್ಯಂತ ವಿಳಂಬವಾಗಿ ಸಾಗುತ್ತಿರುವುದಕ್ಕೆ ಮಾಜಿ ಸಚಿವ ವೆಂಕಟರಾವ್ ನಾಡಗೌಡ ತೀವ್ರ ಅಸಮಾಧಾನ ವ್ಯಕ್ತಪಡಿಸಿ, ಶೀಘ್ರವೇ ಕಾಮಗಾರಿಯನ್ನು ಪೂರ್ಣಗೊಳಿಸುವಂತೆ ಒತ್ತಾಯಿಸಿದರು.

ಬುಧವಾರ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಅವರು ಪರಿಶೀಲನೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಾವು ಶಾಸಕರಾಗಿದ್ದ ಅವಧಿಯಲ್ಲಿ ಸಂಸದ ಸಂಗಣ್ಣ ಕರಡಿ ಅವರ ಸಹಕಾರದೊಂದಿಗೆ ಈ ರಸ್ತೆ ಕಾಮಗಾರಿಗಾಗಿ ಒಟ್ಟು 9 ಕೋಟಿ ರೂಪಾಯಿ ಅನುದಾನ ಮಂಜೂರು ಮಾಡಿಸಲಾಗಿತ್ತು. ಆದರೆ ಕಾಮಗಾರಿ ಆರಂಭವಾಗಿ ಸುಮಾರು ಮೂರುವರೆ ವರ್ಷ ಕಳೆದರೂ ಇದುವರೆಗೂ ಪೂರ್ಣಗೊಂಡಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಪ್ರಸ್ತುತ 300 ಮೀಟರ್ ರಸ್ತೆ ಕಾಮಗಾರಿ ಬಾಕಿ ಉಳಿದಿದೆ.66 ಮೀಟರ್ ಅಗಲದಲ್ಲಿ ಸಿ.ಸಿ. ರಸ್ತೆ ಹಾಗೂ ಚರಂಡಿ ವ್ಯವಸ್ಥೆಯನ್ನು ನಿರ್ಮಿಸಿ, ಯಾರೂ ಜಾಗವನ್ನು ಅತಿಕ್ರಮಣ ಮಾಡದಂತೆ ರಸ್ತೆಯನ್ನು ಪೂರ್ಣ ಪ್ರಮಾಣದಲ್ಲಿ ಅಭಿವೃದ್ಧಿಪಡಿಸಬೇಕು.ಕೆಲವು ಸ್ಥಳಗಳು ನ್ಯಾಯಾಲಯದ ವ್ಯಾಪ್ತಿಯಲ್ಲಿ ತಕರಾರಿನಲ್ಲಿದ್ದು, ಕೋರ್ಟ್ ತೀರ್ಪು ಬರುವವರೆಗೆ ಕಾಯಬೇಕಾದ ಅನಿವಾರ್ಯತೆಯೂ ಇದೆ ಎಂದು ಅವರು ಹೇಳಿದರು.

ಕಾಮಗಾರಿ ಆಮೆಗತಿಯಲ್ಲಿ ಸಾಗುತ್ತಿರುವುದರಿಂದ ಸಾರ್ವಜನಿಕರು ಹಾಗೂ ಪ್ರಯಾಣಿಕರು ತೀವ್ರ ತೊಂದರೆ ಅನುಭವಿಸುವಂತಾಗಿದೆ. ಆದ್ದರಿಂದ, ಸಂಬಂಧಪಟ್ಟ ಅಧಿಕಾರಿಗಳು ಮತ್ತು ಗುತ್ತಿಗೆದಾರರು ಕೂಡಲೇ ಎಚ್ಚೆತ್ತುಕೊಂಡು ಅಗತ್ಯ ಕ್ರಮ ಕೈಗೊಳ್ಳಬೇಕು ಹಾಗೂ ಬಾಕಿ ಉಳಿದಿರುವ ರಸ್ತೆ ಕಾಮಗಾರಿಯನ್ನು ಶೀಘ್ರವಾಗಿ ಪೂರ್ಣಗೊಳಿಸಬೇಕು ಎಂದು ಒತ್ತಾಯಿಸಿದರು.

**ಸಿಂಧನೂರು ಸಚಿವ ಸ್ಥಾನ ಕುರಿತು**

ಇದೇ ವೇಳೆ ರಾಜ್ಯ ಸರ್ಕಾರದ ಸಚಿವ ಸಂಪುಟ ವಿಸ್ತರಣೆ ಅಥವಾ ಬದಲಾವಣೆ ಕುರಿತ ಪತ್ರಕರ್ತರ ಪ್ರಶ್ನೆಗೆ ಪ್ರತಿಕ್ರಿಯಿಸಿದವರು, ಶಾಸಕ ಹಂಪನಗೌಡ ಬಾದರ್ಲಿ ಅವರು ನನ್ನ ಮಾತು ಕೇಳಲಿಲ್ಲ. ಅವರು ನಮ್ಮ ಪಕ್ಷದಲ್ಲೇ ಇದ್ದಿದ್ದರೆ ಇಂದು ಅವರ ಮನೆ ಬಾಗಿಲಿಗೆ ಸಚಿವ ಸ್ಥಾನ ಬರುತ್ತಿತ್ತು. ಮುತುವರ್ಜಿ ವಹಿಸಿ ನಾನೇ ಅವರಿಗೆ ಸಚಿವರನ್ನಾಗಿ ಮಾಡುತ್ತಿದ್ದೆ, ಆದರೆ ಅವರು ನಮ್ಮ ಪಕ್ಷ ಬಿಟ್ಟು ಕಾಂಗ್ರೆಸ್ ಸರ್ಕಾರಕ್ಕೆ ಹೋಗಿದ್ದಾರೆ, ಮುಂದಾದರೂ ಸಚಿವ ಸ್ಥಾನ ದೊರೆಯಲಿ ಎಂದು ಹೇಳಿದರು.

ಈ ಸಂಧರ್ಭದಲ್ಲಿ ಜೆಡಿಎಸ್ ಮುಖಂಡರಾದ ಅರ್ಜುನ್ ನಾಡಗೌಡ, ಇಇ ಸತ್ಯನಾರಾಯಣ, ಎಇಇ ದಾವಲ್ ಸಾಬ್, ಜೆಡಿಎಸ್ ಪಕ್ಷದ ನಗರ ಘಟಕ ಅಧ್ಯಕ್ಷರಾದ ರವಿ ಪನ್ನೂರ್, ಧರ್ಮನಗೌಡ ಮಲ್ಕಾಪುರ್, ವೆಂಕಟೇಶ್ ನಂಜಲದಿನ್ನಿ, ಅಂಬರೀಶ್ ಮುಳ್ಳೂರ್, ಚಂದ್ರುಶೇಖರ ಮೈಲಾರ, ವೆಂಕೋಬ ಕಲ್ಲೂರು, ಅಲ್ಲಮಪ್ರಭು ಪೂಜಾರ್, ವೀರೇಶ ಕೋರಿ ಉದ್ಬಾಳ್, ಮಹಾವೀರ ಶೇಟ್, ವೆಂಕಟೇಶ್ ಗಿರಿಜಾಲಿ, ಎಸ್ ಬಿ ರೆಡ್ಡಿ, ತಿಮ್ಮಣ್ಣ ನಾಯಕ ರಾಮತ್ನಾಳ, ಜಗದೀಶ್ ವಕೀಲ್, ಪಂಪಾಪತಿ ,ಹಂಚಿನಾಳ ರಫಿ ಕುನ್ನಟಗಿ, ಆಸಿಫ್ ಸೇರಿದಂತೆ ಇತರು ಇದ್ದರು.

# ಸಂಘಟನೆ ಗ್ರಾಮ ಮಟ್ಟಕ್ಕೂ ತಲುಪಲಿ: ಯತೀಂದ್ರ ಸಿದ್ದರಾಮಯ್ಯ

• ಮಲ್ಲಮ್ಮ ನುಡಿ ವಾರ್ತೆ ಬೀದರ್



ಅಹಿಂದ ಸಮುದಾಯಗಳ ಸಂಘಟನೆಯು ಬರೀ ರಾಷ್ಟ್ರ, ರಾಜ್ಯ ಹಾಗೂ ಜಿಲ್ಲಾ ಮಟ್ಟಕ್ಕಷ್ಟೇ ಸೀಮಿತವಾಗದೆ ತಾಲೂಕು ಮತ್ತು ಗ್ರಾಮ ಮಟ್ಟಕ್ಕೂ ತಲುಪಬೇಕು. ಶೋಷಿತ ವರ್ಗದ ನಾವೆಲ್ಲರೂ ನಮ್ಮ ಮೇಲೆ ಆಗುವ ಪರಸ್ಪರ ಅನ್ಯಾಯದ ವಿರುದ್ಧ ಒಗ್ಗಟ್ಟಾಗಿ ನಿಂತು, ಗ್ರಾಮ ಪಂಚಾಯತಿಯಿಂದ ಹಿಡಿದು ಎಲ್ಲಾ ಹಂತಗಳಲ್ಲೂ ರಾಜಕೀಯ ಶಕ್ತಿಯನ್ನು ಪಡೆದುಕೊಂಡಾಗ ಮಾತ್ರ ನಮಗೆ ಸಿಗಬೇಕಾದ ಸಮಾನ ಹಕ್ಕುಗಳನ್ನು ಪಡೆಯಲು ಹಾಗೂ ಸಮಾಜದ ಮುಖ್ಯವಾಹಿನಿಗೆ ಬರಲು ಸಾಧ್ಯ ಎಂದು ನಗರಾಭಿವೃದ್ಧಿ ಸಚಿವ ಯತೀಂದ್ರ ಸಿದ್ದರಾಮಯ್ಯ ಹೇಳಿದರು.

ಅವರು ಮಂಗಳವಾರ ನಗರದ ಡಾ. ಚನ್ನಬಸವ ಪಟ್ಟದೇವರ ರಂಗಮಂದಿರದಲ್ಲಿ ಕರ್ನಾಟಕ ರಾಜ್ಯ ಶೋಷಿತ ಸಮುದಾಯಗಳ ಒಕ್ಕೂಟ (ಅಹಿಂದ) ಜಿಲ್ಲಾ ಶಾಖೆ ಬೀದರ ವತಿಯಿಂದ ಆಯೋಜಿಸಿದ ಶೋಷಿತ ಸಮುದಾಯಗಳ ಮುಖಂಡರ ಸಮಾವೇಶ ಹಾಗೂ ನಗರಾಭಿವೃದ್ಧಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ರವರಿಗೆ ಅಭಿನಂದನಾ ಸಮಾರಂಭ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ನಾನು ಮಂತ್ರಿಯಾದ ಮೇಲೆ ಅಹಿಂದ ವರ್ಗಗಳನ್ನು ಮತ್ತೆ ಸಂಘಟನೆ ಮಾಡಬೇಕು ಎಂಬ ಉದ್ದೇಶದಿಂದ ವಾರಕ್ಕೆ ಒಂದು ಜಿಲ್ಲೆಯಲ್ಲಿ ಸಮಾವೇಶ ನಡೆಸಬೇಕು ಎಂದು ನಿರ್ಧರಿಸಿದ್ದೆ ಅದರಂತೆ ಇಲ್ಲಿನ ಮುಖಂಡರೊಂದಿಗೆ ಸಮಾಲೋಚನೆ ನಡೆಸಿದಾಗ ನಮ್ಮಲ್ಲಿ ಅಹಿಂದ ಸಂಘಟನೆ ಬಲಿಷ್ಠವಾಗಿದೆ ಆದ್ದರಿಂದ ಬೀದರನಿಂದ ಪ್ರಾರಂಭಿಸುವಂತೆ ಮನವಿ ಮಾಡಿದರು ಈ ಹಿನ್ನಲೆಯಲ್ಲಿ ಬೀದರನಲ್ಲಿ ಶೋಷಿತ ಸಮುದಾಯಗಳ ಮುಖಂಡರ ಸಮಾವೇಶವನ್ನು ಹಮ್ಮಿಕೊಳ್ಳಲಾಗಿದೆ. ಶತಮಾನಗಳಿಂದ ನಡೆಯುತ್ತಿರುವ ಶೋಷಣೆ ಮತ್ತು ಜಾತಿ ವ್ಯವಸ್ಥೆಯ ವಿರುದ್ಧ ಬುದ್ಧ, ಬಸವಣ್ಣ, ಬಾಬಾಸಾಹೇಬ್ ಅಂಬೇಡ್ಕರ್, ದೇವರಾಜ ಅರಸು ಮತ್ತು ವಿ.ಪಿ. ಸಿಂಗ್‌ರಂತಹ ಮಹಾನಾಯಕರು ನಿರಂತರ ಹೋರಾಟ ನಡೆಸಿದ್ದಾರೆ.

"ರಾಜಕೀಯ ಶಕ್ತಿಯೇ ಸಾಮಾಜಿಕ ಮತ್ತು ಆರ್ಥಿಕ ಸಬಲೀಕರಣಕ್ಕೆ ಮೂಲ ಕೀಲಿ ಕೈ" ಎಂಬ ಸಂವಿಧಾನ ಶಿಲ್ಪಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಮಾತಿನಂತೆ, ಅಹಿಂದ (ಅಲ್ಪಸಂಖ್ಯಾತರು, ಹಿಂದುಳಿದವರು, ದಲಿತರು) ವರ್ಗಗಳಲ್ಲಿ ರಾಜಕೀಯ ಜಾಗೃತಿ ಮೂಡಿಸಿ ಒಗ್ಗೂಡಿಸುವ ಕೆಲಸವನ್ನು ನಮ್ಮ ತಂದೆಯವರಾದ ಸಿದ್ದರಾಮಯ್ಯನವರು ಮಾಡಿದ್ದಾರೆ. ಸಮಾಜದಲ್ಲಿ ಸಮಾನತೆ ತರಲು ಸಂವಿಧಾನದ ರಕ್ಷಣೆ ಮತ್ತು ಜಾತಿ ಸಮೀಕ್ಷೆಯ ವರದಿ ಅನುಷ್ಠಾನಕ್ಕೆ ತರುವುದು ಹಾಗೂ ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಪಡೆಯುವುದು ಅತ್ಯಗತ್ಯ ಆದ್ದರಿಂದ ಮುಂದಿನ ದಿನಗಳಲ್ಲಿ ಎಲ್ಲರೂ ಒಗ್ಗಟ್ಟಾಗಿ ನಮ್ಮ ಹಾಕ್ಕಿಗಾಗಿ ಹೋರಾಟ ಮಾಡೋಣ ಎಂದರು.

ಸಂವಿಧಾನ ಪೀಠಿಕೆ ಓದುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಸಂಸದ ಸಾಗರ ಖಂಡ್ರೆ, ಅಹಿಂದ ಸಮುದಾಯಗಳಿಗೆ ಶಕ್ತಿ ತುಂಬುವ ಕೆಲಸ ನಾವು ಮಾಡಬೇಕಿದೆ. ಈಗಾಗಲೇ ಬೀದರ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರ ಹಾಗೂ ಬಿದರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸ್ಥಾನವನ್ನು ಅಹಿಂದ ವರ್ಗದವರಿಗೆ ನೀಡಬೇಕು ಎಂದು ನಾನು ವೀಕ್ಷಕರ ಮುಂದೆ ನನ್ನ ಅಭಿಪ್ರಾಯವನ್ನು ಮಂಡಿಸಿದ್ದೇನೆ ವರಿಷ್ಠರ ಗಮನಕ್ಕೆ ತರುತ್ತೇನೆ. ನಮ್ಮ ತಾತ ಭೀಮಣ್ಣ ಖಂಡ್ರೆಯವರು ಹಾವನೂರ್ ವರದಿಯನ್ನು ಸುಟ್ಟು ಹಾಕಿದ್ದು ಲಿಂಗಾಯತರಿಗೆ ಅನ್ಯಾಯ ಆಗಿದೆ ಅಂತ ಹೊರತು ಶೋಷಿತ ಸಮುದಾಯಗಳಿಗೆ ಹಕ್ಕು ಸಿಗಬಾರದು ಅಂತ ಅಲ್ಲ ಆದ್ದರಿಂದ ಯಾರು ಈ ತಪ್ಪು ಸಂದೇಶ್ ರವಾನಿಸಬಾರದು ಎಂದರು.

ಶೋಷಿತ ಸಮುದಾಯ ಒಕ್ಕೂಟದ ಪ್ರಧಾನ ಸಂಚಾಲಕರಾದ ಕೆ.ಎಂ ರಾಮಚಂದ್ರ ಮಾತನಾಡಿ, ಇಲ್ಲಿ ಸಾಮಾನ್ಯ ಜನರಿಗೆ ಅವಕಾಶ ಸಿಗಲ್ಲ, ನಮ್ಗೆ ಅವಕಾಶ ಸಿಗಬೇಕು ಅಂದ್ರೆ ನಾವು ಸಂಘಟಿತರಾಗಿ ಹೋರಾಟ ಮಾಡಬೇಕಾಗುತ್ತದೆ. ಕೆಲವು ದಿನಗಳ ಹಿಂದೆ ದೆಹಲಿಯಲ್ಲಿ ನಡೀತಲ್ಲ ಕೋಕ್ರೋಚ್ ಜನತಾ ಪಾರ್ಟಿ ಹೋರಾಟ ಆ ಮಾದರಿಯಲ್ಲಿ ಹೋರಾಟ ಮಾಡಿದರೆ ಮಾತ್ರ ನಮಗೆ ಅವಕಾಶಗಳು ಸಿಗುತ್ತವೆ ಎನ್ನುವುದನ್ನು ನಾವು ಅರ್ಥ ಮಾಡಿಕೊಳ್ಳಬೇಕು. ಸಂವಿಧಾನಬದ್ಧ ಸಮಾನತೆ, ಆರ್ಥಿಕ ಸಬಲತೆಗಾಗಿ ಶೋಷಿತ ಸಮುದಾಯಗಳು ಒಗ್ಗಟ್ಟಾಗಬೇಕು. ಅಂದು ದೇವರಾಜ ಅರಸು ಹಾವನೂರು ವರದಿ ಜಾರಿಗೆ ತಂದಾಗ, ಭೀಮಣ್ಣ ಖಂಡ್ರೆಯವರು ವಿಧಾನಸಭೆಯಲ್ಲಿ ಆ ವರದಿಯನ್ನು ಸುಟ್ಟು ವಿರೋಧಿಸಿದ್ದರು. ಬಳಿಕ ಸಿದ್ದರಾಮಯ್ಯ ಅಹಿಂದ ವರ್ಗಗಳಿಗೆ ದೊಡ್ಡ ಕೊಡುಗೆ ನೀಡಿದ್ದಾರೆ. ಮುಂದಿನ ದಿನಗಳಲ್ಲಿ ನಮ್ಮ ಹಕ್ಕುಗಳಿಗಾಗಿ ತೀವ್ರ ಸಂಘಟಿತ ಹೋರಾಟ ಅಗತ್ಯ ಎಂದರು.

# ಶಿಶುವಿಗೊಂದು ಸಸಿ ಅಭಿಯಾನಕ್ಕೆ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ಬೀದರ್



ಅಖಿಲ ಕರ್ನಾಟಕ ರಾಜ್ಯ ಸರಕಾರಿ ಮಹಿಳಾ ನೌಕರರ ಸಂಘ ಹಾಗೂ ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ ಇವರ ಸಂಯುಕ್ತ ಆಶ್ರಯದಲ್ಲಿ ಹಮಿಲಾಪೂರ ಗ್ರಾಮದಲ್ಲಿ "ಶಿಶುವಿಗೊಂದು ಸಸಿ" ಎಂಬ ವಿನೂತನ ಪರಿಸರ ಜಾಗೃತಿ ಅಭಿಯಾನಕ್ಕೆ ಚಾಲನೆ ನೀಡಲಾಯಿತು.

ಅಭಿಯಾನಕ್ಕೆ ಶ್ರೀಮತಿ ಬಿ.ಜೆ. ಪಾರ್ವತಿ ವಿ. ಸೋನಾರೆ ಹಾಗೂ ಅಶ್ವಿನಿ ರುಕಮಂಪೂರ ಅವರು ಚಾಲನೆ ನೀಡಿ, ಗರ್ಭಿಣಿಯರಿಗೆ ವಿವಿಧ ಜಾತಿಯ ಸಸಿಗಳನ್ನು ವಿತರಿಸಿದರು. ಈ ವೇಳೆ ಗರ್ಭಿಣಿಯರ ಆರೋಗ್ಯ ವಿಚಾರಿಸಿ, ಗರ್ಭಾವಸ್ಥೆಯಲ್ಲಿ ಅನುಸರಿಸಬೇಕಾದ ಆರೋಗ್ಯಕರ ಜೀವನಶೈಲಿ, ಪೌಷ್ಟಿಕ ಆಹಾರ ಸೇವನೆ, ಅಗತ್ಯ ಮುನ್ನೆಚ್ಚರಿಕೆ ಕ್ರಮಗಳು ಹಾಗೂ ತಾಯಿ ಮಗುವಿನ ಆರೋಗ್ಯದ ಕುರಿತು ಸಮಗ್ರ ಮಾಹಿತಿ ನೀಡಿದರು.

ಅಖಿಲ ಕರ್ನಾಟಕ ರಾಜ್ಯ ಸರಕಾರಿ ಮಹಿಳಾ ನೌಕರರ ಸಂಘದ ಜಿಲ್ಲಾಧ್ಯಕ್ಷೆ ಶ್ರೀಮತಿ ಪಾರ್ವತಿ ಸೋನಾರೆ ಅವರು ಮಾತನಾಡಿ ಗರ್ಭದಲ್ಲಿ ಬೆಳೆಯುತ್ತಿರುವ ಶಿಶುವಿನ ಹೆಸರಿನಲ್ಲಿ ಒಂದು ಸಸಿಯನ್ನು ನೆಟ್ಟು, ಅದನ್ನು ಪ್ರತಿದಿನ ನೀರೆರೆದು ಪೋಷಿಸುವಂತೆ ಗರ್ಭಿಣಿಯರಿಗೆ ಮನವಿ ಮಾಡಿದರು. ಹೀಗೆ ಮಾಡುವುದರಿಂದ ಮಗುವಿನ ಜನನಕ್ಕೂ ಮುನ್ನವೇ ಪ್ರಕೃತಿಯೊಂದಿಗೆ ಭಾವನಾತ್ಮಕ ನಂಟು ಬೆಳೆಸುವ ಅವಕಾಶ ದೊರೆಯುತ್ತದೆ. ಜೊತೆ-ಗೆ, ಮಗು ಜನಿಸಿದ ಬಳಿಕ "ಇದು ನಿನ್ನ ಗಿಡ" ಎಂದು ತಿಳಿಸಿ ಅದರ ಕೈಯಿಂದಲೇ ಗಿಡಕ್ಕೆ ನೀರು ಹಾಕಿಸುವ ಮೂಲಕ ಪರಿಸರ ಸಂರಕ್ಷಣೆ ಮತ್ತು ನಿಸರ್ಗ ಪ್ರೀತಿಯ ಮೌಲ್ಯಗಳನ್ನು ಬಾಲ್ಯದಿಂದಲೇ ಬೆಳೆಸಬಹುದು, ನಾವು ಇಡೀ ಜಿಲ್ಲೆ ತುಂಬೆಲ್ಲಾ ಸುತ್ತಾಡಿ ಒಟ್ಟಾರೆ 5 ಸಾವಿರ ಸಸಿ ಗರ್ಭಿಣಿಯರಿಗೆ ವಿತರಿಸುವ ಗುರಿ ಹೊಂದಿದ್ದೇವೆ ಎಂದು ಅವರು ತಿಳಿಸಿದರು. ಪರಿಸರ ಪ್ರೇಮಿ ಅಶ್ವಿನಿ ರುಕಮಂಪೂರ ಅವರು ಮಾತನಾಡಿ ಮುಂದಿನ ಪೀಳಿಗೆಗೆ ಹಸಿರೇ ಉಸಿರು ಎಂಬ ಅಮೂಲ್ಯ ಆಸ್ತಿಯನ್ನು ಉಳಿಸಿ ಬೆಳಸುವ ಸಂಕಲ್ಪದೊಂದಿಗೆ ಈ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ. ಪ್ರತಿಯೊಂದು ಕುಟುಂಬವೂ ಒಂದು ಮಗುವಿನೊಂದಿಗೆ ಒಂದು ಗಿಡವನ್ನು ಬೆಳೆಸಿದರೆ ಪರಿಸರ ಸಂರಕ್ಷಣೆಗೆ ಮಹತ್ತರ ಕೊಡುಗೆ ನೀಡಿದಂತಾಗುತ್ತದೆ ಎಂದು ಅವರು ಅಭಿಪ್ರಾಯಪಟ್ಟರು. ಅದೇ ಸಂದರ್ಭದಲ್ಲಿ ಆಶಾ ಕಾರ್ಯಕರ್ತೆ ಗೀತಾ ಉಪಸ್ಥಿತರಿದ್ದು, ಗರ್ಭಿಣಿಯರಿಗೆ ಆರೋಗ್ಯ ಸಂಬಂಧಿತ ಮಾಹಿತಿ ಮತ್ತು ಮಾರ್ಗದರ್ಶನ ನೀಡಿದರು.

# ಸರಕಾರಿ ಪಡಿತರ ವಿತರಕರ ಸಂಘದಿಂದ ವಿವಿಧ ಬೇಡಿಕೆಗಳ ಮನವಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು




ಕರ್ನಾಟಕ ರಾಜ್ಯ ಸರಕಾರಿ ಪಡಿತರ ವಿತರಕರ ಸಂಘ (ರಿ) ವತಿಯಿಂದ ಬೆಂಗಳೂರಿನ ಬಾಬು ಜಗಜೀವನ ರಾಮ್ ಲಿಡ್ಕರ್ ಭವನದಲ್ಲಿ ಬುಧವಾರ ನಡೆದ ರಾಜ್ಯ ಮಟ್ಟದ ಸಭೆಯಲ್ಲಿ ಗಂಗಾವತಿ ತಾಲೂಕು ಸರಕಾರಿ ಪಡಿತರ ವಿತರಕರ ಸಂಘದ ಪದಾಧಿಕಾರಿಗಳು ಭಾಗವಹಿಸಿ ಸಭೆಯನ್ನು ಯಶಸ್ವಿಗೊಳಿಸಿದರು.

ಸಭೆಯಲ್ಲಿ ಪಡಿತರ ವಿತರಕರು ಎದುರಿಸುತ್ತಿರುವ ವಿವಿಧ ಸಮಸ್ಯೆಗಳ ಕುರಿತು ರಾಜ್ಯಾಧ್ಯಕ್ಷರು ಹಾಗೂ ರಾಷ್ಟ್ರೀಯ ಕಾರ್ಯಾಧ್ಯಕ್ಷರ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.

**ಪ್ರಮುಖ ಬೇಡಿಕೆಗಳು**

ಪ್ರಸ್ತುತ ಬೆಳಿಗ್ಗೆ 6 ಗಂಟೆಯಿಂದ ರಾತ್ರಿ 10 ಗಂಟೆಯವರೆಗೆ ನಿಗದಿಪಡಿಸಿರುವ ಪಡಿತರ ವಿತರಣೆಯ ಸಮಯವನ್ನು ಮರುಪರಿಶೀಲಿಸಿ, ಹಿಂದಿನಂತೆ ಅನುಕೂಲಕರ ಸಮಯ ನಿಗದಿಪಡಿಸಬೇಕು.

ಪಡಿತರ ವಿತರಣೆಯ ವೇಳೆ ಸರ್ವರ್ ಮತ್ತು ಬಯೋಮೆಟ್ರಿಕ್ ವ್ಯವಸ್ಥೆ ಸುಗಮವಾಗಿ ಕಾರ್ಯನಿರ್ವಹಿಸುವಂತೆ ಕ್ರಮ ಕೈಗೊಳ್ಳಬೇಕು.

ಸುಮಾರು 7□8 ವರ್ಷಗಳಿಂದ ಬಾಕಿ ಇರುವ ಇ-ಕೆವೈಸಿ (e-KYC) ಪ್ರೋತ್ಸಾಹಧನವನ್ನು ತಕ್ಷಣ ಬಿಡುಗಡೆ ಮಾಡಬೇಕು.

ಬಯೋಮೆಟ್ರಿಕ್ ನೀಡಲು ಸಾಧ್ಯವಾಗದ ವಯೋವೃದ್ಧರು ಹಾಗೂ ಅಂಗವಿಕಲರಿಗೆ ಆಧಾರ್ OTP ಮೂಲಕ ಪಡಿತರ ಪಡೆಯಲು ಶಾಶ್ವತ ಅವಕಾಶ ಕಲ್ಪಿಸಬೇಕು.

ನ್ಯಾಯಬೆಲೆ ಅಂಗಡಿ ಮಾಲೀಕರಿಗೆ ಸೂಕ್ತ ಭದ್ರತೆ ಒದಗಿಸಿ, ಕಮಿಷನ್ ಹೆಚ್ಚಳ ಮಾಡಬೇಕು.

ಮನವಿಯಲ್ಲಿ ಪಡಿತರ ವಿತರಕರು ಸಾರ್ವಜನಿಕ ಸೇವೆಯಲ್ಲಿ ಅನೇಕ ಒತ್ತಡ ಹಾಗೂ ತಾಂತ್ರಿಕ ಸಮಸ್ಯೆಗಳನ್ನು ಎದುರಿಸುತ್ತಿದ್ದು, ಸರ್ಕಾರ ಈ ಎಲ್ಲ ಬೇಡಿಕೆಗಳನ್ನು ಗಂಭೀರವಾಗಿ ಪರಿಗಣಿಸಿ ಶೀಘ್ರದಲ್ಲಿ ಅನುಕೂಲಕರ ಆದೇಶಗಳನ್ನು ಹೊರಡಿಸಬೇಕೆಂದು ಆಗ್ರಹಿಸಲಾಗಿದೆ.

ಸಭೆಯಲ್ಲಿ ಗಂಗಾವತಿ ತಾಲೂಕು ಸರಕಾರಿ ಪಡಿತರ ವಿತರಕರ ಸಂಘದ ಅಧ್ಯಕ್ಷ ಕೆ. ಮಂಜುನಾಥ್, ಉಪಾಧ್ಯಕ್ಷ ಎಂ.ಪಿ. ಪಂಪನಗೌಡ, ಕೋಶಾಧ್ಯಕ್ಷ ರಾಜಶೇಖರ್ ಬೆಳಗೋಡು, ಕಾರ್ಯದರ್ಶಿ ಹೆಚ್. ವೀರಭದ್ರಪ್ಪ, ನಿರ್ದೇಶಕರಾದ ಚೆನ್ನಯ್ಯಸ್ವಾಮಿ, ವಸಂತಗೌಡ, ವಿ.ಬಿ. ನಜೀರ್ ಸೇರಿದಂತೆ ತಾಲೂಕಿನ ಹಲವು ಪಡಿತರ ವಿತರಕರು ಭಾಗವಹಿಸಿದ್ದರು. ಸಭೆಯನ್ನು ಯಶಸ್ವಿಗೊಳಿಸಲು ಎಲ್ಲ ಪದಾಧಿಕಾರಿಗಳು ಸಕ್ರಿಯವಾಗಿ ಸಹಕರಿಸಿದರು.

# ಡಿಸಿಸಿ ಬ್ಯಾಂಕ್ ಸಾರ್ವಜನಿಕ ಪ್ರಾಧಿಕಾರ ಎಂದು ಘೋಷಣೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಕಲಬುರಗಿ ಮತ್ತು ಯಾದಗಿರ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್‌ನ್ನು ಸಾರ್ವಜನಿಕ ಪ್ರಾಧಿಕಾರ ಎಂದು ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ಆಯುಕ್ತರಾದ ಬಿ.ವೆಂಕಟಿಸಿಂಗ್ ಮಹತ್ವದ ತೀರ್ಪು ನೀಡಿದ್ದಾರೆ.

ರಾಜಕುಮಾರ ಆಳಂದ ಎನ್ನುವವರು ಮಾಹಿತಿ ಹಕ್ಕು ಅಧಿನಿಯಮ 6(1) ರಡಿ ತಾವು ಕಲಬುರಗಿ ಯಾದಗಿರಿ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ಆಳಂದ ಶಾಖೆಗೆ 25.01.2022 ರಂದು ಬರೆದ ಪತ್ರದ ಬಗ್ಗೆ, ಕೈಗೊಂಡ ಕ್ರಮಗಳ ಕುರಿತು ಮಾಹಿತಿ ನೀಡುವಂತೆ ಕೋರಿದ್ದರು.

ಮೇಲ್ಮನವಿದಾರು ಕೋರಿದ ಮಾಹಿತಿಗೆ ಸಂಬಂಧಿಸಿದಂತೆ ಕಲಬುರಗಿ-ಯಾದಗಿರಿ ಜಿಲ್ಲಾ ಸಹಕಾರಿ ಕೇಂದ್ರ ಬ್ಯಾಂಕ್‌ನ ಆಳಂದ ಶಾಖೆ ವ್ಯವಸ್ಥಾಪಕರು ಹಾಗೂ ಪ್ರಥಮ ಮೇಲ್ಮನವಿ ಪ್ರಾಧಿಕಾರವಾದ ಕಲಬುರಗಿ-ಯಾದಗಿರ ಜಿಲ್ಲಾ ಸಹಕಾರಿ ಕೇಂದ್ರ ಬ್ಯಾಂಕ್ ಪ್ರಧಾನ ಕಛೇರಿಯ ಸಾರ್ವಜನಿಕ ಮಾಹಿತಿ ಅಧಿಕಾರಿ ಪತ್ರ ಬರೆದು ನೀಡಿ ತಮ್ಮ ಬ್ಯಾಂಕ್ ಸರ್ಕಾರ ದಿಂದ ಯಾವುದೇ ರೀತಿಯಲ್ಲಿ ಗಣನೀಯ ಪ್ರಮಾಣದ ಆರ್ಥಿಕ ನೇರವು ಪಡೆದಿಲ್ಲ. ಹೀಗಾಗಿ ತಮ್ಮ ಬ್ಯಾಂಕ್ ಸಾರ್ವಜನಿಕ ಪ್ರಾಧಿಕಾರ ಅಲ್ಲಾ ತಾವು ಮಾಹಿತಿ ಹಕ್ಕು ಅಧಿನಿಯಮ 2005ರಡಿ ವ್ಯಾಪ್ತಿಗೆ ಬರುವುದಿಲ್ಲ ಎಂದು ಸಮರ್ಥಿಸಿಕೊಂಡಿದ್ದರು.

ಪ್ರತಿವಾದಿ ಬ್ಯಾಂಕ್ ಬರೆದ ಪತ್ರ ದಿಂದ ತೃಪ್ತರಾಗದ ಮೇಲ್ಮನವಿದಾರ ರಾಜಕುಮಾರ ಆಳಂದ ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದಲ್ಲಿ ದ್ವಿತೀಯ ಮೇಲ್ಮನವಿ ಸಲ್ಲಿಸಿದ್ದರು.

ಮೇಲ್ಮನವಿದಾರು ಸಲ್ಲಿಸಿದ ದ್ವಿತೀಯ ಮೇಲ್ಮನವಿ ವಿಚಾರಣೆ ಕೈಗೆತ್ತಿಕೊಂಡ ಆಯೋಗವು ವಿಚಾರಣೆ ನಡೆಸಿ, ಕೊನೆಗೆ ದಿನಾಂಕ:30.07.2026 ರಂದು ಕಲಬುರಗಿ ಯಾದಗಿರ ಡಿ.ಸಿ.ಸಿ. ಬ್ಯಾಂಕ್ ಸಾರ್ವಜನಿಕ ಪ್ರಾಧಿಕಾರ ಎಂದು ಘೋಷಿಸಿ ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ಆಯುಕ್ತರಾದ ಬಿ.ವೆಂಕಟ್ ಸಿಂಗ್ ಮಹತ್ವದ ತೀರ್ಪು ನೀಡಿ ಆದೇಶಿಸಿದ್ದಾರೆ. ಕಲಬುರಗಿ-ಯಾದಗಿರ ಡಿ.ಸಿ.ಸಿ. ಬ್ಯಾಂಕ್ ಸರ್ಕಾರದಿಂದ ಗಣನೀಯ ಪ್ರಮಾನದಲ್ಲಿ 'ಆರ್ಥಿಕ ನೇರವು ಪಡೆಯುತ್ತಿಲ್ಲವಾದರೂ ಬ್ಯಾಂಕ್ ವ್ಯವಹಾರಗಳು, ಸರ್ಕಾರದ ನಿಯಮಗಳು, ನಿರ್ದೇಶನಗಳು ಸೂಚನೆ ಮೇರೆಗೆ ನಡೆಸುತ್ತಿದೆ. ಆದ್ದರಿಂದ ಪ್ರತಿವಾದಿ ಬ್ಯಾಂಕ್ ಸಾರ್ವಜನಿಕ ಪ್ರಾಧಿಕಾರವಾಗಿದೆ ಎಂದು ಆಯೋಗವು ತೀರ್ಪು ನೀಡಿದೆ.

ಪ್ರತಿವಾದಿ ಬ್ಯಾಂಕ್‌ಗೆ ಸರ್ಕಾರದಿಂದ ಷೇರು ಬಂಡವಾಳ ಬಿಡುಗಡೆ ಆಗಿದೆ. ಬ್ಯಾಂಕ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಹಾಗೂ ವ್ಯವಸ್ಥಾಪಕ ನಿರ್ದೇಶಕರು ಸರ್ಕಾರದಿಂದ ನೇಮಿಸಲ್ಪಟ್ಟವರಾಗಿರುತ್ತಾರೆ, ಬ್ಯಾಂಕ್‌ನಲ್ಲಿ ಅಕ್ರಮ ಜರುಗಿದರೆ ಸಹಕಾರ ಇಲಾಖೆ ವತಿಯಿಂದ ಅಧಿಕಾರಿಗಳ ತಂಡ ರಚಿಸಿ ತನಿಖೆಗೊಳಪಡಿಸಿ, ಅದರಲ್ಲಿ ಆರೋಪ ಸಾಬೀತಾದಲ್ಲಿ ಸದರಿ ಬ್ಯಾಂಕ್‌ನ್ನು ಸುಪರಸೀಡ್ ಮಾಡುವ ಅಧಿಕಾರ ಸರ್ಕಾರವು ಹೊಂದಿರುತ್ತದೆ.

ಪ್ರತಿವಾದಿ ಬ್ಯಾಂಕ್‌ಗೆ ಸರ್ಕಾರದಿಂದ ಅಧಿಕಾರೇತರ ಒಬ್ಬ ಸದಸ್ಯ ಹಾಗೂ ಅಧಿಕಾರಿಯೊಬ್ಬರನ್ನು ಆಡಳಿತಮಂಡಳಿಗೆ ಸದಸ್ಯರೆಂದು ನಾಮಕರಣ ಮಾಡುತ್ತಿದೆ. ನಬಾರ್ಡ್ ನಿಂದ ರೈತರಿಗೆ ವಿತರಿಸಲು ಪ್ರತಿವಾದಿ ಬ್ಯಾಂಕ್ ಸಾಲ ಪಡೆದು ರೈತರಿಗೆ ವಿತರಿಸುವ ಸಾಲದ ಬಡ್ಡಿ ಸರ್ಕಾರವೇ ಪಾವತಿ ಮಾಡುತ್ತಿದೆ. ಸರ್ಕಾರ ರೈತರ ಸಾಲ ಮನ್ನಾ ಮಾಡಿದರೆ ಸದರಿ ಸಾಲ ಪ್ರತಿವಾದಿ ಬ್ಯಾಂಕ್‌ಗೆ ಸರ್ಕಾರವೇ ಪಾವತಿ ಮಾಡುತ್ತಿದೆ. ಪ್ರತಿವಾದಿ ಬ್ಯಾಂಕ್ ಸಿಬ್ಬಂದಿ ನೇಮಕಾತಿ ಸರ್ಕಾರದ ಅನುಮತಿ ಪಡೆದು ನಡೆಸಲಾಗುತ್ತದೆ ಹಾಗೂ ಆ ಪ್ರಕ್ರಿಯೆಯಲ್ಲಿ ಸರ್ಕಾರದ ಒಬ್ಬ ಪ್ರತಿನಿಧಿ ಇರುತ್ತಾರೆ. ಕೇಂದ್ರ ಹಾಗೂ ರಾಜ್ಯ ಸರ್ಕಾರದ ವರೋಕ್ಷ ನಿಯಂತ್ರಣದಲ್ಲಿರುವ ನಬಾರ್ಡ್ ಮತ್ತು ಅಪೆಕ್ಸ್ ಬ್ಯಾಂಕ್‌ನವರು ಪ್ರತಿವಾದಿ ಬ್ಯಾಂಕ್ ವ್ಯವಹಾರದ ಬಗ್ಗೆ, ಪ್ರತಿ ವರ್ಷ ಪರಿಶೀಲನೆ ಮಾಡಿ, ಸರ್ಕಾರದ ಸಹಕಾರ ಸಂಘದ ನಿಬಂಧಕರಿಗೆ ವರದಿ ನೀಡುತ್ತಾರೆ. ಹೀಗಾಗಿ ಮೇಲಿನ ಎಲ್ಲಾ ಅಂಶಗಳು ಸೇರಿದಂತೆ ಕರ್ನಾಟಕ ಮಾಹಿತಿ ಆಯೋಗದ ಬೆಂಗಳೂರು ಪೀಠ ಸಂಖ್ಯೆ-5 ರಲ್ಲಿ ದಾಖಲಾದ ಪ್ರಕರಣ ಸಂಖ್ಯೆ.... ...ರ ವಿಚಾರಣೆ ನಡೆಸಿ ದಿನಾಂಕ:09.02.2026 ರಂದು ತೀರ್ಪನ್ನು ಆಧರಿಸಿ ಪ್ರತಿವಾದಿ ಕಲಬುರಗಿ-ಯಾದಗಿರ ಡಿಸಿಸಿ ಬ್ಯಾಂಕ್ ಸಾರ್ವಜನಿಕ ಪ್ರಾಧಿಕಾರ ಎಂದು ಘೋಷಿಸಲಾಗಿದೆ.

ಆಯೋಗದ ಈ ತೀರ್ಪಿನ ಆಧಾರದ ಮೇಲೆ ಪ್ರತಿವಾದಿ ಬ್ಯಾಂಕ್ ಮಾಹಿತಿ ಹಕ್ಕು ಅಧಿನಿಯಮ 2005ರನ್ವಯ ಸಾರ್ವಜನಿಕ ಪ್ರಾಧಿಕಾರವಾಗಿದ್ದು, ಮಾಹಿತಿ ಹಕ್ಕು ಅಧಿನಿಯಮ 2005ರ 4(1)(ಎ) ಮತ್ತು 4(1)(ಬಿ) ಯನ್ನು ಪ್ರಕಟಿಸಲು ಕ್ರಮವಹಿಸಬೇಕು. ಹಾಗೂ ಪ್ರತಿ ಬ್ಯಾಂಕ್ ಸಾರ್ವಜನಿಕ ಮಾಹಿತಿ ಅಧಿಕಾರಿ ಹಾಗೂ ಪ್ರಥಮ ಮೇಲ್ಮನವಿ ಪ್ರಾಧಿಕಾರವನ್ನು ಘೋಷಿಸಬೇಕು ಎಂದು ನಿರ್ದೇಶನ ನೀಡಲು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಹಕಾರ ಇಲಾಖೆ, ಸಹಕಾರ ಸಂಘಗಳ ನಿಬಂಧಕರು, ಸಹಕಾರ ಇಲಾಖೆ, ಬೆಂಗಳೂರು ಹಾಗೂ ಸಹಕಾರ ಸಂಘಗಳ ಜಂಟಿ ನಿಬಂಧಕರು, ಕಲಬುರಗಿ ಇವರಿಗೆ ಆಯೋಗ ಸೂಚಿಸಿದೆ.

ಪಂಚಾಯತ್ ರಾಜ್ ಇಂಜನಿಯರಿಂಗ್ ಉಪ ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ರಾಜಕುಮಾರ ಇವರಿಗೆ ಎರಡು ಪ್ರತ್ಯೇಕ ಪ್ರಕರಣಗಳಲ್ಲಿ ತಲಾ ರೂ. 10 ಸಾವಿರದಂತೆ ಒಟ್ಟು ರೂ. 20 ಸಾವಿರಗಳ ದಂಡ ವಿಧಿಸಲಾಗಿದೆ. ಇನ್ನುಳಿದಂತೆ ಸಿರವಾರ ತಾಲೂಕ ಹರೇಹಣಗಿ ಗ್ರಾಮ ಪಂಚಾಯತಿ ಕಾರ್ಯದರ್ಶಿ ಈಶಪ್ಪ, ಸಿಂಧನೂರು ತಾಲೂಕು ಬಸ್ಸಾಪುರ ಗ್ರಾಮ ಪಂಚಾಯತಿ ಕಾರ್ಯದರ್ಶಿ ವಿಜಯಕುಮಾರ, ಶಹಪುರ ತಾಲೂಕಿನ ಖಾನಾಪುರ ಗ್ರಾಮ ಪಂಚಾಯತಿ ಕಾರ್ಯುದರ್ಶಿ ದೇವೇಂದ್ರಪ್ಪ ಹಾಗೂ ಗಂಗಾವತಿ ತಾಲೂಕಿನ ಚಿಕ್ಕ ಜಂತಕಲ್ ಗ್ರಾಮ ಪಂಚಾಯತಿ ಕಾರ್ಯದರ್ಶಿ ರವೀಂದ್ರ ಸೇರಿದಂತೆ ಈ ನಾಲ್ಕು ಜನ ಗ್ರಾಮ ಪಂಚಾಯತಿ ಕಾರ್ಯದರ್ಶಿಗಳಿಗೆ ಅನುಕ್ರಮವಾಗಿ ತಲಾ ರೂ.10 ಸಾವಿರಗಳಂತೆ ದಂಡ ವಿಧಿಸಿ ಪಾವತಿಗೆ ಆದೇಶಿಸಲಾಗಿದೆ. ದಿನಾಂಕ:24.11.2025 ರಿಂದ 31.07.2026 ರವರೆಗೆ (140 ದಿನ) ಕಲಬುರಗಿ ಪೀಠದಲ್ಲಿ ಒಟ್ಟು 5123 ಪ್ರಕರಣಗಳನ್ನು ವಿಚಾರಣೆಗೆ ಕೈಗೆತ್ತಿಕೊಂಡು ಅದರಲ್ಲಿ ಒಟ್ಟು 2448 ಪ್ರಕರಣಗಳನ್ನು ವಿಲೇವಾರಿ ಮಾಡಲಾಗಿದೆ, ಈ ಅವಧಿಯಲ್ಲಿ ಒಟ್ಟಾರೆ ರೂ. 5 ಲಕ್ಷ 93 ಸಾವಿರಗಳ ದಂಡ ವಿಧಿಸಿದ್ದು, ಅದರಲ್ಲಿ ಒಟ್ಟು ರೂ. 4 ಲಕ್ಷ 72 ಸಾವಿರಗಳ ದಂಡವನ್ನು ವಸೂಲಿ ಮಾಡಲಾಗಿದ್ದು, ರೂ. 86 ಸಾವಿರ ಪರಿಹಾರವನ್ನು ಮೇಲ್ಮನವಿದಾರರಿಗೆ ನೀಡಲು ಆದೇಶಿಸಲಾಗಿದೆ.

# ಸರ್ವ ಜನಾಂಗದ ಅಭಿವೃದ್ಧಿಗೆ ಸರ್ಕಾರ ಬದ್ಧ ಡಾ. ಯತೀಂದ್ರ



• **ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ**

ರಾಜ್ಯ ಸರ್ಕಾರವು ಜಾತಿ, ಧರ್ಮ, ವರ್ಗ ಭೇದವಿಲ್ಲದೆ ಸರ್ವ ಜನಾಂಗದ ಸಮಗ್ರ ಅಭಿವೃದ್ಧಿಗೆ ಬದ್ಧವಾಗಿದ್ದು ಸಮಾಜದ ಪ್ರತಿಯೊಂದು ವರ್ಗಕ್ಕೂ ಸಮಾನ ಅವಕಾಶ ಮತ್ತು ಸೌಲಭ್ಯಗಳನ್ನು ಒದಗಿಸಲು ಆದ್ಯತೆ ನೀಡುತ್ತಿದೆ ಎಂದು ನಗರಾಭಿವೃದ್ಧಿ ಸಚಿವ ಡಾ. ಯತೀಂದ್ರಸಿದ್ದರಾಮಯ್ಯ ಹೇಳಿದರು. ತಾಲೂಕಿನ ಕರಕನಳ್ಳಿ ಗ್ರಾಮದ ಶಿವಯೋಗಿ ಗುಂಡಪ್ಪಾ ಮುತ್ಯಾ ರವರ ಸನ್ನಿಧಾನದಾನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿ, ಸಮಾಜದ ಎಲ್ಲಾ ಸಮುದಾಯಗಳು ಶಿಕ್ಷಣ, ಆರೋಗ್ಯ, ಉದ್ಯೋಗ, ಮೂಲಸೌಕರ್ಯ ಹಾಗೂ ಸಾಮಾಜಿಕ ನ್ಯಾಯದ ಸೌಲಭ್ಯಗಳನ್ನು ಸಮಾನವಾಗಿಪಡೆಯು ವಂತಾಗಬೇಕು ಎಂಬುದು ಸರ್ಕಾರದ ಪ್ರಮುಖ ಉದ್ದೇಶವಾಗಿದೆ ಎಂದು ತಿಳಿಸಿದರು. ರಾಜ್ಯ ಸರ್ಕಾರವು ರೈತರು, ಮಹಿಳೆಯರು, ಯುವಕರು, ಕಾರ್ಮಿಕರು ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣಕ್ಕಾಗಿ ಹಲವು ಜನಪರ ಯೋಜನೆಗಳನ್ನು ಜಾರಿಗೆತಂದಿದ್ದು ಅವುಗಳ ಪ್ರಯೋಜನವನ್ನು ಪ್ರತಿಯೊಬ್ಬರೂ ಪಡೆದುಕೊಳ್ಳಬೇಕು ಎಂದು ಕರೆ ನೀಡಿದರು. ಸಾಮಾಜಿಕ ಸಾಮರಸ್ಯ, ಸಹಬಾಳ್ವೆ ಮತ್ತು ಅಭಿವೃದ್ಧಿಯೇ ರಾಜ್ಯದ ಪ್ರಗತಿಗೆ ಮೂಲಾಧಾರವಾಗಿದ್ದು, ಎಲ್ಲರೂ ಒಗ್ಗಟ್ಟಿನಿಂದ ಅಭಿವೃದ್ಧಿಯ ಪಥದಲ್ಲಿ ಸಾಗಿದಾಗ ಮಾತ್ರ ಸಮೃದ್ಧ ಕರ್ನಾಟಕ ನಿರ್ಮಾಣ ಸಾಧ್ಯ ಎಂದು ಅವರು ಅಭಿಪ್ರಾಯಪಟ್ಟರು. ಕಾರ್ಯಕ್ರಮದಲ್ಲಿ ಅಧ್ಯಕ್ಷತೆಯನ್ನು ರಾಜಪ್ಪಾ ಮುತ್ಯಾ ರವರು ವಹಿಸಿದ್ದರು, ಸಂವಿಧಾನ ಸಂರಕ್ಷಣಾ ಸಮಿತಿಯ ಪ್ರಮುಖರಾದ ಬಸವರಾಜ ಮಾಳಗೆ, ಜಿಲ್ಲಾ ಗ್ಯಾರಂಟಿ ಯೋಜನೆಯ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಅಮೃತರಾವ ಚಿಮಕೋಡೆ ಬೀಮಶಾ ಬುಡ್ಡಾ ನೀಲೇಶ ಮಳ್ಳಿ ಸಂಜುಕುಮಾರ, ಈಶ್ವರ ಉಡಬಾಳ, ವಿವಿಧ ಗಣ್ಯರು, ಜನಪ್ರತಿನಿಧಿಗಳು ಅಧಿಕಾರಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

# ಕಮಲನಗರ ಅಗ್ನಿಶಾಮಕ ಠಾಣೆ ಕಾಮಗಾರಿ ಪರಿಶೀಲಿಸಿದ ಶಾಸಕ ಪ್ರಭು ಚವ್ಹಾಣ



• **ಮಲ್ಲಮ್ಮ ನುಡಿ ವಾರ್ತೆ ಕಮಲನಗರ**

ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಕಮಲನಗರ ತಾಲ್ಲೂಕು ಕೇಂದ್ರದಲ್ಲಿ ನಿರ್ಮಾಣ ಹಂತದಲ್ಲಿರುವ ನೂತನ ಅಗ್ನಿಶಾಮಕ ಠಾಣೆಗೆ ಮಂಗಳವಾರ ರಂದು ಭೇಟಿ ನೀಡಿ ಕಾಮಗಾರಿಯನ್ನು ಪರಿಶೀಲಿಸಿದರು.

ಈ ವೇಳೆ ಅಧಿಕಾರಿಗಳಿಂದ ಕಾಮಗಾರಿಯ ಪ್ರಗತಿ ಕುರಿತು ಮಾಹಿತಿ ಪಡೆದು, ಗುಣಮಟ್ಟವನ್ನು ಕಾಯ್ದುಕೊಂಡು ನಿಗದಿತ ಅವಧಿಯೊಳಗೆ ಕಾಮಗಾರಿ ಪೂರ್ಣಗೊಳಿಸುವಂತೆ ಸೂಚಿಸಿದರು.

ಹಿಂದೆ ಕಮಲನಗರ ಪ್ರದೇಶದಲ್ಲಿ ಅಗ್ನಿ ಅವಘಡಗಳು ಸಂಭವಿಸಿದಾಗ ಅಗ್ನಿಶಾಮಕ ವಾಹನಗಳು ಔರಾದ ಅಥವಾ ಇತರ ಕೇಂದ್ರಗಳಿಂದ ಬರಬೇಕಾಗುತ್ತಿತ್ತು. ವಾಹನಗಳು ಸ್ಥಳಕ್ಕೆ ತಲುಪುವಷ್ಟರಲ್ಲಿ ಅನಾಹುತಗಳು ಸಂಭವಿಸಿ ಅಪಾರ ಪ್ರಮಾಣದ ಹಾನಿಯಾಗುತ್ತಿತ್ತು. ಈ ಸಮಸ್ಯೆಯನ್ನು ಮನಗಂಡು ಕಮಲನಗರದಲ್ಲಿಯೇ ಪ್ರತ್ಯೇಕ ಅಗ್ನಿಶಾಮಕ ಠಾಣೆ ಸ್ಥಾಪನೆಗೆ ವಿಶೇಷ ಪ್ರಯತ್ನ ಮಾಡಿ ಅನುದಾನ ಮಂಜೂರು ಮಾಡಿಸಲಾಗಿದೆ ಎಂದು ಹೇಳಿದರು.

ಆರಂಭದಲ್ಲಿ ನಿವೇಶನದ ಸಮಸ್ಯೆಯೂ ಎದುರಾಗಿತ್ತು. ಎಲ್ಲ ಅಡ್ಡಿಗಳನ್ನು ಸರಿಪಡಿಸಿದ ನಂತರ 2 ಕೋಟಿ ವೆಚ್ಚದಲ್ಲಿ ಆಧುನಿಕ ಸೌಲಭ್ಯಗಳನ್ನು ಹೊಂದಿದ ಭವ್ಯ ಅಗ್ನಿಶಾಮಕ ಠಾಣೆ ನಿರ್ಮಾಣಗೊಳ್ಳುತ್ತಿದೆ. ಕಾಮಗಾರಿ ಅಂತಿಮ ಹಂತದಲ್ಲಿದೆ. ಈ ಯೋಜನೆಯಿಂದ ಕಮಲನಗರ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಜನರಿಗೆ ಅಗ್ನಿ ಅವಘಡಗಳ ಸಂದರ್ಭದಲ್ಲಿ ತ್ವರಿತವಾಗಿ ನೆರವು ದೊರೆಯಲಿದ್ದು, ಜೀವ ಹಾಗೂ ಆಸ್ತಿಪಾಸ್ತಿಯ ನಷ್ಟವನ್ನು ತಡೆಗಟ್ಟಲು ನೆರವಾಗಲಿದೆ ಎಂದರು.

ಅಂದಾಜು ಪತ್ರಿಕೆಯಲ್ಲಿ ನಮೂದಿಸಿರುವಂತೆ ಎಲ್ಲ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕು. ಅಗ್ನಿ ಅವಘಡಗಳನ್ನು ಪರಿಣಾಮಕಾರಿಯಾಗಿ ಎದುರಿಸಲು ಹಾಗೂ ತಡೆಯಲು ಅಗತ್ಯವಿರುವ ಎಲ್ಲ ಮೂಲಸೌಕರ್ಯ ಮತ್ತು ಸುರಕ್ಷತಾ ವ್ಯವಸ್ಥೆಗಳನ್ನು ಕಲ್ಪಿಸಬೇಕು. ಕಾಮಗಾರಿಯ ಗುಣಮಟ್ಟದಲ್ಲಿ ಯಾವುದೇ ರಾಜಿ ಮಾಡಿಕೊಳ್ಳಬಾರದು. ಅಧಿಕಾರಿಗಳು ಪ್ರತಿಯೊಂದು ಹಂತದಲ್ಲೂ ನಿಗಾ ವಹಿಸಿ, ಕಾಮಗಾರಿ ಗುಣಮಟ್ಟದಿಂದ ಪೂರ್ಣಗೊಳ್ಳುವಂತೆ ನೋಡಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಶಾಸಕರು ಸೂಚಿಸಿದರು.

ಇಂದು ಮುಂದೆ ಅಗ್ನಿ ಅವಘಡಗಳು ಸಂಭವಿಸಿದರೆ ಕಮಲನಗರ ಜನತೆ ಹೆಚ್ಚು ಆತಂಕ ಪಡುವುದು ತಪ್ಪಲಿದೆ. ಅಗ್ನಿಶಾಮಕ ಠಾಣೆ ಕಾರ್ಯಾರಂಭಗೊಂಡ ಬಳಿಕ ಕಮಲನಗರ ಹಾಗೂ ಸುತ್ತಮುತ್ತಲಿನ ಪ್ರದೇಶಗಳಿಗೆ ತುರ್ತು ಸೇವೆ ತ್ವರಿತವಾಗಿ ದೊರೆಯಲಿದ್ದು, ಕಮಲನಗರದಲ್ಲಿ ಅಗ್ನಿಶಾಮಕ ಠಾಣೆಯಾಗಬೇಕು ಎನ್ನುವ ನನ್ನ ಬಹಳಷ್ಟು ದಿನಗಳ ಆಶಯ ಈಡೇರುವ ಕಾಲ ಸನ್ನಿಹಿತವಾಗಿದೆ ಎಂದು ಹೇಳಿದರು.

ಚಾಂದೋರಿ ಸೇತುವೆ ವೀಕ್ಷಣೆ: ಚಾಂದೋರಿ–ತಪಸ್ಯಾಳ ಗ್ರಾಮಸ್ಥರಿಗೆ ಅನುಕೂಲವಾಗುಂತೆ ನಿರ್ಮಿಸಲಾಗುತ್ತಿರುವ ಸೇತುವೆ ನಿರ್ಮಾಣ ಸ್ಥಳಕ್ಕೆ ಭೇಟಿ ನೀಡಿ ಕಾಮಗಾರಿಯನ್ನು ವೀಕ್ಷಿಸಿದರು. ಹಿಂದೆ ಕಾಲುವೆ ದಾಟಲು ಗ್ರಾಮಸ್ಥರು ಬಹಳಷ್ಟು ತೊಂದರೆ ಅನುಭವಿಸುತ್ತಿದ್ದರು. ಗ್ರಾಮ ಸಂಚಾರದ ಸಂದರ್ಭದಲ್ಲಿ ಮಾಹಿತಿ ನೀಡಿದಾಗ ಅನುದಾನ ಒದಗಿಸಿ ಕಾಮಗಾರಿಯನ್ನು ಆರಂಭಿಸಲಾಗಿದೆ. ಕಾಮಗಾರಿ ಅಂತಿಮ ಹಂತದಲ್ಲಿದ್ದು, ಕೆಲವು ದಿನಗಳಲ್ಲೇ ಸಾರ್ವಜನಿಕರ ಉಪಯೋಗಕ್ಕೆ ಬರಲಿದೆ ಎಂದು ಹೇಳಿದರು. ಚಾಂದೋರಿ–ಸಂಗಮ ರಸ್ತೆ ನಿರ್ಮಿಸಿಕೊಡಬೇಕೆಂಬ ಬೇಡಿಕೆಗೆ ಸ್ಪಂದಿಸಿದ ಶಾಸಕರು, ವಿಷಯ ನನ್ನ ಗಮನದಲ್ಲಿದೆ. ಮುಂದಿನ ದಿನಗಳಲ್ಲಿ ಮಾಡಿಕೊಡುವುದಾಗಿ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಮುಖಂಡರಾದ ಧೊಂಡಿಬಾ ನರೋಟೆ, ಶಿವಾಜಿರಾವ ಪಾಟೀಲ ಮುಂಗನಾಳ, ಬಸವರಾಜ ಪಾಟೀಲ, ಶಿವಾನಂದ ವಡ್ಡೆ, ರಾಮಶೆಟ್ಟಿ ಪನ್ನಾಳೆ, ಸಚಿನ್ ರಾಠೋಡ, ಶಿವಕುಮಾರ ಝುಲ್ಪೆ, ಮಾಧವರಾವ ಚಾಂಗೂಣೆ, ಮಲ್ಲಪ್ಪ ದಾನಾ, ನಾಗೇಶ ಪತ್ರೆ, ಮಲ್ಲು ನವಡೆ, ಶಿವಾಜಿ ಧುಡುಕನಾಳೆ, ಉದಯ ಸೋಲಾಪೂರೆ, ಮಂಜು ಸ್ವಾಮಿ ಸೇರಿದಂತೆ ಅಗ್ನಿಶಾಮಕ ಇಲಾಖೆಯ ಅಧಿಕಾರಿಗಳು, ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

LOKMUDRA®
SOUHARDA CREDIT CO-OPERATIVE LIMITED.
DRB/V-4/Reg-3908/2016-17
Since : 2016
Head Office : BHALKI - 585 328 Dist. Bidar (Karnataka)

10ನೇ ವಾರ್ಷಿಕ ಸಾಮಾನ್ಯ ಸಭೆಯ ನೋಟಿಸ್
ದಿನಾಂಕ 25-08-2026ರ ಮಂಗಳವಾರ

ಸನ್ಮಾನ್ಯ ಸಹಕಾರಿ ಬಂಧು ಶ್ರೀ/ಶ್ರೀಮತಿ..........

ಲೋಕಮುದ್ರಾ ಸೌಹಾರ್ದ ಕ್ರೇಡಿಟ್ ಕೋ-ಆಪರೇಟಿವ್ ಲಿ., ಭಾಲ್ಕಿ 10ನೇ ಸಾಮಾನ್ಯ ಸಭೆಯನ್ನು ದಿನಾಂಕ. 25-08-2026 ರಂದು ಮಂಗಳವಾರ ಮುಂಜಾನೆ 11:00 ಗಂಟೆಗೆ ಸಹಕಾರಿಯ ಕಛೇರಿ ಆವರಣದಲ್ಲಿ ಸಹಕಾರಿಯ ಅಧ್ಯಕ್ಷರಾದ ಶ್ರೀ ಸುಭಾಷ ಶೆಡೋಳೆ ಇವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಕರೆಯಲಾಗಿದೆ. ದಯವಿಟ್ಟು ತಾವು ತಪ್ಪದೆ ಈ ಸಭೆಗೆ ಹಾಜರಾಗಬೇಕಾಗಿ ವಿನಂತಿ.

ಸಭೆಯಲ್ಲಿ ಚರ್ಚಿಸುವ ವಿಷಯಗಳು:
1) ಸಭೆಯ ನೋಟಿಸ ಓದುವುದು ಮತ್ತು ದಾಖಲಿಸುವುದು.
2) ಹಿಂದಿನ ಮಹಾಸಭೆಯ ನಡಾವಳಿ ಮತ್ತು ನಿರ್ಣಯಗಳನ್ನು ಓದಿ ದೃಢೀಕರಿಸುವುದು.
3) 2025-2026ನೇ ಸಾಲಿನ ಲೆಕ್ಕ ಪರಿಶೋಧನಾ ವರದಿ ಮತ್ತು ಆರ್ಥಿಕ ತಖ್ತೆಗಳನ್ನು ಅಂಗೀಕರಿಸುವ ಕುರಿತು.
4) 2025-2026ನೇ ಸಾಲಿನ ಕ್ರೀಯಾ ಯೋಜನೆಯ ಅನುಮೋದನೆ
5) 2025-2026ನೇ ಸಾಲಿನಲ್ಲಿ ಅಂದಾಜು ಆಯ್ಯ-ವ್ಯಯಕ್ಕಿಂತ ಹೆಚ್ಚಿಗೆ ಆದ ಖರ್ಚುಗಳಿಗೆ ಅನೂಮೋದನೆ ಪಡೆಯುವುದು.
6) 2026-2027ನೇ ಸಾಲಿಗಾಗಿ ಸನ್ನದು ಲೆಕ್ಕಪರಿಶೋಧಕರ ಆಯ್ಕೆ ಕುರಿತು.
7) 2025-26ನೇ ಸಾಲಿನ ಲಾಭ ವಿಂಗಡನೆ ಬಗ್ಗೆ.
8) ಸಹಕಾರಿಯ ವತಿಯಿಂದ ಸದಸ್ಯರಿಗೆ ಸೇವೆ ನೀಡಲು ಶಾಖೆ ಆರಂಭಿಸುವ ಕುರಿತು.
9) ಸಹಕಾರಿ ಸದಸ್ಯರಿಗೆ ಇ-ಸ್ಟಾಂಪ್ ಸೇವೆ ನೀಡುವ ಕುರಿತು.
10) ಸಹಕಾರಿ ಸದಸ್ಯರಿಗೆ ಬಂಗಾರ ಮೇಲೆ ಸಾಲ ನೀಡುವ ಕುರಿತು.
11) ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು.

ದಿನಾಂಕ : 01/08/2026
ಸ್ಥಳ : ಭಾಲ್ಕಿ

ಆಡಳಿತ ಮಂಡಳಿಯ ಪರವಾರಿ
ಗೋಪಾಲ ಬಿರಾದಾರ
ಮುಖ್ಯಕಾರ್ಯನಿರ್ವಾಹಣಾಧಿಕಾರಿ
C.E.O
LOKMUDRA
SOUHARDA CREDIT CO-OPERATIVE LTD.

# ಅಧಿಕಾರಕ್ಕಿಂತ ಜನರ ವಿಶ್ವಾಸ ಮುಖ್ಯ: ಯಶವಂತರಾಯಗೌಡರು



• **ಮಲ್ಲಮ್ಮ ನುಡಿ ವಾರ್ತೆ ಇಂಡಿ**

ಅಧಿಕಾರಕ್ಕಿಂತ ನನ್ನ ಮತಕ್ಷೇತ್ರದ ಜನತೆಯ ವಿಶ್ವಾಸವೇ ಮುಖ್ಯ ಎಂದು ಶಾಸಕ ಯಶವಂತರಾಯಗೌಡ ಪಾಟೀಲರು ಹೇಳಿದರು. ಬುಧವಾರ ನಗರದ ಪ್ರವಾಸಿ ಮಂದಿರದಲ್ಲಿ ನಡೆದ ನೂರಾರು ಕಾರ್ಯಕರ್ತರ ಸಭೆಯನ್ನು ಉದ್ದೇಶಿಸಿ ಮಾತನಾಡಿದರು. ನನಗೆ ನನ್ನ ಪಕ್ಷದ ವರಿಷ್ಠರು ಮಂತ್ರಿ ಮಾಡುವದಾಗಿ ಭರವಸೆ ನೀಡಿದ್ದರು. ಅವರು ಕೊಟ್ಟ ಮಾತು ತಪ್ಪಿದ್ದಾರೆ. ಅದಕ್ಕಾಗಿ ನನಗೆ ನೋವಾಗಿ ರಾಜಿನಾಮೆಯಂತಹ ದಿಟ್ಟ ನಿರ್ಧಾರ ಕೈಕೊಂಡಿದ್ದೆ. ಆದರೆ ನಿಮ್ಮ ಮನಸ್ಸಿಗೆ ನೋವಾಗುತ್ತದೆ ಎಂದರೆ ನಾನು ನನ್ನ ರಾಜಿನಾಮೆ ವಾಪಸ ಪಡೆಯುತ್ತೇನೆ ಎಂದರು. ನನಗೆ ಮಂತ್ರಿ ಸ್ಥಾನಕ್ಕಿಂತ ನಿಮ್ಮ ಪ್ರೀತಿ ವಿಶ್ವಾಸವೇ ಮುಖ್ಯ. ನಿಮ್ಮ ಪ್ರೀತಿ ವಿಶ್ವಾಸಕ್ಕೆ ತಲೆಬಾಗುತ್ತೇನೆ. ಇನ್ನು ಮುಂದೆ ನಾನು ಎಂದೆದೂ ಮಂತ್ರಿ ಸ್ಥಾನಕ್ಕಾಗಿ ಯಾರ ಬಳಿಯೂ ಹೋಗುವದಿಲ್ಲ. ನನ್ನ ಮತಕ್ಷೇತ್ರದ ಅಭಿವೃದ್ಧಿಯೇ ನನಗೆ ಮುಖ್ಯವಾಗಿದ್ದು ತಮ್ಮೆಲ್ಲರ ಮಧ್ಯದಲ್ಲಿದ್ದುಕೊಂಡು ನಾನು ಕೆಲಸ ಮಾಡುತ್ತೇನೆ ಎಂದರು. ನಾನು ಮೂರು ಬಾರಿ ಶಾಸಕನಾಗಿ ಮೂರು ಜಿಪಂ ಸದಸ್ಯರಾಗಿ ಅಧ್ಯಕ್ಷನಾಗಿ ಕೆಲಸ ಮಾಡಿದ್ದೇನೆ. 40 ವರ್ಷಗಳಿಂದ ನನ್ನ ಮನೆತನ ಕಾಂಗ್ರೆಸ್ ಪಕ್ಷದ ಜೊತೆಗಿದೆ. ಕಾರಣ ನಾನು ಕಾಂಗ್ರೆಸ್ ವರಿಷ್ಠರಿಗೆ ವಿನಂತಿಸಿದ್ದೆ. ಆಗ ನನಗೆ ಅವರು ಮಾತು ಕೊಟ್ಟಿದ್ದರು.

ಅದರಂತೆ ನಾನು ಒಬ್ಬ ಸಚಿವ ಸ್ಥಾನದ ಆಕಾಂಕ್ಷಿಯಾಗಿದ್ದೆ. ಆದರೆ ಅದು ಸಿಗಲಿಲ್ಲ, ಮನಸ್ಸಿಗೆ ನೋವಾಗಿದೆ. ಇನ್ನು ಮುಂದೆ 2028 ರಲ್ಲಿಯೂ ಕೂಡಾ ನಾನು ಸಚಿವ ಸ್ಥಾನ ನೀಡಿ ಎಂದು ಅವರ ಬಳಿ ಹೋಗುವದಿಲ್ಲ ಎಂದರು. ನಿಂಬೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಭೀಮಣ್ಣ ಕವಲಗಿ, ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಪ್ರಶಾಂತ ಕಾಳೆ ಜಾವೇದ ಮೋಮಿನ, ಇಲಿಯಾಸ ಬೋರಾಮಣಿ, ನೀಲಕಂಠಗೌಡ ಪಾಟೀಲ, ಈರಣ್ಣ ವಾಲಿ, ರಾಹುಲ್ ಮಸಳಿ ಅಜೀತ ಧನಶೆಟ್ಟಿ ಶಿವಯೋಗಪ್ಪ ಚನಗೊಂಡ ಬಿ.ಸಿ.ಸಾಹುಕಾರ , ರುಕ್ಮುದ್ದೀನ ತಳವಾರ, ಈರಣ್ಣ ವಾಲಿ, ಸಣ್ಣಪ್ಪ ತಳವಾರ, ಜಟ್ಟೆಪ್ಪ ರವಳಿ, ಸತೀಶ ಕುಂಬಾರ ಗಡ್ಡೆಪ್ಪ ನಾವಿ ಮಾತನಾಡಿದರು.

# 7 ರಂದು ವಿದ್ಯುತ್ ಗ್ರಾಹಕರ ಸಂವಾದ ಸಭೆ




• **ಮಲ್ಲಮ್ಮ ನುಡಿ ವಾರ್ತೆ ಕೊಟ್ಟೂರು**

ಕಾರ್ಯ ಮತ್ತು ಪಾಲನಾ ಉಪ-ವಿಭಾಗ ಗು.ವಿ.ಸ.ಕಂ.ನಿ ಕೊಟ್ಟೂರು ಕಛೇರಿ ಅವರಣದಲ್ಲಿ ಮಾನ್ಯ ಅಧಿಕ್ಷಕ ಅಭಿಯಂತರರು(ವಿ) ವೃತ್ತ ಕಛೇರಿ ಬಳ್ಳಾರಿ ಹಾಗೂ ಮಾನ್ಯ ಕಾರ್ಯನಿರ್ವಾಹಕ ಅಭಿಯಂತರರು(ವಿ) ಕಾರ್ಯ ಮತ್ತು ಪಾಲನಾ ವಿಭಾಗ, ಹಗರಿಬೊಮ್ಮನಹಳ್ಳಿ ಇವರ ಸಮ್ಮುಖದಲ್ಲಿ ದಿನಾಂಕ 07-08-2026 ರಂದು ಬೆಳಗ್ಗೆ ಸಮಯ 10:30ಘಂಟೆಗೆ ಕೆ.ಇ.ಆರ್.ಸಿ ನಿರ್ದೇಶನದಂತೆ 2ನೇ ತ್ರೈಮಾಸಿಕ ಗ್ರಾಹಕರ ಸಂವಾದ ಸಭೆಯನ್ನು ಹಮ್ಮಿಕೊಳ್ಳಲಿದ್ದು ಸದರಿ ಕಾರ್ಯಕ್ರಮಕ್ಕೆ ಕೊಟ್ಟೂರು ಉಪ-ವಿಭಾಗ ವ್ಯಾಪ್ತಿಯ ವಿದ್ಯುತ್ ಗ್ರಾಹಕರು ಭಾಗವಹಿಸಲು ಸಹಾಯಕ ಕಾರ್ಯನಿರ್ವಾಕ ಅಭಿಯಂತರರು (ವಿ) ಕಾರ್ಯ ಮತ್ತು ಪಾಲನ ಉಪ ವಿಭಾಗ ಗು, ವಿ, ಸ, ಕಂ, ನಿ, ಕೊಟ್ಟೂರು ಆರ್ ನಾಗರಾಜ ರವರು ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.

# 95 ವಿದ್ಯುತ್ ಕಳ್ಳತನ ಪ್ರಕರಣ: ಜೆಸ್ಕಾಂನಿಂದ 10,40,549ರೂ.ಗಳ ದಂಡ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು**

ಆ 05 : ವಿದ್ಯುತ್ ಕಳ್ಳತನ, ಸೋರಿಕೆ ಹಾಗೂ ದುರಪಯೋಗ ಪ್ರಕರಣಗಳನ್ನು ಪತ್ತೆ ಹಚ್ಚಿ ಒಟ್ಟು ಮೊತ್ತ 10,40,549 ರೂ.ಗಳ ದಂಡ ವಿಧಿಸಲಾಗಿದ್ದು, ಅನಧಿಕೃತ ವಿದ್ಯುತ್ ಸಂಪರ್ಕಗಳನ್ನು ಅಧಿಕೃತಗೊಳಿಸಿಕೊಳ್ಳಲು ಹಾಗೂ ವಿದ್ಯುತ್ ನಿಲುಗಡೆಯಿಂದ ತಪ್ಪಿಸಲು ಬಾಕಿ ಇರುವ ವಿದ್ಯುತ್ ಬಿಲ್ ಮೊತ್ತವನ್ನು ಕೂಡಲೇ ಗ್ರಾಹಕರು ಪಾವತಿಸುವಂತೆ ಕೋರಲಾಗಿದೆ.

# ಕರ್ನಾಟಕ ಮಾದರ ಮಹಾಸಭಾದ ಹೊಸಪೇಟೆ ತಾಲೂಕು ನೂತನ ಸಮಿತಿ ರಚನೆ

• **ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)**



ಕರ್ನಾಟಕ ಮಾದರ ಮಹಾಸಭಾದ ಸಂಘಟನೆಯನ್ನು ತಾಲ್ಲೂಕು ಮಟ್ಟದಲ್ಲಿ ಮತ್ತಷ್ಟು ಬಲಪಡಿಸುವ ಹಾಗೂ ಸಮುದಾಯದ ಏಳಿಗೆಗಾಗಿ ಶ್ರಮಿಸುವ ಉದ್ದೇಶದಿಂದ, ಮಂಗಳವಾರ ಹೊಸಪೇಟೆ ತಾಲೂಕು ಘಟಕಕ್ಕೆ ನೂತನ ಪದಾಧಿಕಾರಿಗಳನ್ನು ಮತ್ತು ಸಮಿತಿಯ ಸದಸ್ಯರನ್ನು ಅಧಿಕೃತವಾಗಿ ನೇಮಕ ಮಾಡಲಾಗಿದೆ.

ಸಂಘಟನೆಯ ಹಿರಿಯ ಮುಖಂಡರು ಹಾಗೂ ಮಾದರ ಮಹಾಸಭಾದ ರಾಜ್ಯ ಅಧ್ಯಕ್ಷರಾದ ಕೆ.ಹೆಚ್. ಮುನಿಯಪ್ಪನವರು ಮತ್ತು ಹೆಚ್ ಆಂಜನೇಯ ಅವರು ಮತ್ತು ಜಿಲ್ಲಾ ಅಧ್ಯಕ್ಷರಾದ ನಿಂಬಗಲ್ ರಾಮಕೃಷ್ಣ ರಾಜ್ಯ/ಜಿಲ್ಲಾ ಮಟ್ಟದ ಪದಾಧಿಕಾರಿಗಳ ಸಮುಖದಲ್ಲಿ ನಡೆದ ಸಭೆಯಲ್ಲಿ ನೂತನ ಪದಾಧಿಕಾರ್ಗಳ ಆಯ್ಕೆಯನ್ನು ಪ್ರಕಟಿಸಲಾಯಿತು.

ನೂತನ ಪದಾಧಿಕಾರಿಗಳಾದ ತಾಲೂಕು ಅಧ್ಯಕ್ಷರು: [ಎಸ್.ಬಿ.ಮಂಜುನಾಥ]ಉಪಾಧ್ಯಕ್ಷರು:[ಕೊಟ್ಟಾಲ್ ವೀರೇಶ್]

ಪ್ರಧಾನ ಕಾರ್ಯದರ್ಶಿ: [ಜೆ.ಶಿವಕುಮಾರ್]

ಖಜಾಂಚಿ: [ಸಣ್ಣ ಈರಣ್ಣ]

ಮಾಧ್ಯಮ ಕಾರ್ಯದರ್ಶಿ/ಸಂಚಾಲಕರು: [ಜೆ.ಶಿವಕುಮಾರ್]ಮತ್ತು ಶೇಖರ್,ಮಾಲತೇಶ ಶೆಟ್ಟಲಾರ್

ಕಾರ್ಯಕಾರಿಣಿ ಸಮಿತಿ ಸದಸ್ಯರು: ಜಯರಾಮ್,ಜಂಬಯ್ಯ,ಶೇಖರ್88ಮುದ್ಲಾಪುರ,ಶ್ರೀಮತಿ ಲಕ್ಷ್ಮೀದೇವಿ,ಎನ್ ಸುಂಕಣ್ಣ ಕಾರಿಗನೂರು,ರಮೇಶ್,ಬಿ. ಗಾಳೆಪ್ಪ,ಟಿ.ವೆಂಕಟೇಶ, ಉದಯ್ ಕುಮಾರ್ ಹೆಚ್.ಆರ್.ಅಧ್ಯಕ್ಷರ ನುಡಿ: ಈ ಸಂದರ್ಭದಲ್ಲಿ ಮಾತನಾಡಿದ ನೂತನ ತಾಲೂಕು ಅಧ್ಯಕ್ಷರಾದ ಎಸ್.ಬಿ.ಮಂಜುನಾಥ ಅವರು "ನನ್ನ ಮೇಲೆ ನಂಬಿಕೆಯಿಟ್ಟು ಈ ಜವಾಬ್ದಾರಿಯನ್ನು ನೀಡಿದ ಸಂಘಟನೆಯ ಎಲ್ಲಾ ಹಿರಿಯರಿಗೆ ಧನ್ಯವಾದಗಳು. ಮುಂಬರುವ ದಿನಗಳಲ್ಲಿ ತಾಲೂಕಿನಾದ್ಯಂತ ಸಮುದಾಯದ ಬಂಧುಗಳನ್ನು ಸಂಘಟಿಸಿ,ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಏಳಿಗೆಗಾಗಿ ಶ್ರಮಿಸುತ್ತೇನೆ," ಎಂದು ತಿಳಿಸಿದರು.

ನೂತನವಾಗಿ ಆಯ್ಕೆಯಾದ ಎಲ್ಲಾ ಪದಾಧಿಕಾರಿಗಳಿಗೆ ಸಂಘಟನೆಯ ಜವಾಬ್ದಾರಿಯನ್ನು ಹಸ್ತಾಂತರಿಸಿ,ಶುಭ ಕೋರಲಾಯಿತು.

# ರಾಜಿನಾಮೆ ಎಂಬ ನಾಟಕ ಬೇಡ : ಬಿಜೆಪಿ



ಇಂಡಿ:ಯಶವಂತಗೌಡ ಪಾಟೀಲರು ನಾನು ಬದ್ದತೆಯ ಸಿದ್ಧಾಂತದ ರಾಜಕಾರಣಿ ಎಂದು ಹೇಳುತ್ತಾರೆ. ಈಗ ಅತೃಪ್ತರಾಗಿ ಸಚಿವ ಸ್ಥಾನ ಸಿಗದಿದ್ದಕ್ಕೆ ಶಾಸಕ ಸ್ಥಾನಕ್ಕೆ ರಾಜಿನಾಮೆ ನೀಡಿದ್ದಾರೆ.

ಮತ್ತೆ ಮೂರು ದಿನಗಳಾದ ಮೇಲೆ ರಾಜಿನಾಮೆ ಹಿಂದೆ ಪಡೆದಿದ್ದೇನೆ ಎಂದು ನಾಟಕ ಮಾಡಬಾರದು. ರಾಜಿನಾಮೆಗೆ ಬದ್ದರಾಗಿರಬೇಕು ಎಂದು ಬಿಜೆಪಿ ತಾಲೂಕಾ ಮಂಡಲ ಅಧ್ಯಕ್ಷ ಹಣಮಂತರಾಯಗೌಡ ಪಾಟೀಲರು ಹೇಳಿದರು.

ನಗರದ ಬಿಜೆಪಿ ಕಾರ್ಯಾಲಯದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಅಭಿವೃದ್ದಿಯಲ್ಲಿ ವಂಚನೆ ಆಗಿದ್ದರೆ ರಾಜಿನಾಮೆ ನೀಡಲಿ ಅಧಿಕಾರ ಬೇ-ಕೆಂದು ರಾಜಿನಾಮೆ ನೀಡಿರುವದು ಅವರಿಗೆ ಶೋಭಿಸುವದಿಲ್ಲ.

ಈಗಾಗಲೇ ಅವರು ರಾಜಿನಾಮೆ ನೀಡಿದ್ದು ಅದಕ್ಕೆ ಕಾರ್ಯಕರ್ತರ ಮತಕ್ಷೇತ್ರದ ಜನರ ಅಭಿಪ್ರಾಯ ಕೇಳಿಲ್ಲ. ನಾಳೆ ಕಾರ್ಯಕರ್ತರ ಒತ್ತಡಕ್ಕೆ ಮಣಿದು ಮತಕ್ಷೇತ್ರದ ಜನರಿಗೆ ತಲೆಬಾಗಿ ರಾಜಿನಾಮೆ ಮರಳಿ ಪಡೆಯುತ್ತೇನೆ ಎಂದು ನಾಟಕವಾಡಬಾರದು ಎಂದರು.

ತಾಲೂಕು ಬರದಿಂದ ತತ್ತರಿಸುತ್ತಿದೆ, ಮಳೆ ಸರಿಯಾಗಿ ಆಗಿಲ್ಲ, ಕುಡಿಯುವ ನೀರಿನ ತೊಂದರೆ ಆಗುತ್ತಿದೆ. ಈ ಸಮಯದಲ್ಲಿ ರಾಜಿನಾಮೆ ಎಂಬ ನಾಟಕ ಎಷ್ಟು ಸರಿ, ಹಿರಿಯ ಶಾಸಕರು ಮೂರು ಬಾರಿ ಜನರು ಆಯ್ಕೆ ಮಾಡಿದ್ದು ಜನರ ಭಾವನೆಗಳಿಗೆ ಧಕ್ಕೆ ತಂದಿದ್ದಾರೆ ಎಂದರು.

ಕಳೆದ ಮೂರು ತಿಂಗಳಿಂದ ಸಚಿವ ಸ್ಥಾನಕ್ಕಾಗಿ ಬೆಂಗಳೂರು ದೆಹಲಿ ಅಡ್ಡಾಡುತ್ತಿದ್ದಾರೆ. ಗ್ರಾಮಗಳ ಕಡೆಗೆ ಗಮನವೇ ಹರಿಸಿಲ್ಲ, ಆಡಳಿತ ಕುಸಿದು ಬಿದ್ದಿದೆ. ಕಳೆದ ಬಾರಿ ಚುನಾವಣೆಯಲ್ಲಿ ತಾಲೂಕನ್ನು ಜಿಲ್ಲೆ ಮಾಡುತ್ತೇನೆಂದು ನಂಬಿಸಿ ಮೋಸ ಮಾಡಿದರು. ಈಗ ರಾಜಿನಾಮೆಯ ನಾಟಕವಾಡುತ್ತಿದ್ದಾರೆ. ಸ್ವಾರ್ಥ ಮುಂದೆ ಇಟ್ಟುಕೊಂಡು ರಾಜಿನಾಮೆ ನೀಡಿರುವದು ದುರ್ದೈವ,

ರಾಜಿನಾಮೆ ಕೈ ಬರಹದ ಮೂಲಕ ಸ್ವೀಕರ ಮುಂದೆ ನೀಡಬೇಕು. ಟಾಯಿಪ್ ಮಾಡಿದ ಪತ್ರ ಸಮಂಜಸವಲ್ಲ, ಕುರ್ಚಿ ಆಶೆಗಾಗಿ ಮತಕ್ಷೇತ್ರದ ಜನರನ್ನು ಕೇಳದೇ ರಾಜಿನಾಮೆ ನೀಡಿದ್ದೀರಿ ಅದನ್ನು ಮರಳಿ ಪಡೆಯಬಾರದು. ತತ್ವ ಸಿದ್ಧಾಂತ ಬದ್ದತೆಯ ಮಾತುಗಳು ಕೇವಲ ಬಾಯಿಯಿಂದ ಬರಬಾರದು ಆಚರಣೆಯಲ್ಲಿ ಇರಬೇಕು ಎಂದರು.

ಕಾಸುಗೌಡ ಬಿರಾದಾರ, ಶಂಕರಗೌಡ ಪಾಟೀಲ, ಮಲ್ಲಿಕಾರ್ಜುನ ಕಿವಡೆ, ಶೀಲವಂತ ಉಮರಾಣಿ, ರವಿ ವಗ್ಗೆ ದೇವೆಂದ್ರ ಕುಂಬಾರ ಮಾತನಾಡಿದರು.

ಪತ್ರಿಕಾ ಗೋಷ್ಠಿಯಲ್ಲಿ ಬಾಳು ಮುಳಜಿ, ಮಹೇಶ ಹೂಗಾರ, ಸಂತೋಷ ಪಾಟೀಲ, ಪ್ರಶಾಂತ ಗವಳಿ, ಭೀಮರಾಯ ಬಬಲಾದ, ರಾಜಶೇಖರ ಭತಗುಣಕಿ ಮತಿತರಿದ್ದರು.

# ಶಿಕ್ಷಣದಿಂದ ವಿದ್ಯಾರ್ಥಿ ವಂಚಿತವಾಗಬಾರದು : ಜಿ ಆರ್ ದೇಶಪಾಂಡೆ

• **ಮಲ್ಲಮ್ಮ ನುಡಿ ವಾರ್ತೆಮುದಗಲ್**




ಶಿಕ್ಷಣದಿಂದ ಪ್ರತಿಭಾವಂತ ವಿದ್ಯಾರ್ಥಿಯೂ ವಂಚಿತನಾಗಬಾರದು ಎಂಬಹುವದೇ ನವೋದಯ ಶಿಕ್ಷಣದ ಮೂಲ ಉದ್ದೇಶ ವಾಗಿದೆ ಎಂದು ವೈದ್ಯ ಗುರುರಾಜ ದೇಶಪಾಂಡೆ ಬುಧವಾರ ಹೇಳಿದರು.

ಪಟ್ಟಣದ ಹೊರವಲಯದ ಕನ್ನಾಪೂರಹಟ್ಟಿ ಜವಾಹರ್ ನವೋದಯ ವಿದ್ಯಾಲಯದಲ್ಲಿ ಸಂಸ್ಥಾಪನಾ ದಿನದ ಸಂಭ್ರಮಾಚರಣೆಯಲ್ಲಿ ಮಾತನಾಡಿದ ಅವರು ಹಣಕಾಸಿನ ಅಭಾವದಿಂದ ಗ್ರಾಮೀಣ ಭಾಗದ ಯಾವೊಬ್ಬ ಪ್ರತಿಭಾವಂತ ವಿದ್ಯಾರ್ಥಿಯೂ ಶಿಕ್ಷಣದಿಂದ ವಂಚಿತನಾಗಬಾರದು ಎಂಬುದೇ ನವೋದಯದ ಮೂಲ ಉದ್ದೇಶ. 1985–86 ರಲ್ಲಿ ಅಂದಿನ ಪ್ರಧಾನಿ ರಾಜೀವ್ ಗಾಂಧಿ ಹಾಗೂ ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವ ಪಿ. ವಿ. ನರಸಿಂಹ ರಾವ್ ಅವರು ಡೆಹ್ರಾಡೂನ್‌ನ ಡೂನ್ ಶಾಲೆಯ ಮಾದರಿಯಲ್ಲಿ ಗ್ರಾಮೀಣ ಪ್ರತಿಭೆಗಳಿಗೆ ಉಚಿತ, ಗುಣಮಟ್ಟದ ಶಿಕ್ಷಣ ನೀಡಲು ಈ ಕ್ರಾಂತಿ–ಕಾರಿ ಯೋಜನೆಗೆ ಚಾಲನೆ ನೀಡಿದ್ದರು.ನಂತರ 1988 ರಲ್ಲಿ ಇದಕ್ಕೆ ಜವಾಹರ್ ನವೋದಯ ವಿದ್ಯಾಲಯ ಎಂದು ಮರುನಾಮಕರಣ ಮಾಡಲಾಯಿತು" ಎಂದು ವಿದ್ಯಾಲಯದ ಐತಿಹಾಸಿಕ ಪಯಣವನ್ನು ಸ್ಮರಿಸಿದರು.

ವಿದ್ಯಾಲಯದ ಪ್ರಭಾರಿ ಪ್ರಾಚಾರ್ಯರಾದ ಎಂ. ಮುನೀಂದ್ರಕುಮಾರ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ವಿದ್ಯಾಲಯವು ಕೇವಲ ಪಠ್ಯ ಶಿಕ್ಷಣಕ್ಕಷ್ಟೇ ಸೀಮಿತವಾಗದೆ ಕ್ರೀಡೆ, ಕಲೆ, ಸಾಹಿತ್ಯ ಮತ್ತು ರಾಷ್ಟ್ರೀಯ ಭಾವೈಕ್ಯತೆಯನ್ನು ಬೆಳೆಸುವ ಮೂಲಕ ವಿದ್ಯಾರ್ಥಿಗಳ ಸರ್ವಾಂಗೀಣ ವಿಕಾಸಕ್ಕೆ ಶ್ರಮಿಸುತ್ತಿದೆ ಎಂದು ಅವರು ತಿಳಿಸಿದರು.ಎಸ್.ಎಮ್.ನೂಲ್ಕರ್ ಸ್ವಾಗತಿಸಿದರೆ,ಶ್ರೀಧರ ಗುಡಿ ಅವರು ವಂದಿಸಿದರು.

# ಬರ ಅಧ್ಯಯನ: ಚಿನ್ನಕಾರ, ಗುಂಜನೂರು ಗ್ರಾಮಗಳ ಹೊಲಗಳಿಗೆ ಸಚಿವ ಡಾ. ಶರಣಪ್ರಕಾಶ್ ಪಾಟೀಲ ಭೇಟಿ

• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ತಾಲೂಕಿನಲ್ಲಿ ಬರ ಪರಿಸ್ಥಿತಿಯ ಸಮೀಕ್ಷೆ ನಡೆಸಲು ಕರ್ನಾಟಕ ಸರ್ಕಾರದ ವೈದ್ಯಕೀಯ ಶಿಕ್ಷಣ ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಶರಣಪ್ರಕಾಶ್ ಪಾಟೀಲ ಅವರು ಬುಧವಾರ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ ಬೆಳೆಗಳ ಸ್ಥಿತಿಗತಿಗಳನ್ನು ಪರಿಶೀಲಿಸಿದರು.

ಮೊದಲಿಗೆ ಸಚಿವರು ಚಿನ್ನಕಾರ ಗ್ರಾಮದ ರೈತರ ಹೊಲಗಳಿಗೆ ಭೇಟಿ ನೀಡಿ ಮಳೆ ಕೊರತೆಯಿಂದ ಉಂಟಾಗಿರುವ ಬೆಳೆ ಹಾನಿಯ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದರು. ಬಳಿಕ ಗುಂಜನೂರು ಗ್ರಾಮದಲ್ಲಿ ಸರ್ವೆ ನಂ. 266ರಲ್ಲಿ ರೈತ ಶರಣಪ್ಪ ಮಡಿವಾಳ ಅವರ ಹೊಲಕ್ಕೆ ಭೇಟಿ ನೀಡಿ ಹೆಸರು ಬೆಳೆ ಹಾಗೂ ಹತ್ತಿ ಬೆಳೆ ಪರಿಶೀಲಿಸಿದರು. ರೈತರೊಂದಿಗೆ ಮಾತುಕತೆ ನಡೆಸಿದ ಸಚಿವರು ಬೆಳೆಗಳ ಸ್ಥಿತಿ, ಮಳೆ ಅಭಾವದಿಂದ ಉಂಟಾದ ಸಮಸ್ಯೆಗಳು ಹಾಗೂ ರೈತರು ಎದುರಿಸುತ್ತಿರುವ ಸಂಕಷ್ಟಗಳ ಬಗ್ಗೆ ಮಾಹಿತಿ ಪಡೆದುಕೊಂಡರು.

ಈ ಸಂದರ್ಭದಲ್ಲಿ ಗುರುಮಠಕಲ್ ಶಾಸಕ ಶರಣಗೌಡ ಕಂದಕೂರ್ ಯಾದಗಿರಿ ಜಿಲ್ಲಾಧಿಕಾರಿ ರಾಹುಲ್ ತುಕಾರಾಂ ಪಾಂಡವೆ ಜಿಲ್ಲಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಲವೀಶ್ ಒರಡಿಯಾ ಹೋರಾಡಿದ ಕೃಷಿ ಸಹಾಯಕ ಅಧಿಕಾರಿ ಸುರೇಶ್ ಬಿ ಸೇರಿದಂತೆ ರೈತರು ತಾಲೂಕು ಪಂಚಾಯತ್ ಅಧಿಕಾರಿಗಳು ಇದ್ದರು.



ಕೃಷಿ ಹಾಗೂ ಕಂದಾಯ ಇಲಾಖೆಯ ಅಧಿಕಾರಿಗಳು ಬೆಳೆ ಸಮೀಕ್ಷೆ ವರದಿಯನ್ನು ಸಚಿವರಿಗೆ ಸಲ್ಲಿಸಿದರು. ಬರ ಪರಿಸ್ಥಿತಿಯಿಂದ ರೈತರಿಗೆ ಆಗಿರುವ ನಷ್ಟದ ಕುರಿತು ಸರ್ಕಾರಕ್ಕೆ ಸಮಗ್ರ ವರದಿ ಸಲ್ಲಿಸಿ ಅಗತ್ಯ ಪರಿಹಾರ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ತಿಳಿಸಿದರು.

# ಹದಿಹರೆಯದ ಹೆಣ್ಣುಮಕ್ಕಳ ಜಾಗೃತಿಗೆ ಜಿಲ್ಲಾ ಮಟ್ಟದ ಸಮಾವೇಶಕ್ಕೆ ಚಾಲನೆ




• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಬಳ್ಳಾರಿ ರೀಡ್ಸ್ ಸಂಸ್ಥೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕೊಪ್ಪಳ, ಮಕ್ಕಳ ವಿಶೇಷ ಪೊಲೀಸ್ ಘಟಕ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ) ಇವರುಗಳ ಸಂಯುಕ್ತಾಶ್ರಯದಲ್ಲಿ ಬಾಲ್ಯವಿವಾಹ ನಿಷೇಧ, ಪೋಕ್ಸೋ, ಸೈಬರ್ ಕ್ರೈಂ, ಮಾದಕ ದ್ರವ್ಯ ಮುಕ್ತ ಹಾಗೂ ಮಕ್ಕಳ ಮೇಲಿನ ದೌರ್ಜನ್ಯ ತಡೆ ಕುರಿತು ಜಿಲ್ಲಾಮಟ್ಟದಲ್ಲಿ ಹಮ್ಮಿಕೊಂಡಿರುವ ಹದಿಹರೆಯದ ಹೆಣ್ಣುಮಕ್ಕಳ ಸಮಾವೇಶವನ್ನು

ಕೊಪ್ಪಳ ತಾಲೂಕು ಪಂಚಾಯತಿ ಎದುರಿನ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ ಎಸ್.ದರಗದ ಅವರು ಉದ್ಘಾಟಿಸಿದರು.

# ವಲಯ ಮಟ್ಟದ ಕ್ರೀಡಾಕೂಟದಲ್ಲಿ ವಿದ್ಯಾರ್ಥಿಗಳ ಸಾಧನೆ

• ಮಲ್ಲಮ್ಮ ನುಡಿ ವಾರ್ತೆವಡಗೇರಾ

ಶಹಾಪುರ ತಾಲೂಕಿನ ಕ್ರೀಡಾಂಗಣದಲ್ಲಿ ನಡೆದ ವಲಯ ಮಟ್ಟದ ವಿವಿಧ ಕ್ರೀಡಾಕೂಟದಲ್ಲಿ ಹೈಯಾಳ (ಬಿ) ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ಅತ್ಯುತ್ತಮ ಪ್ರದರ್ಶನ ನೀಡಿ ಶಾಲೆಗೆ ಕೀರ್ತಿ ತಂದಿದ್ದಾರೆ. ಕ್ರೀಡಾಕೂಟದಲ್ಲಿ ಬಾಲಕರ ಕಬಡ್ಡಿ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನವನ್ನು ಪಡೆದು ತಂಡವು ತನ್ನ ಸಾಮರ್ಥ್ಯವನ್ನು ಮೆರೆದಿದೆ. ಅಲ್ಲದೆ, 100 ಮೀಟರ್ ಓಟ ಹಾಗೂ 200 ಮೀಟರ್ ಓಟ ಸ್ಪರ್ಧೆಗಳಲ್ಲಿಯೂ ವಿದ್ಯಾರ್ಥಿಗಳು ಪ್ರಥಮ ಸ್ಥಾನ ಗಳಿಸಿ ತಾಲೂಕು ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದಾರೆ. ವಿದ್ಯಾರ್ಥಿಗಳ ಈ ಸಾಧನೆಗೆ



ಶಾಲೆಯ ಮುಖ್ಯಶಿಕ್ಷಕರಾದ ಯಲ್ಲಪ್ಪ, ಶಿಕ್ಷಕರಾದ ಶ್ರೀಮತಿ ಶೋಭಾ ಎಸ್., ಕು. ರೂಪದೇವಿ, ಪದ್ಮಣ್ಣ ಸರ್ ಹಾಗೂ ಬಸಮ್ಮ ಮೇಡಂ ಸೇರಿದಂತೆ ಶಾಲೆಯ ಎಲ್ಲಾ ಶಿಕ್ಷಕ ವೃಂದವು ಅಭಿನಂದನೆ ಸಲ್ಲಿಸಿ, ತಾಲೂಕು ಮಟ್ಟದ ಸ್ಪರ್ಧೆಗಳಲ್ಲಿಯೂ ಇದೇ ರೀತಿಯ ಸಾಧನೆ ಮಾಡುವಂತೆ ಶುಭ ಹಾರೈಸಿದ್ದಾರೆ. ಶಾಲೆಯ ಎಸ್.ಡಿ.ಎಂ.ಸಿ. ಅಧ್ಯಕ್ಷರಾದ ಅಯ್ಯಪ್ಪ, ಉಪಾಧ್ಯಕ್ಷರಾದ ಹಣಮಂತ, ಪೋಷಕರು, ಗ್ರಾಮದ ಯುವಕರು ಹಾಗೂ ಗ್ರಾಮಸ್ಥರು ವಿದ್ಯಾರ್ಥಿಗಳ ಸಾಧನೆಗೆ ಹರ್ಷ ವ್ಯಕ್ತಪಡಿಸಿ, ಮುಂದಿನ ಸ್ಪರ್ಧೆಗಳಿಗೆ ಶುಭಾಶಯ ಕೋರಿದ್ದಾರೆ.

# ಬೆಳೆ ವಿಮೆಯಿಂದ ಸಾವಿರಾರು ರೈತರು ವಂಚಿತರಾದರೂ ಶಾಸಕರ ಮೌನ ಏಕೆ? : ಹರ್ಷಾ ಗುತ್ತೇದಾರ

ಆಳಂದ: ಬೆಳೆ ವಿಮೆ ಮಂಜೂರಾದ ಸಂದರ್ಭದಲ್ಲಿ "ನನ್ನ ಪ್ರಯತ್ನದಿಂದಲೇ ರೈತರಿಗೆ ಬೆಳೆ ವಿಮೆ ದೊರೆತಿದೆ" ಎಂದು ಹೇಳಿಕೊಂಡು ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಜಿಲ್ಲಾಧಿಕಾರಿಗಳನ್ನು ಕರೆಸಿ ಸಾರ್ವಜನಿಕ ಸನ್ಮಾನ ಮಾಡಿಸಿಕೊಂಡಿದ್ದ ಆಳಂದ ಕ್ಷೇತ್ರದ ಶಾಸಕ ಬಿ.ಆರ್. ಪಾಟೀಲ ಅವರು, ಈಗ ಸಾವಿರಾರು ರೈತರು ಬೆಳೆ ವಿಮೆ ಯೋಜನೆಯಿಂದ ವಂಚಿತರಾಗಿರುವ ಕುರಿತು ಏಕೆ ಮಾತನಾಡುತ್ತಿಲ್ಲ ಎಂದು ಜಿ.ಪಂ ಮಾಜಿ ಉಪಾಧ್ಯಕ್ಷ ಹರ್ಷಾ ಗುತ್ತೇದಾರ ಪ್ರಶ್ನಿಸಿದ್ದಾರೆ.



ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಬೆಳೆ ವಿಮೆ ಮಂಜೂರಾದಾಗ ಅದರ ಸಂಪೂರ್ಣ ಶ್ರೇಯಸ್ಸನ್ನು ತಮಗೆ ಸೇರಿಸಿಕೊಂಡ ಶಾಸಕರು, ಈಗ ಅನೇಕ ರೈತರಿಗೆ ಬೆಳೆ ವಿಮೆ ದೊರೆಯದೆ ಸಂಕಷ್ಟದಲ್ಲಿರುವಾಗ ಸರ್ಕಾರದ ಗಮನ ಸೆಳೆಯುವಲ್ಲಿ ವಿಫಲರಾಗಿದ್ದಾರೆ ಎಂದು ಆರೋಪಿಸಿದ್ದಾರೆ.

ಆಳಂದ ತಾಲೂಕಿನ ಹಲವು ಗ್ರಾಮಗಳ ರೈತರು ಅಗತ್ಯ ದಾಖಲೆಗಳನ್ನು ಸಲ್ಲಿಸಿದ್ದರೂ ಅಥವಾ ಅರ್ಹತೆ ಹೊಂದಿದ್ದರೂ ವಿವಿಧ ತಾಂತ್ರಿಕ ಹಾಗೂ ಆಡಳಿತಾತ್ಮಕ ಕಾರಣಗಳಿಂದ ಬೆಳೆ ವಿಮೆ ಸೌಲಭ್ಯದಿಂದ ವಂಚಿತರಾಗಿದ್ದಾರೆ ಎಂಬ ದೂರುಗಳು ಕೇಳಿಬರುತ್ತಿವೆ. ಇದರಿಂದ ಈಗಾಗಲೇ ಬರ ಹಾಗೂ ಬೆಳೆ ನಷ್ಟದಿಂದ ತೊಂದರೆ ಅನುಭವಿಸುತ್ತಿರುವ ರೈತರು ಮತ್ತಷ್ಟು ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಅವರು ತಿಳಿಸಿದ್ದಾರೆ.

ರೈತರ ಸಮಸ್ಯೆಗಳ ಕುರಿತು ನಿರಂತರವಾಗಿ ಧ್ವನಿ ಎತ್ತಬೇಕಾದ ಜನಪ್ರತಿನಿಧಿಗಳು, ಇಂತಹ ಗಂಭೀರ ವಿಷಯದಲ್ಲಿ ಮೌನ ವಹಿಸಿರುವುದು ಬೇಸರದ ಸಂಗತಿಯಾಗಿದೆ. ಬೆಳೆ ವಿಮೆಯಿಂದ ವಂಚಿತರಾದ ಪ್ರತಿಯೊಬ್ಬ ಅರ್ಹ ರೈತನಿಗೂ ನ್ಯಾಯ ದೊರಕಿಸುವ ನಿಟ್ಟಿನಲ್ಲಿ ಸರ್ಕಾರದ ಮೇಲೆ ಒತ್ತಡ ಹೇರಿ, ಅಧಿಕಾರಿಗಳೊಂದಿಗೆ ಸಭೆ ನಡೆಸಿ ಸಮಸ್ಯೆಗೆ ತಕ್ಷಣ ಪರಿಹಾರ ಕಲ್ಪಿಸುವಂತೆ ಅವರು ಆಗ್ರಹಿಸಿದ್ದಾರೆ.

ಸರ್ಕಾರವು ಬೆಳೆ ವಿಮೆಯಿಂದ ವಂಚಿತರಾದ ರೈತರ ಅರ್ಜಿಗಳನ್ನು ಮರುಪರಿಶೀಲಿಸಿ, ಅರ್ಹ ಎಲ್ಲ ರೈತರಿಗೆ ಶೀಘ್ರವೇ ವಿಮೆ ಪರಿಹಾರವನ್ನು ಬಿಡುಗಡೆ ಮಾಡಬೇಕು. ಜೊತೆಗೆ ಈ ಕುರಿತು ಶಾಸಕ ಬಿ.ಆರ್. ಪಾಟೀಲ ಅವರು ತಮ್ಮ ನಿಲುವನ್ನು ಸಾರ್ವಜನಿಕರ ಮುಂದೆ ಸ್ಪಷ್ಟಪಡಿಸಿ, ರೈತರ ಹಿತಾಸಕ್ತಿಗಾಗಿ ತಕ್ಷಣ ಕ್ರಮ ಕೈಗೊಳ್ಳಬೇಕು. ಈ ಕುರಿತು ಆಳಂದ ಮಂಡಲ ಬಿಜೆಪಿ ವತಿಯಿಂದ ಶೀಘ್ರ ಹೋರಾಟ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

# ಸಾಂಕ್ರಾಮಿಕ ರೋಗ ತಡೆಗೆ ಮುಂಜಾಗ್ರತಾ ಕ್ರಮಗಳ ಪರಿಶೀಲನೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ತಾಲೂಕಿನ ಬಸರಕೋಡು ಗ್ರಾಮದಲ್ಲಿ ಇತ್ತೀಚೆಗೆ ಕಂಡುಬಂದಿರುವ ಜ್ವರ ಪ್ರಕರಣಗಳ ಹಿನ್ನೆಲೆಯಲ್ಲಿ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿ ಡಾ. ಆರ್. ಅಬ್ದುಲ್ಲಾ ಅವರು ಬಸರಕೋಡು ಉಪಕೇಂದ್ರ ಹಾಗೂ ಗ್ರಾಮದ ವಿವಿಧ ಬಡಾವಣೆಗಳಿಗೆ ಮಂಗಳವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಭೇಟಿಯ ವೇಳೆ ಜ್ವರದಿಂದ ಬಳಲುತ್ತಿರುವ ರೋಗಿಗಳ ಮನೆಗಳಿಗೆ ತೆರಳಿ ಆರೋಗ್ಯ ವಿಚಾರಿಸಿದ ಅವರು, ಗ್ರಾಮಸ್ಥರು ವಹಿಸಬೇಕಾದ ನೈರ್ಮಲ್ಯ ಹಾಗೂ ಸ್ವಚ್ಛತಾ ಕ್ರಮಗಳ ಕುರಿತು ಅರಿವು ಮೂಡಿಸಿದರು.

*ಒಳಾಂಗಣ ಧೂಮೀಕರಣ:*

ಇಡೀ ಗ್ರಾಮದಲ್ಲಿ ತಕ್ಷಣವೇ ಒಳಾಂಗಣ ಧೂಮೀಕರಣ ಕಾರ್ಯ ಕೈಗೊಳ್ಳಬೇಕು ಎಂದು ಆರೋಗ್ಯ ಸಿಬ್ಬಂದಿಗೆ ಸೂಚಿಸಿದ ಅವರು, ಧೂಮೀಕರಣದ ಸಮಯದಲ್ಲಿ ಸಾರ್ವಜನಿಕರು ಸುರಕ್ಷಿತವಾಗಿ ಮನೆಯಿಂದ ಹೊರಗಿರಬೇಕು ಎಂದು ತಿಳಿಸಿದರು.

*ಡ್ರೈ ಡೇ ಮತ್ತು ಕುಡಿಯುವ ನೀರು:*

ಧೂಮೀಕರಣದ ನಂತರ 'ಡ್ರೈ ಡೇ' (ಒಣ ದಿನ) ಅನುಸರಿಸಿ, ಬಳಿಕವಷ್ಟೇ ಸಾರ್ವಜನಿಕರಿಗೆ ನೀರು ಸರಬರಾಜು ಮಾಡಬೇಕು. ನೀರನ್ನು ಕಡ್ಡಾಯವಾಗಿ ಕಾಯಿಸಿ, ಆರಿಸಿ ಕುಡಿಯುವಂತೆ ಮತ್ತು ಈ ಕುರಿತು ಗ್ರಾಮದಲ್ಲಿ ಡಂಗುರ ಸಾರಿಸಿ ಅರಿವು ಮೂಡಿಸುವಂತೆ ನಿರ್ದೇಶ ನೀಡಿದರು.

*ಸಮುದಾಯ ಸಭೆ ಮತ್ತು ಸೊಳ್ಳೆ ನಿಯಂತ್ರಣ:*

ಗ್ರಾಮಸ್ಥರ ಸಮುದಾಯ ಸಭೆ ನಡೆಸಿ, ಕುಡಿಯುವ ಮತ್ತು ಬಳಕೆಯ ನೀರನ್ನು ಮುಚ್ಚಳದಿಂದ ಅಥವಾ ಶುಭ್ರವಾದ ಬಟ್ಟೆಯಿಂದ ಸೊಳ್ಳೆಗಳು ನುಸುಳದಂತೆ ಮುಚ್ಚಿಡಬೇಕು ಎಂದು ಜಾಗೃತಿ ಮೂಡಿಸಿದರು.

*ಆರೋಗ್ಯ ತಪಾಸಣೆ:*

ಜ್ವರದ ಲಕ್ಷಣಗಳು ಕಂಡುಬಂದಲ್ಲಿ ಸಾರ್ವಜನಿಕರು ತಕ್ಷಣ ಉಪಕೇಂದ್ರದ ಆರೋಗ್ಯ ಶಿಬಿರದಲ್ಲಿ ವೈದ್ಯರನ್ನು ಭೇಟಿ ಮಾಡಿ ಸೂಕ್ತ ಚಿಕಿತ್ಸೆ ಪಡೆಯುವಂತೆ ಕೋರಿದರು.

*ಆರೋಗ್ಯ ಸುರಕ್ಷತೆಗಾಗಿ ಸಲಹೆಗಳು:*

ಡೆಂಗ್ಯೂ, ಮಲೇರಿಯಾ ಹಾಗೂ ವೈರಲ್ ಜ್ವರಗಳನ್ನು ತಡೆಗಟ್ಟಲು ಮನೆ ಸುತ್ತಮುತ್ತ ನೀರು ನಿಲ್ಲದಂತೆ ನೋಡಿಕೊಳ್ಳುವುದು, ಸೊಳ್ಳೆ ಪರದೆ ಬಳಸುವುದು, ಉದ್ದನೆಯ ತೋಳಿನ ಬಟ್ಟೆ ಧರಿಸುವುದು, ಕೈಗಳನ್ನು ಸೋಪಿನಿಂದ ತೊಳೆಯುವುದು, ಪೌಷ್ಟಿಕ ಆಹಾರ ಹಾಗೂ ಕುದಿಸಿದ ನೀರು ಸೇವಿಸುವುದು ಅಗತ್ಯ ಎಂದು ವೈದ್ಯಾಧಿಕಾರಿಗಳು ತಿಳಿಸಿದರು.



ಮುಖ್ಯವಾಗಿ ನೀರು ನಿಲ್ಲದಂತೆ ನೋಡಿಕೊಳ್ಳಬೇಕು. ಮನೆ ಸುತ್ತಮುತ್ತ, ಟೈರ್, ಪ್ಲಾಸ್ಟಿಕ್ ಕಪ್, ಹೂ ಕುಂಡಗಳ ಕೆಳಗೆ ಹಾಗೂ ಏರ್ ಕೂಲರ್‌ಗಳಲ್ಲಿ ನೀರು ನಿಲ್ಲಲು ಬಿಡಬಾರದು. ಸ್ವಚ್ಛ ನೀರಿನಲ್ಲಿ ಡೆಂಗ್ಯೂ ಹರಡುವ ಸೋಂಕಿತ ಸೊಳ್ಳೆಗಳು ಮೊಟ್ಟೆ ಇಡುತ್ತವೆ. ಅವುಗಳ ನಿಯಂತ್ರಣಕ್ಕಾಗಿ ಸೊಳ್ಳೆ ಪರದೆ ಬಳಸಿ, ಮಲಗುವಾಗ ಸೊಳ್ಳೆ ಪರದೆ ಅಥವಾ ಸೊಳ್ಳೆ ನಿವಾರಕಗಳನ್ನು ಬಳಸಬೇಕು ಎಂದು ತಿಳಿಸಿದರು.

ದೇಹವನ್ನು ಪೂರ್ತಿಯಾಗಿ ಮುಚ್ಚುವಂತಹ ಉದ್ದನೆಯ ತೋಳಿನ ಬಟ್ಟೆಗಳನ್ನು ಧರಿಸಬೇಕು. ಹೊರಗಡೆಯಿಂದ ಮನೆಗೆ ಬಂದಾಗ, ಆಹಾರ ಸೇವಿಸುವ ಮೊದಲು ಮತ್ತು ಶೌಚಾಲಯ ಬಳಸಿದ ನಂತರ ಸೋಪಿನಿಂದ ಕನಿಷ್ಠ 20 ಸೆಕೆಂಡುಗಳ ಕಾಲ ಕೈಗಳನ್ನು ಸರಿಯಾಗಿ ತೊಳೆಯಬೇಕು. ಜ್ವರ, ಕೆಮ್ಮು ಅಥವಾ ನೆಗಡಿ ಇರುವವರಿಂದ ಸೂಕ್ತ ಅಂತರ ಕಾಯ್ದುಕೊಳ್ಳುವುದು ಉತ್ತಮ. ಜನಸಂದಣಿ ಇರುವ ಪ್ರದೇಶಗಳಲ್ಲಿ ಮಾಸ್ಕ್ ಧರಿಸುವುದು ಒಳ್ಳೆಯದು ಎಂದರು.

ಅಶುಚಿ ಕೈಗಳಿಂದ ಕಣ್ಣು, ಮೂಗು ಮತ್ತು ಬಾಯಿಯನ್ನು ಮುಟ್ಟುವುದನ್ನು ತಡೆಯಿರಿ. ರಸ್ತೆಬದಿಯ ನೊಣ ಮುಸುರಿದ ಹಾಗೂ ಅಶುಚಿತ್ವದಿಂದ ಕೂಡಿದ ಆಹಾರ ಮತ್ತು ತಣ್ಣನೆಯ ಪಾನೀಯಗಳನ್ನು ಸೇವಿಸಬಾರದು. ಜೀವಸತ್ವ ಸಿ ಇರುವ ಹಣ್ಣುಗಳು (ಕಿತ್ತಳೆ, ನೆಲ್ಲಿಕಾಯಿ), ತರಕಾರಿಗಳು, ಸೊಪ್ಪು ಮತ್ತು ಒಣಹಣ್ಣುಗಳನ್ನು ದಿನನಿತ್ಯದ ಆಹಾರದಲ್ಲಿ ಅಳವಡಿಸಿಕೊಳ್ಳಬೇಕು. ಇದರ ಜೊತೆಗೆ ದಿನಕ್ಕೆ ಕನಿಷ್ಠ 8–10 ಲೋಟ ನೀರು ಕುಡಿಯುವ ಮೂಲಕ ದೇಹವನ್ನು ನಿರ್ಜಲೀಕರಣದಿಂದ ಕಾಪಾಡಿಕೊಳ್ಳಬೇಕು. ದಿನಕ್ಕೆ 7–8 ಗಂಟೆಗಳ ಉತ್ತಮ ನಿದ್ರೆ ಹಾಗೂ ಹಗುರವಾದ ವ್ಯಾಯಾಮ ದೇಹದ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ. ಮನೆ ಮತ್ತು ಸುತ್ತಮುತ್ತಲಿನ ಪ್ರದೇಶವನ್ನು ಸದಾ ಸ್ವಚ್ಛವಾಗಿಟ್ಟುಕೊಳ್ಳಬೇಕು. ಕಸವನ್ನು ಸರಿಯಾಗಿ ವಿಲೇವಾರಿ ಮಾಡಿ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ನಮ್ಮ ಕ್ಲಿನಿಕ್ ವೈದ್ಯಾಧಿಕಾರಿಗಳು, ಕೀಟಶಾಸ್ತ್ರಜ್ಞರು, ಜಿಲ್ಲಾ ಡಿ.ವಿ.ಬಿ.ಡಿ.ಸಿ.ಪಿ ಸಲಹೆಗಾರರು, ಮೇಲ್ವಿಚಾರಣ ತಂಡ, ಯರಗುಡಿ ಪ್ರಾಥಮಿಕ ಆರೋಗ್ಯ ಕೇಂದ್ರದ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳು, ಆಶಾ ಕಾರ್ಯಕರ್ತೆಯರು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ತಾಯಿ, ಮಗ ಕಾಣೆ: ಪತ್ತೆಗೆ ಮನವಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ತೋರಣಗಲ್ಲು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಾಗರತ್ನಮ್ಮ ಎನ್ನುವ 32 ವರ್ಷದ ಮಹಿಳೆಯು ಅಭಿರಾಮ್ ರೆಡ್ಡಿ ಎನ್ನುವ 8 ವರ್ಷದ ತನ್ನ ಮಗುವಿನೊಂದಿಗೆ ಜುಲೈ 30 ರಂದು ಕಾಣೆಯಾಗಿದ್ದು, ಈ ಕುರಿತು ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.*ನಾಗರತ್ನಮ್ಮ ಚಹರೆ ಗುರುತು:*ಸುಮಾರು 5.2 ಅಡಿ ಎತ್ತರ, ದುಂಡು ಮುಖ, ಗೋಧಿ ಮೈ ಬಣ್ಣ ಹೊಂದಿದ್ದು, ಕಾಣೆಯಾದ ಸಂದರ್ಭದಲ್ಲಿ ಗುಲಾಬಿ ಬಣ್ಣದ ಸೀರೆ ಮತ್ತು ನೀಲಿ ಬಣ್ಣದ ಕುಪ್ಪಸ ಧರಿಸಿರುತ್ತಾಳೆ. ಮಹಿಳೆಯು ಕನ್ನಡ, ತೆಲುಗು ಹಾಗೂ ಹಿಂದಿ ಭಾಷೆ ಮಾತನಾಡುತ್ತಾಳೆ.*ಅಭಿರಾಮ್ ರೆಡ್ಡಿ ಚಹರೆ ಗುರುತು:*ಸುಮಾರು 3 ಅಡಿ ಎತ್ತರ, ದುಂಡು ಮುಖ, ಗೋಧಿ ಮೈ ಬಣ್ಣ ಹೊಂದಿದ್ದು, ಕಾಣೆಯಾದ ಸಂದರ್ಭದಲ್ಲಿ ಕೆಂಪು ಬಣ್ಣದ ಪ್ಯಾಂಟ್, ಕಪ್ಪು ಬಣ್ಣದ ಶರ್ಟ್ ಹಾಗೂ ನೀಲಿ ಬಣ್ಣದ ಕೋರ್ಟ್ ಧರಿಸಿರುತ್ತಾನೆ. ಕನ್ನಡ ಭಾಷೆ ಮಾತನಾಡುತ್ತಾನೆ.ಮೇಲ್ಕಂಡ ಚಹರೆಯುಳ್ಳ ತಾಯಿ ಮತ್ತು ಮಗುವಿನ ಬಗ್ಗೆ ಮಾಹಿತಿ ಸಿಕ್ಕಲ್ಲಿ



ತೋರಣಗಲ್ಲು ಪೊಲೀಸ್ ಠಾಣೆಯ ದೂ.08395–250100, ಮೊ.9480803062, ಸಂಡೂರು ಸಿಪಿಐ ಮೊ.9480803036, ತೋರಣಗಲ್ಲು ಡಿಎಸ್‌ಪಿ ಮೊ.9480803010, ಬಳ್ಳಾರಿ ಎಸ್‌ಪಿ ದೂ.08392–258300, ಅಥವಾ ಬಳ್ಳಾರಿ ಕಂಟ್ರೋಲ್ ರೂಮ್ ದೂ.08392–279100 ಗೆ ಕರೆ ಮಾಡಿ ಮಾಹಿತಿ ನೀಡಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಬಿ ಜಿ ರಾಮ್ ಜಿ ಯೋಜನೆ: ಅರಿವು ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಕೇಂದ್ರ ಸರ್ಕಾರದ ನೂತನ ವಿಬಿ ಜಿ ರಾಮ್ ಜಿ ಯೋಜನೆಯ ವರ್ಗ ಮೂರಲ್ಲಿರುವ ಗ್ರಾಮೀಣ ಜೀವನೋಪಾಯಕ್ಕೆ ಸಂಬಂಧಿಸಿದ ವಿವಿಧ ಕಾಮಗಾರಿಗಳ ಬಗ್ಗೆ ತಾಲ್ಲೂಕಿನಲ್ಲಿರುವ ಮಹಿಳಾ ಸ್ವ–ಸಹಾಯ ಸಂಘದ ಮುಖ್ಯ ಪುಸ್ತಕ ಬರಹಗಾರ (ಎಂಬಿಕೆ) ರಿಗೆ ಮಾಹಿತಿ ನೀಡಿ ಯೋಜನೆ ಬಗ್ಗೆ ಅರಿವು ಮೂಡಿಸಲಾಯಿತು.ವಿಬಿಜಿ ರಾಮ್‌ಜಿ ಯೋಜನೆ ಕುರಿತಾಗಿ ನಗರದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಬುಧವಾರ ಆಯೋಜಿಸಿದ್ದ ಜನ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದ ಯೋಜನೆಯ ತಾಲ್ಲೂಕು ಐಇಸಿ ಸಂಯೋಜಕ ಗಣಪತಿ ಹರಕೂಡೆ ಅವರು, 'ವಿಬಿ ಜಿ ರಾಮ್ ಜಿ ಯೋಜನೆಯಲ್ಲಿ ಜಲ ಸಂರಕ್ಷಣೆ, ಗ್ರಾಮೀಣ ಮೂಲ ಸೌಕರ್ಯಗಳು, ಜೀವನೋಪಾಯ ಹಾಗೂ ಹವಾಮಾನ ವಿದ್ಯಾಮಾನಗಳನ್ನು ತಗ್ಗಿಸುವುದು ಸೇರಿ ಕಾಮಗಾರಿಗಳನ್ನು ನಾಲ್ಕು ವರ್ಗಗಳಲ್ಲಿ ವಿಂಗಡಿಸಲಾಗಿದ್ದು,



ಜೀವನೋಪಾಯ ಕಾಮಗಾರಿಗಳಲ್ಲಿ ಮಹಿಳಾ ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆಗೂ ಹೆಚ್ಚು ಮಹತ್ವ ನೀಡಲಾಗಿದೆ' ಎಂದರು.'ಸಮುದಾಯ ಮತ್ತು ವೈಯಕ್ತಿಕ ಕಾಮಗಾರಿಗಳು ಸೇರಿದಂತೆ ಈ ವರ್ಗದಲ್ಲಿ ಸುಮಾರು 80ಕ್ಕೂ ಹೆಚ್ಚು ಕಾಮಗಾರಿಗಳು ಇವೆ. ಜೀವನೋಪಾಯದ ಚಟುವಟಿಕೆಗಳಿಗಾಗಿ ತರಬೇತಿ ಕೇಂದ್ರಗಳ ನಿರ್ಮಾಣ, ಗ್ರಾಮೀಣ ಸಂತೆಕಟ್ಟೆಗಳ ನಿರ್ಮಾಣ, ಆಹಾರ ಧಾನ್ಯ ಸಂಗ್ರಹಣಾ ಘಟಕ, ಎಸ್‌ಎಚ್ ಜಿ ಶೆಡ್, ಶಿ ಮಾರ್ಟ್, ಎರೆಹುಳು ಗೊಬ್ಬರ ತಯಾರಿಕಾ ಘಟಕ, ಹಿಟ್ಟಿನ ಗಿರಣಿ, ಕೋಳಿ ಹಾಗೂ ಕುರಿ ಶೆಡ್ ಸೇರಿದಂತೆ ಇನ್ನು ಹಲವು ಕಾಮಗಾರಿಗಳನ್ನು ಮಹಿಳೆಯರು ಈ ಯೋಜನೆಯಡಿ ಪಡೆದುಕೊಳ್ಳಬಹುದು. ಆಸಕ್ತ ಮಹಿಳೆಯರು ಸಂಬಂಧಪಟ್ಟ ಗ್ರಾಮ ಪಂಚಾಯಿತಿಯ ಕ್ರಿಯಾ ಯೋಜನೆಯಲ್ಲಿ ತಮ್ಮ ಹೆಸರು ನೋಂದಾಯಿಸಿಕೊಳ್ಳಬಹುದು' ಎಂದು ತಿಳಿಸಿದರು.

# 07 ರಂದು ಬೃಹತ್ ರಕ್ತದಾನ ಶಿಬಿರ


• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ನಿರ್ವಾಹಕ ಘಟಕ ಹಾಗೂ ಜೆಎಸ್‌ಡಬ್ಲ್ಯೂ ?? ಸಂಸ್ಥೆಯ ಸಂಯುಕ್ತಾಶ್ರಯದಲ್ಲಿ ಆಗಸ್ಟ್ 07 ರಂದು ಸಂಡೂರು ತಾಲೂಕಿನ ತೋರಣಗಲ್ಲಿನ ಜೆಎಸ್‌ಡಬ್ಲ್ಯೂ ?? ಆವರಣದಲ್ಲಿ ಬೃಹತ್ ರಕ್ತದಾನ ಶಿಬಿರ ಆಯೋಜಿಸಲಾಗಿದೆ.

ಅಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಶಿಬಿರವನ್ನು ಉದ್ಘಾಟಿಸುವರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯಾದ ಡಾ.ಅಲಕಾನಂದ ಡಿ.ಮಳಗಿ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಎನ್. ಬಸರೆಡ್ಡಿ ಸೇರಿದಂತೆ ಜೆಎಸ್‌ಡಬ್ಲ್ಯೂ ?? ಸಂಸ್ಥೆಯ ಪದಾಧಿಕಾರಿಗಳು ಹಾಗು ಇತರರು ಉಪಸ್ಥಿತರಿರಲಿದ್ದಾರೆ.

ಆರೋಗ್ಯವಂತ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸ್ವಯಂಪ್ರೇರಿತರಾಗಿ ರಕ್ತದಾನ ಮಾಡುವ ಮೂಲಕ ಈ ಮಹತ್ಕಾರ್ಯ ಮತ್ತು ಮಾನವೀಯ ಸೇವೆಗೆ ಕೈಜೋಡಿಸಬೇಕು ಎಂದು ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ನಿರ್ವಾಹಕ ಘಟಕದ ಅಧಿಕಾರಿ ಹಾಗೂ ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ.ಇಂದ್ರಾಣಿ ವಿ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.


Reg. No. RG004S220000013
AMARESHWAR
SOUHARDA CREDIT CO-OPERATIVE SOCIETY LIMITED
Madina Complex Main Road Aurad(B) 585326 Dist. Bidar (Karnataka)
Cell : 9739472824, 9008482824, 9008582825.
Email: amareshwarltd@gmail.com, Web: www.amareshwar.in

ಐದನೇ ವರ್ಷದ ಸಾಮಾನ್ಯ ಸಭೆಯ ನೋಟಿಸ್

ದಿನಾಂಕ 21-08-2026 ರ ಶುಕ್ರವಾರ ರಂದು ಅಮರೇಶ್ವರ ಸೌಹಾರ್ದ ಕ್ರೇಡಿಟ್ ಕೋ-ಆಪರೇಟಿವ್ ಲಿ. ಔರಾದ[ಬಾ] ಇದರ ನಾಲ್ಕನೇ ವರ್ಷದ ಸಾಮಾನ್ಯ ಸಭೆಯನ್ನು ಸಹಕಾರಿಯ ಅಧ್ಯಕ್ಷರಾದ ಶ್ರೀ ಮಾರುತಿ ವಾಡಿಕರ ಇವರ ಅಧ್ಯಕ್ಷತೆಯಲ್ಲಿ ಸಹಕಾರಿಯ ಕಛೇರಿಯಲ್ಲಿ ಸಮಯ ಮಧ್ಯಾಹ್ನ 1.30 ಗಂಟೆಗೆ ಕರೆಯ ಲಾಗಿದೆ. ಕೆಳಕಂಡ ವಿಷಯಗಳ ಕುರಿತು ಚರ್ಚಿಸಿ ನಿರ್ಣಯಗಳನ್ನು ಕೈಗೊಳ್ಳಲು ತಾವು ತಪ್ಪದೇ ಸಭೆಗೆ ಹಾಜರಾಗಿ ತಮ್ಮ ಅಮೂಲ್ಯ ಸಲಹೆ ಸೂಚನೆಗಳನ್ನು ನೀಡಲು ವಿನಂತಿ.

-ಃ ಸಭೆಯಲ್ಲಿ ಚರ್ಚಿಸುವ ವಿಷಯಗಳು ಃ-

1] ಸಹಕಾರಿಯ ಸದಸ್ಯರಿಗೆ ಸ್ವಾಗತ
2] ಸಭೆಯ ನೋಟಿಸ್ ಓದಿ ದಾಖಲಿಸುವುದು
3] 2025-26ನೇ ಸಾಲಿನ ವರದಿಯನ್ನು ಮಂಡಿಸಿ ಅನುಮೊದನೆ ಪಡೆಯುವುದು.
4] ಹಿಂದಿನ ಸಭೆಯ ನಡಾವಳಿ ಮತ್ತು ನಿರ್ಣಯ ಓದಿ ಅನುಮೊದಿಸುವುದು.
5] 2025-26 ನೇ ಸಾಲಿನ ಲೆಕ್ಕ ಪರಿಶೋಧನೆ ವರದಿಯನ್ನು ಅಂಗೀಕರಿಸುವುದು.
6] 2025-26ನೇ ಸಾಲಿನ ಲಾಭ ವಿಂಗಡಣೆ ಮಾಡುವ ಕುರಿತು.
7] 2026-27 ನೇ ಸಾಲಿನ ಕ್ರೀಯಾ ಯೋಜನೆಯನ್ನು ಅನುಮೋದಿಸುವುದು
8] 2026-27ನೇ ಸಾಲಿನ ಅಂದಾಜು ಆಯ ವ್ಯಯವನ್ನು ಮಂಜೂರು ಮಾಡುವುದು.
9] 2026-27ನೇ ಸಾಲಿಗೆ ಲೆಕ್ಕ ಪರಿಶೋಧಕರ ನೇಮಕಾತಿ.
10] ಸಹಕಾರಿಯ ವತಿಯಿಂದ ಸದಸ್ಯರ ಅನುಕೂಲಕ್ಕಾಗಿ ಶಾಖೆಗಳನ್ನು ಆರಂಭಿಸುವ ಕುರಿತು.
11] ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು.

ಸ್ಥಳ ಃ ಔರಾದ[ಬಾ]
ದಿನಾಂಕಃ 05-08-2026.

ಆಡಳಿತ ಮಂಡಳಿಯ ಅಪ್ಪಣೆ ಮೇರೆಗೆ
C.E.O
AMARESHWAR
Souharda Credit Co-Operative Ltd
Branch : AURAD(B)

# ರೈತರ ಬೇಡಿಕೆ ಈಡೇರದಿದ್ದರೆ 11ಕ್ಕೆ ಕಮಲನಗರ ಬಂದ್ ಹಾಗೂ ರಸ್ತೆ ತಡೆ ಚಳವಳಿ: ರೈತ ಸಂಘದ ಎಚ್ಚರಿಕೆ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ಸತತ ಮಳೆ ಅಭಾವ, ಬೆಳೆ ಹಾನಿ, ಬೆಳೆ ವಿಮೆ ಪರಿಹಾರ ಜಮೆಯಾಗದಿರುವುದು ಹಾಗೂ ಸಕ್ಕರೆ ಕಾರ್ಖಾನೆಗಳಿಂದ ಕಬ್ಬಿನ ಬಾಕಿ ಬಿಲ್ ಪಾವತಿಯಾಗದಿರುವುದನ್ನು ಖಂಡಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಕಮಲನಗರ ತಾಲೂಕು ಘಟಕ ವತಿಯಿಂದ ತಹಶೀಲ್ದಾರರ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಿ, ಉಗ್ರ ಹೋರಾಟದ ಎಚ್ಚರಿಕೆ ನೀಡಲಾಗಿದೆ.ಬೆಳೆ ಹಾನಿ ಪರಿಹಾರ ಹಾಗೂ ವಿವಿಧ ರೈತಪರ ಬೇಡಿಕೆಗಳನ್ನು ಆಗಸ್ಟ್ 10 ರೊಳಗಾಗಿ ಈಡೇರಿಸದಿದ್ದಲ್ಲಿ, ಆಗಸ್ಟ್ 11ರಂದು ಬೆಳಿಗ್ಗೆ 11:30ಕ್ಕೆ ಕಮಲನಗರ ತಾಲೂಕಿನ ಡಾ. ಚನ್ನಬಸವ ಗ್ರಂಥಾಲಯದಿಂದ ಮೆರವಣಿಗೆ ಹೊರಟು ಅಲ್ಲಮಪ್ರಭು ವೃತ್ತದಲ್ಲಿ ಬೃಹತ್ ರಸ್ತೆ ತಡೆ ಚಳವಳಿ ನಡೆಸಲಾಗುವುದು ಎಂದು ರೈತ ಮುಖಂಡರು ಎಚ್ಚರಿಸಿದ್ದಾರೆ.

ರೈತರ ಪ್ರಮುಖ ಬೇಡಿಕೆಗಳು:ಬರ ಪರಿಹಾರ ಧನ ಪಾವತಿ: ಕಮಲನಗರ ತಾಲೂಕಿನಲ್ಲಿ ಕಳೆದ 5-6 ವರ್ಷಗಳಿಂದ ಅತಿವೃಷ್ಟಿ ಹಾಗೂ ಅನಾವೃಷ್ಟಿಯಿಂದ ರೈತರು ತೀವ್ರಸಂಕಷ್ಟದಲ್ಲಿದ್ದಾರೆ. ತಾಲೂಕನ್ನು ಬರಪೀಡಿತ ಎಂದು ಘೋಷಿಸಿ, ಪ್ರತಿ ಎಕರೆಗೆ ?50,000 ತಕ್ಷಣ ಪರಿಹಾರ ಧನವನ್ನು ರೈತರ ಖಾತೆಗೆ ಜಮೆ ಮಾಡಬೇಕು.

ಬೆಳೆ ವಿಮೆ ವಿತರಣೆ: 2025-26ನೇ ಸಾಲಿನ 'ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆ'ಯಡಿ ಬೀದರ್ ಜಿಲ್ಲೆಯ ಬಸವಕಲ್ಯಾಣ ಸೇರಿದಂತೆ ಇತರ ತಾಲೂಕುಗಳ ರೈತರಿಗೆ ಲಾಭ ದೊರೆತಿದೆ. ಆದರೆ ಕಮಲನಗರ ತಾಲೂಕಿನ ಅರ್ಹ ರೈತರು ಇದರಿಂದ ವಂಚಿತರಾಗಿದ್ದು, ತಕ್ಷಣವೇ ಬೆಳೆ ವಿಮೆ ಹಣ ಬಿಡುಗಡೆ ಮಾಡಬೇಕು.



### ಸಂಪೂರ್ಣ ಸಾಲ ಮನ್ನಾ

ಸತತ ಬೆಳೆ ನಷ್ಟ ಹಾಗೂ ಸಾಲದ ಸುಳಿಯಲ್ಲಿ ಸಿಲುಕಿರುವ ತಾಲೂಕಿನ ರೈತರ ಎಲ್ಲಾ ರೀತಿಯ ಕೃಷಿ ಸಾಲಗಳನ್ನು ಸರ್ಕಾರ ಸಂಪೂರ್ಣವಾಗಿ ಮನ್ನಾ ಮಾಡಬೇಕು.ಕಬ್ಬಿನ ಬಾಕಿ ಬಿಲ್ ಪಾವತಿ: ಬೀದರ್ ಜಿಲ್ಲೆಯ ಮಹಾತ್ಮ ಗಾಂಧಿ ಸಹಕಾರಿ ಸಕ್ಕರೆ ಕಾರ್ಖಾನೆಯು ರೈತರಿಗೆ ನೀಡಬೇಕಾದ ಕಬ್ಬಿನ ಬಾಕಿ ಬಿಲ್ ಅನ್ನು ತಕ್ಷಣವೇ ಪೂರ್ಣಪ್ರಮಾಣದಲ್ಲಿ ಬಿಡುಗಡೆ ಮಾಡಬೇಕು.?ಬಿ.ಎಸ್.ಎಸ್.ಕೆ ಕಾರ್ಖಾನೆ ಪುನರಾರಂಭ: ಕಳೆದ 3-4 ವರ್ಷಗಳಿಂದ ಸ್ಥಗಿತಗೊಂಡಿರುವ ಜಿಲ್ಲೆಯ ಅತಿ ಹಳೆಯ ಬಿ.ಎಸ್.ಎಸ್.ಕೆ(B.S.S.K)ಸಕ್ಕರೆ ಕಾರ್ಖಾನೆಗೆ ಸರ್ಕಾರಿ ನೆರವು ನೀಡಿ ತಕ್ಷಣ ಆರಂಭಿಸಬೇಕು.

"ಪ್ರತಿಭಟನೆಯ ಎಚ್ಚರಿಕೆ: "ಆಗಸ್ಟ್ 10ರ ಒಳಗಾಗಿ ಸರ್ಕಾರ ಹಾಗೂ ಜಿಲ್ಲಾಡಳಿತ ನಮ್ಮ ನ್ಯಾಯಯುತ ಬೇಡಿಕೆಗಳಿಗೆ ಸ್ಪಂದಿಸದಿದ್ದಲ್ಲಿ, ಆಗಸ್ಟ್ 11ರ ರಸ್ತೆ ತಡೆ ಹೋರಾಟದಿಂದ ಉಂಟಾಗುವ ಎಲ್ಲಾ ಅಹಿತಕರ ಘಟನೆಗಳಿಗೆ ಸರ್ಕಾರ ಹಾಗೂ ಸಂಬಂಧಪಟ್ಟ ಅಧಿಕಾರಿಗಳೇ ನೇರ ಹೊಣೆ ಹೊರಬೇಕಾಗುತ್ತದೆ."

**-ಪ್ರವೀಣ ಕುಲಕರ್ಣಿ,**
**ಅಧ್ಯಕ್ಷರು,ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಕಮಲನಗರ ತಾಲೂಕು ಘಟಕ**

ಮನವಿ ಸಲ್ಲಿಕೆ ವೇಳೆ ರೈತ ಸಂಘದ ಅಧ್ಯಕ್ಷರಾದ ಪ್ರವೀಣ ಸುಧಾಕರರಾವ್ ಕುಲಕರ್ಣಿ, ಉಪಾಧ್ಯಕ್ಷ ವೈಜಿನಾಥ ವಡ್ಡೆ, ಕಾರ್ಯದರ್ಶಿ ವಿಠಲರಾವ್ ಪಾಟೀಲ ಬಾಲೂರ (ಕ) ಹಾಗೂ , ಶ್ರಿರಂಗ ಪರಿಹಾರ, ಗುಂಡಪ್ಪ ದಾನ , ಶ್ರೀರಂಗ್, ರಮೇಶ್, ವಿಶಾಲರಾವ್, ಅಬ್ದುಲ್ ಮುಖೀದ್,ಪ್ರವೀಣ ಖಾನಾಪುರ,ರಾಮೇಶ್ವರ,ಮನೋಜ ಪಾಟೀಲ, ಸೇರಿದಂತೆ ನೂರಾರು ರೈತರು ಹಾಗೂ ಸಂಘಟನೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ವಸತಿ ನಿಲಯಗಳ ಕಾರ್ಮಿಕ ಸಂಘದ ನೂತನ ಸಮಿತಿ ರಚನೆ: ಎಂ.ಗಂಗಾಧರ



• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ಆ.05.ಕರ್ನಾಟಕ ರಾಜ್ಯ ವಸತಿ ನಿಲಯಗಳ ಕಾರ್ಮಿಕ ಸಂಘ-ಟಯುಸಿಐ ವತಿಯಿಂದ ನಡೆದ ಸಭೆಯಲ್ಲಿ ಸಿಂಧನೂರು ತಾಲೂಕು ನೂತನ ಸಮಿತಿಯನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಗಿತು ಎಂದು ಮುಖಂಡರಾದ ಎಂ. ಗಂಗಾಧರ ತಿಳಿಸಿದರು.

ಸಂಘದ ಅಧ್ಯಕ್ಷರಾಗಿ ನಜೀರ್ ಅಹ್ಮದ್, ಉಪಾಧ್ಯಕ್ಷರಾಗಿ ಚೆನ್ನಮ್ಮ, ಸಂತೋಷ ಬಾಲಿ, ಶೇಖರಪ್ಪ, ಪ್ರಧಾನ ಕಾರ್ಯದರ್ಶಿಯಾಗಿ ಯಮನೂರು, ಸಹ ಕಾರ್ಯದರ್ಶಿಯಾಗಿ ಸಾಲಿಯಾ ಬೇಗಂ ಹಾಗೂ ಖಜಾಂಚಿಯಾಗಿ ನಸ್ರಿನಾ ಬೇಗಂ ಆಯ್ಕೆಯಾಗಿದ್ದಾರೆ. ಷಣ್ಮುಖಪ್ಪ, ಪದ್ದಮ್ಮ, ಅಂಬಮ್ಮ ಮತ್ತು ಅನ್ನಮ್ಮ ಅವರು ಕಾರ್ಯಕಾರಿ ಸಮಿತಿ ಸದಸ್ಯರಾಗಿ ಆಯ್ಕೆಗೊಂಡಿದ್ದಾರೆ.ಸಭೆಯಲ್ಲಿ ಮಾತನಾಡಿದ ಸಿಪಿಐ(ಎಂಎಲ್) ರೆಡ್ ಸ್ಟಾರ್ ರಾಜ್ಯ ಕಾರ್ಯದರ್ಶಿ ಎಂ. ಗಂಗಾಧರ್, ಕಾರ್ಮಿಕರ ಬಾಕಿ ವೇತನವನ್ನು ಕೂಡಲೇ ಪಾವತಿಸಬೇಕು, ಪರಿಷ್ಕೃತ ಕನಿಷ್ಠ ವೇತನ ಜಾರಿಗೊಳಿಸಬೇಕು, ಪಿಎಫ್-ಇಎಸ್ಐ ಸೌಲಭ್ಯ ಕಲ್ಪಿಸಬೇಕು ಮತ್ತು ಗುತ್ತಿಗೆ ಕಾರ್ಮಿಕರನ್ನು ಖಾಯಂಗೊಳಿಸಬೇಕು. ನ್ಯಾಯಯುತ ಬೇಡಿಕೆ ಈಡೇರದಿದ್ದರೆ ಉಗ್ರ ಹೋರಾಟ ನಡೆಸುವುದಾಗಿ ಎಚ್ಚರಿಸಿದರು.ಅಲ್ಲದೆ, ಸೆಪ್ಟೆಂಬರ್ 16 ರಿಂದ 20ರವರೆಗೆ ರಾಯಚೂರಿನಲ್ಲಿ ನಡೆಯಲಿರುವ ಸಿಪಿಐ(ಎಂಎಲ್) ರೆಡ್ ಸ್ಟಾರ್ 13ನೇ ಮಹಾ ಅಧಿವೇಶನವನ್ನು ಯಶಸ್ವಿಗೊಳಿಸಲು ಕಾರ್ಮಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕರೆ ನೀಡಲಾಗಿದೆ ಎಂದು ತಿಳಿಸಿದರು.ಸಭೆಯಲ್ಲಿ ವಿವಿಧ ಇಲಾಖೆಗಳ ವಸತಿ ನಿಲಯಗಳ ನೂರಾರು ಕಾರ್ಮಿಕರು ಪಾಲ್ಗೊಂಡಿದ್ದರು.

# ಮಹಿಳಾ ಸಮ್ಮೇಳನದಲ್ಲಿ ಮಹಿಳೆಯರಿಗೆ ಪ್ರಥಮಾದ್ಯತೆ : ಚನಶೆಟ್ಟಿ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಪಟ್ಟಣದಲ್ಲಿ ಇದೇ ಆಗಷ್ಟ 11 ರಂದು ನಡೆಸಲು ನಿರ್ಧರಿಸಿರುವ ಜಿಲ್ಲಾ ಮಟ್ಟದ ಮಹಿಳಾ ಸಮ್ಮೇಳನದಲ್ಲಿ ಮಹಿಳೆಯರಿಗೇ ಪ್ರಥಮಾದ್ಯತೆ ಕೊಡಲಾಗುವುದು ಎಂದು ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಸುರೇಶ ಚನಶೆಟ್ಟಿ ಅಭಿಪ್ರಾಯಪಟ್ಟರು.

ಪಟ್ಟಣದ ಕುಂಬಾರ ಗುಂಡಯ್ಯಾ ಕಲ್ಯಾಣ ಮಂಟಪದಲ್ಲಿ ಇದೇ ಆ.11 ರಂದು ನಡೆಸಲು ನಿರ್ಧರಿಸಿರುವ ಕ.ಸಾ.ಪ ಜಿಲ್ಲಾ ಮಟ್ಟದ ಮಹಿಳಾ ಸಮ್ಮೇಳದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಉದ್ಘಾಟನೆ ಮತ್ತು ಸಮಾರೋಪ ಹೊರತು ಪಡೆಸಿ, ಎಲ್ಲಾ ಗೋಷ್ಠಿಗಳಲ್ಲಿಯೂ ವೇದಿಕೆಯ ಮೇಲೆ ಮಹಿಳೆಯರೇ ಇರುವಂತೆ ನೋಡಿಕೊಳ್ಳಲಾಗುವುದು. ಸಮ್ಮೇಳನದಲ್ಲಿ ಮಹಿಳೆಯರಿಗೆ ಪ್ರಥಮಾದ್ಯತೆ ನೀಡಲಾಗುವುದು. ಕಾರ್ಯಕ್ರಮದ ಸಮಿತಿಗಳಲ್ಲಿರುವ ಎಲ್ಲಾ ಸದಸ್ಯರು ತಮ್ಮ ತಮ್ಮ ಕಾರ್ಯವನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಸಮ್ಮೇಳನದಲ್ಲಿ ಯಾವುದೇ ಲೋಪ ಬರದಂತೆ ಕನ್ನಡದ ಮನಸ್ಸುಗಳು ಎಲ್ಲರೂ ಒಗ್ಗಟ್ಟಾಗಿ ದುಡಿಯಬೇಕು ಎಂದು ಹೇಳಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕಸಾಪ ತಾಲೂಕು ಅಧ್ಯಕ್ಷ ನಾಗಭೂಷಣ ಮಾಮಡಿ, ಲಿಂ. ಡಾ। ಚನ್ನಬಸವ ಪಟ್ಟದ್ದೇವರ ಕ್ಷೇತ್ರವಾದ ಭಾಲ್ಕಿಯಲ್ಲಿ ಮಹಿಳಾ ಗೋಷ್ಠಿ ನಡೆಸಲು ನಿರ್ಧರಿಸಿರುವುದು ಸಂತಸದ ಸಂಗತಿ. ಡಾ। ಚನ್ನಬಸವ ಪಟ್ಟದ್ದೇವರು ಎಲ್ಲದರಲ್ಲಿಯೂ ಮಹಿಳೆಯರಿಗೆ ಸಮಾನ ಅವಕಾಶ ಕಲ್ಪಿಸಿಕೊಟ್ಟಿದ್ದರು. ಈ ಭಾಗದ ಮಹಿಳೆಯರು ಶೈಕ್ಷಣಿಕವಾಗಿ ಮುಂದುವರೆಯುವ ನಿಟ್ಟಿನಲ್ಲಿ ಶಾಂತಿ ವರ್ಧಕ ಶಿಕ್ಷಣ ಸಂಸ್ಥೆಯ ಅಡಿಯಲ್ಲಿ, ಮಹಿಳೆಯರಿಗಾಗಿಯೇ ಅಕ್ಕಮಹಾದೇವಿ ಪ್ರೌಢಶಾಲೆ, ಪ.ಪೂ ಕಾಲೇಜು, ಡಿಗ್ರೀ ಕಾಲೇಜು ಸ್ಥಾಪಿಸಿ, ಇಲ್ಲಿಯ ಮಹಿಳೆಯರು ಶಿಕ್ಷಣ ರಂಗದಲ್ಲಿ ಉತ್ತಮ ಸಾಧನೆ ಮಾಡಲು ಅನುವು ಮಾಡಿಕೊಟ್ಟಿದ್ದರು ಎಂದು ಸ್ಮರಿಸಿದರು. ಕಸಾಪ ಜಿಲ್ಲಾ ಖಜಾಂಚಿ ಶಿವಶಂಕರ ಟೋಕರೆ ಮಾತನಾಡಿ, ಆ.11 ರಂದು ಭಾಲ್ಕಿಯಲ್ಲಿ ನಡೆಯುವ ಜಿಲಾ ಮಟ್ಟದ ಮಹಿಳಾ ಸಾಹಿತ್ಯ ಸಮ್ಮೇಳನವು ಯಶಸ್ವಿಯಾಗಿ ನಡೆಸಲು ಎಲ್ಲರ ಸಹಕಾರ ಅಗತ್ಯ, ಬೆಳಿಗ್ಗೆ ಧ್ವಜಾರೋಹಣ ದೊಂದಿಗೆ ಪ್ರಾರಂಭವಾಗುವು ಸಮ್ಮೇಳನದ ಎಲ್ಲಾ ಕಾರ್ಯಕ್ರಮಗಳು ಅಚ್ಚುಕಟ್ಟಾಗಿ ನಿರ್ವಹಿಸಿಕೊಂಡು ಹೋಗುವ ನಿಟ್ಟಿನಲ್ಲಿ ಕಸಾಪ ಪದಾಧಿಕಾರಿಗಳು ಶ್ರಮ ವಹಸಿಬೇಕು. ಇನ್ನು ಕೇಲವೇ ದಿನಗಳಲ್ಲಿ ಸಮ್ಮೇಳನ ಇರುವುದರಿಂದ ಎಲ್ಲರೂ ಒಗ್ಗಟ್ಟಾಗಿ ಕಾರ್ಯನಿರ್ವಹಿಸಬೇಕು ಎಂದು ಸಲಹೆ ನೀಡಿದರು.

ಕಸಾಪ ತಾಲೂಕು ಕಾರ್ಯದರ್ಶಿಗಳಾದ ರಮೇಶ ಚಿದ್ರಿ, ಮತ್ತು ಹಣಮಂತ ಕಾರಾಮುಂಗೆಯರು ವಿವಿಧ ಸಮಿತಿಗಳನ್ನು ರಚಿಸಿ, ಸಮ್ಮೇಳನದ ಯಶಸ್ವಿಯ ಬಗ್ಗೆ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಸೋಮನಾಥಪ್ಪ ಅಸ್ಟೂರೆ, ರೇಖಾಬಾಯಿ ಅಸ್ಟೂರೆ, ಚಂದ್ರಕಲಾ ಡಿಗ್ಗೆ, ಸುನಿತಾ ಮಮ್ಮಾ ಉಪಸ್ಥಿತರಿದ್ದರು.



### ವಿವಿಧ ಸಮಿತಿಗಳ ವಿವರ

ಧ್ವಜಾರೋಹಣ ಸಮಿತಿಯಲ್ಲಿ, ಐಜಿಕ್ ಬಂಗಾರೆ, ಸೋಮನಾಥ ಹೊಸಾಳೆ, ಜಿಪ್ಸನ್ ಕೋಟೆ. ಮೆರವಣಿಗೆ ಸಮಿತಿಯಲ್ಲಿ, ಹಣಮಂತ ಕಾರಾಮುಂಗೆ, ದೇವಿದಾಸ ಮೇತ್ರೆ, ಚಂದ್ರಕಾಂತ ತಳವಾಡೆ, ಸುಜಾತಾ ಪಾಟೀಲ, ಮಲ್ಲಮ್ಮಾ ನಾಗನಕೆರೆ, ಸುನಿತಾ ಮಮ್ಮಾ, ಪೂರ್ಣಿಮಾ ಪಾಟೀಲ, ಸತ್ಯವಾನ ಕಾಂಬಳೆ, ಸಂತೋಷ ಬಿರಾದಾರ, ಅಶೋಕ ಬಾವುಗೆ. ಪ್ರಚಾರ ಸಮಿತಿಯಲ್ಲಿ, ಜೈರಾಜ ಪಾತ್ರೆ, ಜೈರಾಜ ದಾಬಶೆಟ್ಟೆ, ಸಂತೋಷ ಬಿಜಿಪಾಟೀಲ, ಗಣಪತಿ ಬೋಚರೆ, ಅಶೋಕ ರಾಜೋಳೆ, ಸುರೇಶ ಕನಶೆಟ್ಟಿ, ಬಸವರಾಜ ಪ್ರಭಾ. ವೇದಿಕೆ ಸಮಿತಿಯಲ್ಲಿ, ರಮೇಶ ಚಿದ್ರಿ, ದೀಪಕ ಥಮಕೆ, ಕುಪೇಂದ್ರ ಜಗಶೆಟ್ಟಿ, ಕೀರ್ತಿಲತಾ ಹೊಸಾಳೆ, ನಿರ್ಮಲಾ ಜಮಾದಾರ, ಅಂಜನಾ ಮಾಲಗಾರ, ವಿಜಯಲಕ್ಷ್ಮಿ ಹೊಸಾಳೆ, ಆರತಿ ಪಾತ್ರೆ, ಪಾರ್ವತಿ ಧುಮ್ಮನಸೂರೆ, ಕಾಶಿನಾಥ ಲದ್ದೆ, ಅಲಂಕಾರ ಸಮಿತಿಯಲ್ಲಿ ಜಿಪ್ಸನ್ ಕೋಟೆ, ಪರಮೇಶ್ವರ ಕರಡ್ಯಾಳೆ, ವಿಜಯ ಜಾಧವ, ಶಿವಕುಮಾರ, ಮಲ್ಲೇಶ್ವರ ಬಡಿಗೇರ, ಸಂತೋಷ ಪಾಟೀಲ, ಶಾಂತಾಬಾಯಿ ಬೇಲೂರೆ, ಸಾಂಸ್ಕೃತಿಕ ಸಮಿತಿ, ಅಕ್ಷಯ ಮುದ್ದಾ, ಶೈಲಜಾ ನಾರಾ, ಶಕುಂತಲಾ ಬಚ್ಚಣ್ಣ, ಪ್ರೇಮಲಾ ಸ್ವಾಮಿ, ಶ್ರೀದೇವಿ ಸ್ವಾಮಿ, ಆಶಾ ರಾಠೋಡ, ಸುರೇಖಾ ಲಿಂಬಾವೆ. ಪ್ರಸಾದ ಸಮಿತಿಯಲ್ಲಿ, ಶರಣಪ್ಪ ಬಿರಾದಾರ, ಬಸವರಾಜ ತೇಗಂಪೂರೆ, ಭಗವಾನ ವಲಂಡೆ, ಸಂದೀಪ ಉಮಾಜಿ, ಬಸವರಾಜ ಮಡಿವಾಳ. ಮಹಿಳಾ ಸಮಿತಿಯಲ್ಲಿ ಶುಭಾಂಗಿ ಚನ್ನಬಸವಣ್ಣ ಬಳತೆ, ರೇಖಾ ಮಹಾಜನ, ಮಾಯಾದೇವಿ ಗೋಖಲೆ, ಪುಷ್ಪಾ ಗಂದಗೆ, ಸರಸ್ವತಿ ಹುಲಸೂರೆ, ಗೀತಾ ಪಾಟೀಲ. ಅತಿಥಿಗಳ ವ್ಯವಸ್ಥಾ ಸಮಿತಿ, ಮಲ್ಲಿಕಾರ್ಜುನ ಹಲಮಂಡಗೆ, ಸುಭಾಷ ಹುಲಸೂರೆ, ತಿಪ್ಪಣ್ಣ ಶಿವಪೂರೆ, ಬಸವರಾಜ ರಂಜೇರೆ, ಗುಂಡಪ್ಪ ಸಂಗಮಕರ, ಶಂಭುಲಿಂಗ ಕಾಮಣ್ಣ, ಶಿವಾನಂದ ಗುಂದಗೆ, ಮಹೇಶ ರಾಚೋಟೆ, ಸುನಿತಾ ಮಮ್ಮಾ, ಚಂದ್ರಕಲಾ ಡಿಗ್ಗೆ. ಆಹ್ವಾನ ಪತ್ರಿಕೆ ವಿತರಣಾ ಸಮಿತಿ, ಮಲ್ಲಿಕಾರ್ಜುನ ಪಾಟೀಲ ಧನ್ನೂರ(ಹೆಚ್), ಐಜಿಕ ಬಂಗಾರೆ, ಚಂದ್ರಕಾಂತ ತಳವಾಡೆ, ಯೋಗೇಶ ಹಿರೇಮಠ, ನೀಲಕಂಠ ತುರಣೆ, ಶಿವಕುಮಾರ ಸ್ವಾಮಿ.

# ನಾಟಿವೈದ್ಯ ಪೀರು ನಾಯ್ಕ ದಂಪತಿಗಳಿಗೆ ಸನ್ಮಾನ



• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ಪತಂಜಲಿ ಯೋಗ ಸಮಿತಿ, ಮಹಿಳಾ ಪತಂಜಲಿ ಯೋಗ ಸಮಿತಿ, ಭಾರತ ಸ್ವಾಭಿಮಾನ ಟ್ರಸ್ಟ್, ಯುವ ಭಾರತ, ಕಿಸಾನ್ ಯೋಗ ಸಮಿತಿ ಲಾಯನ್ಸ್ ಕ್ಲಬ್ ಅಂಕೋಲಾ ಸಿಟಿ ಇವರ ಸಂಯುಕ್ತ ಆಶ್ರಯದಲ್ಲಿ ಆಚಾರ್ಯ ಬಾಲಕೃಷ್ಣ ಜನ್ಮದಿನದ ನಿಮಿತ್ತ ಆಚರಿಸಲಾದ ಕಾರ್ಯಕ್ರಮದಲ್ಲಿ ಹಾವು, ನಾಯಿ ಹಾಗೂ ವಿವಿಧ ವಿಷಜಂತುಗಳ ಕಡಿತಕ್ಕೆ ನಾಟಿ ಔಷಧ ನೀಡುವ ಮೂಲಕ ದೀರ್ಘಕಾಲದಿಂದ ಜನಸೇವೆಯಲ್ಲಿ ತೊಡಗಿಸಿಕೊಂಡಿರುವ ಕುಂಬಾರಕೇರಿಯ ಪೀರು ಅನಂತ ನಾಯ್ಕ ದಂಪತಿಗಳನ್ನು ಸನ್ಮಾನಿಸಿದರು.

# ಇಂದು ಜಿಲ್ಲಾ ವಿಜ್ಞಾನ ಕೇಂದ್ರದಿಂದ ಹಿರೋಷಿಮಾ ದಿನ ಆಚರಣೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಆ.05:ಹಿರೋಷಿಮಾ ಮತ್ತು ನಾಗಾಸಾಕಿ ದಿನವನ್ನು ಸ್ಮರಿಸಲು ಮತ್ತು ಪರಮಾಣು ಬಾಂಬ್ ದಾಳಿಯ ವಿನಾಶಕಾರಿ ಮಾನವೀಯ ಮತ್ತು ಪರಿಸರ ಪರಿಣಾಮಗಳ ಬಗ್ಗೆ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಲು ಕಲಬುರಗಿ ಜಿಲ್ಲಾ ವಿಜ್ಞಾನ ಕೇಂದ್ರದ ವತಿಯಿಂದ ಇದೇ ಆಗಸ್ಟ್ 6 ಮತ್ತು 7ರಂದು ಶಾಲಾ ಮತ್ತು ಕಾಲೇಜು ವಿದ್ಯಾರ್ಥಿಗಳಿಗೆ ವಿವಿಧ ಶೈಕ್ಷಣಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಜಿಲ್ಲಾ ವಿಜ್ಞಾನ ಕೇಂದ್ರದ ಜಿಲ್ಲಾ ವಿಜ್ಞಾನ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆಗಸ್ಟ್ 6 ರಂದು ಬೆಳಿಗ್ಗೆ 11 ಗಂಟೆಗೆ "ಹಿರೋಷಿಮಾ ಮತ್ತು ನಾಗಸಾಕಿಯ ಪರಮಾಣು ಬಾಂಬ್ ದಾಳಿಗಳು" ಕುರಿತು ಚಲನಚಿತ್ರ ಪ್ರದರ್ಶನ ಮತ್ತು ಪರಮಾಣು ರಿಯಾಕ್ಟರ್ ಮಾದರಿಯ ಪ್ರದರ್ಶನವನ್ನು ಹಮ್ಮಿಕೊಳ್ಳಲಾಗಿದೆ. ಆಗಸ್ಟ್ 7 ರಂದು ಬೆಳಿಗ್ಗೆ 11 ಗಂಟೆಗೆ ಕಲಬುರಗಿಯ ಎಸ್‌ಬಿ ವಿಜ್ಞಾನ ಕಾಲೇಜಿನ ಭೌತಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ಬಾಲಾಜಿ ಬಿರಾದಾರ್ ಅವರಿಂದ ಸಂವಾದಾತ್ಮಕ ವಿಜ್ಞಾನ ಜಾಗೃತಿ ಉಪನ್ಯಾಸ ಕಾರ್ಯಕ್ರಮ ನಡೆಯಲಿದೆ.

# ತಾಯಿ ಸೇವೆ ಅಪೂರ್ವ: ಡಾ.ಗವಿಸಿದ್ದಪ್ಪ ಪಾಟೀಲ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಇವತ್ತಿನ ದಿನ ಮಾನಗಳು ಬದುಕಿನಲ್ಲಿ ತಲ್ಲಣ ಗೊಂಡಿದೆ.ಮಾನವೀಯತೆ, ಸಂಬಂಧಗಳು,ವಾತ್ಸಲ್ಯ, ತಾಯಿತನದ ಪ್ರಜ್ಞೆ ಮಾಸುವ ದಿನಗಳಲ್ಲಿ ತಾಯಿಯನ್ನು ಸ್ಮರಿಸಿ,ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡಿ,ಸನ್ಮಾನ ಮಾಡುವ ಡಾ.ಕೆ.ಎಸ್.ಬಂಧು ಮತ್ತು ಮಹಾದೇವಿ ಬಂಧು ಅವರ ತಾಯಿ ಸೇವೆ ಅಪೂರ್ವ ಎಂದು ಹಿರಿಯ ಸಾಹಿತಿ ಡಾ.ಗವಿಸಿದ್ಧಪ್ಪ ಪಾಟೀಲ ನುಡಿದರು.

ಚಂದನಕೇರಾದ ಸರಕಾರಿ ಪದವಿ ಪೂರ್ವ ಕಾಲೇಜು ಮತ್ತು ಸಿದ್ದಾರ್ಥ ಶಿಕ್ಷಣ ಕಲ್ಯಾಣ ಟ್ರಸ್ಟ್ ಕಲಬುರಗಿ ಸಂಯುಕ್ತ ಆಶ್ರಯದಲ್ಲಿ ದಿ.ಶ್ರೀಮತಿ ನೀಲಮ್ಮ ಶಂಕರೆಪ್ಪ ಬಂಧು ಸಿದ್ದೇಶ್ವರ ಅವರ 17 ನೇ ಪುಣ್ಯ ಸ್ಮರಣೆ ನಿಮಿತ್ಯ

ಗರಿಷ್ಠ ಅಂಕ ಪಡೆದ ಪಿಯುಸಿ ವಿದ್ಯಾರ್ಥಿಗಳಿಗೆ ಸನ್ಮಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ಬಂಧು ದಂಪತಿಗಳು ಇಂದು ಐದು ಪಿಯುಸಿ ಮತ್ತು ಐದು ಎಸ್.ಎಸ್.ಎಲ್,ಸಿಯ ಕಾಲೇಜುಗಳಲ್ಲಿ ಗರಿಷ್ಠ ಅಂಕ ಪಡೆದ ವಿದ್ಯಾರ್ಥಿಗಳಿಗೆ ಗರಿಷ್ಠ ಅಂಕ ಪಡೆದವರಿಗೆ ಐದು ಸಾವಿರ ನಗದು,ಉಳಿದವರಿಗೆ ಪ್ರಮಾಣ ಪತ್ರ ನೀಡಿ ಗೌರ ವಿಸುವ ಕಾರ್ಯ ಶ್ಲಾಘನೀಯ. ಬಡತನ,ಅನಕ್ಷರಸ್ಥರ ಮಧ್ಯ ತಂದೆ ಡಪ್ಪಿನಾಟ,ನಾಟಕಮಾಡುವ ಕಲಾವಿದ, ತಾಯಿ ನೆರಳು ಹಿಡಿಯು ಕೆಲಸ ಮಾಡಿ ಓದಿ ನಮಗೆ ಈ ಕೈಯ ಕುಡುಗೋಲು,ಪಿಕಾಸು,ಮುಗಿದು; ಪೆನ್ನು ಹಿಡಿಯುವ ಕೆಲಸ ಮಾಡಿ ಎಂಬ ಮಾತೇ ಅವರ ಬದುಕಿಗೆ ಸ್ಫೂರ್ತಿಯಾಯಿತು.ಸಾಹಿತ್ಯ,ಸವ ಾಜ,ಶಿಕ್ಷಣ,ಕೊಡುಗೆಮಾಡುತ್ತಾ ತಾಯಿ ಸೇವೆ ಮಾಡುತ್ತಿರುವುದು ಸ್ತುತ್ಯವೆಂದರು.

ಮುಖ್ಯ ಅತಿಥಿಯಾದ ಲೇಖಕ ಡಾ.ರಾಜಕುಮಾರ ಮಾಳಗೆ ಮಾತನಾಡಿ ಸಮಾಜ ಬದಲಾಗಿದೆ ವೃದ್ಧಾಶ್ರಮ ಹೆಚ್ಚಾಗಿದೆ.ತಾಯಿ ಜನ್ಮ ನೀಡಿದ ತಾಯಿಯನ್ನು ಮರೆಯ ಬಾರದೆಂದರು.ಶಿಕ್ಷಣ ಪ್ರೇಮಿ ರಾಮರಾವ್ ಪಾಟೀಲ ನಮಗೆ ನೂರು ಎಕರೆ ಹೊಲವಿದೆ ಸುಪ್ರೀಂ ಕೋರ್ಟ್ ತನಕ ಹೋರಾಟ ಮಾಡಿದ್ದು ಇಂತಹ ತಾಯಿ- ತಂದೆ ಸೇವೆಯ ನೆನಪು ನಾವು ಇಂತಹ ಬಂಧು ಮಾಡಿದ್ದು ಸೇವೆ ಮೆಚ್ಚಬೇಕೆಂದರು.ಹಿರಿಯ



ಮುಖಂಡರಾದ ಕುಪೇಂದ್ರರಾ ವ್ ಫತ್ತೇಪೂರ,ವಕೀಲರಾದ ಪ್ರಕಾಶ ಬೋವಿ,ಮುಖ್ಯ ಗುರುಗಳಾದ ಬಸವಂತರೆಡ್ಡಿ,ಹುಮನಾಬಾದ ಶಿಕ್ಷಣ ತಜ್ಞ ಶಿವಶಂಕರ ತರನಳ್ಳಿ ಮಾತನಾಡಿದರು.

ಮುಖ್ಯ ಗುರುಗಳಾದ ಆದಾಮ ಪಠಾನ್,ಉಪನ್ಯಾಸಕರಾ

ದ ಜಗದೀಶ ಕೊಡದೂರ,ಸುನೀತಾ ಶೆಟ್ಟಿ, ಮೊದಲಾದವರಿ ದ್ದರು.

ಕುಮಾರಿ ಐಶ್ವರ್ಯ ಶಿವಶರಣಪ್ಪ ಅವರಿಗೆ ಐದು ಸಾವಿರ ನಗದು ಮತ್ತು ಪ್ರಮಾಣ ಪತ್ರ ನೀಡಿ ಗೌರವಿಸಲಾಯಿತು.

ಹನ್ನೊಂದು ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ಪುಸ್ತಕ ನೀಡಿ ಗೌರವಿಸಿದರು. ನಿವೃತ್ತ ಉಪನ್ಯಾಸಕ ಸಾಹಿತಿ ಡಾ.ಕೆ.ಎಸ್. ಬಂಧು ಮಾತನಾಡಿ ಕೇವಲ ಪೂಜೆ,ಪುನಸ್ಕಾರ ಮಾಡುವು ದಕ್ಕಿಂತ ವಿದ್ಯಾರ್ಥಿಗಳ ಮಧ್ಯ ಕಾರ್ಯಕ್ರಮ ಮಾಡಿದರೆ ಓದಲು ಪ್ರೊತ್ಸಾಹ ಸಿಗುವುದು ತಾಯಿಯ ಋಣ ತೀರಿಸ ಲಾರದ್ದು ಎಂದರು.

ಅಂಕಿತಾ ಸ್ವಾಗತ ಕೋರಿದರು ಶ್ರೀಮತಿ ಸಂಘಮಿತ್ರೆ ಪಟ್ನಾಯಕ ನಿರೂಪಿಸಿದರು ಪ್ರೀಯಾ ವಂದಿಸಿದರು.

# 102 ವರ್ಷದ ಇತಿಹಾಸದ ಹೀರದ ಸೂಗಮ್ಮ ಶಾಲೆ ಶತಮಾನೋತ್ಸವ ಸಂಭ್ರಮಕ್ಕೆ ಸಜ್ಜು

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನಗರದ ಶಿಕ್ಷಣ ಕ್ಷೇತ್ರದಲ್ಲಿ ವಿಶಿಷ್ಟ ಪರಂಪರೆ ಹೊಂದಿರುವ 102 ವರ್ಷದ ಇತಿಹಾಸದ ಹೀರದ ಸೂಗಮ್ಮ ಶಾಲೆ ತನ್ನ ಶತಮಾನೋತ್ಸವ ಸಂಭ್ರಮವನ್ನು ಆಗಸ್ಟ್ 8 ಮತ್ತು 9ರಂದು ಎರಡು ದಿನಗಳ ಕಾಲ ಅದ್ಧೂರಿಯಾಗಿ ಆಚರಿಸಲು ಸಜ್ಜಾಗಿದೆ. ಶಾಲಾ ಆವರಣದಲ್ಲಿ ನಡೆಯಲಿರುವ ಈ ಸಮಾರಂಭದಲ್ಲಿ ಶಿಕ್ಷಣ ಕ್ಷೇತ್ರದ ಗಣ್ಯರು, ಹಳೆಯ ವಿದ್ಯಾರ್ಥಿಗಳು, ದಾನಿಗಳು ಹಾಗೂ ಸಾರ್ವಜನಿಕರು ಭಾಗವಹಿಸಲಿದ್ದಾರೆ.

ನಗರದ ಹೊಸ ಬಸ್ ನಿಲ್ದಾಣದ ಎದುರು ಇರುವ ಹೀರದ ಸೂಗಮ್ಮ ಶಾಲೆ ಆವರಣದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಡಾ. ಅರವಿಂದ್ ಪಾಟೀಲ್, 1916ರಲ್ಲಿ ಹಾನಗಲ್ ಕುಮಾರ ಶಿವಯೋಗಿಗಳು ಹಾಗೂ ಉಜ್ಜಯಿನಿ ಪೀಠದ ಸಿದ್ದಲಿಂಗ ಶಿವಾಚಾರ್ಯ ಜಗದ್ಗುರುಗಳ ಮಾರ್ಗದರ್ಶನದಲ್ಲಿ ವೀರಶೈವ ವಿದ್ಯಾವರ್ಧಕ ಸಂಘ ಸ್ಥಾಪನೆಯಾಗಿ ಕಳೆದ ಶತಮಾನಕ್ಕೂ ಅಧಿಕ ಅವಧಿಯಿಂದ ಶಿಕ್ಷಣ ಮತ್ತು ಸಾಮಾಜಿಕ ಜಾಗೃತಿಯ ಸೇವೆಯನ್ನು ನಿರಂತರವಾಗಿ ಸಲ್ಲಿಸುತ್ತಿದೆ ಎಂದು ತಿಳಿಸಿದರು.




ಹೀರದ ಸೂಗಮ್ಮ ಶಾಲೆಯು 1924ರ ಏಪ್ರಿಲ್ 4ರಂದು ಗಣೇಶಗುಡಿ ಬೀದಿಯಲ್ಲಿನ ಚೌಕಿಯಲ್ಲಿ ಸಂಸ್ಕೃತ ಪಾಠಶಾಲೆಯಾಗಿ ಆರಂಭಗೊಂಡಿದ್ದು, ನಂತರ ಹಿರಿಯ ಪ್ರಾಥಮಿಕ ಶಾಲೆಯಾಗಿ ಬೆಳವಣಿಗೆ ಹೊಂದಿತು. 1995ರಲ್ಲಿ ಶಾಲೆಯನ್ನು ನೂತನ ಕಟ್ಟಡಕ್ಕೆ ಸ್ಥಳಾಂತರಿಸಲಾಗಿದ್ದು, ಪ್ರಸ್ತುತ ಕನ್ನಡ ಹಾಗೂ ಆಂಗ್ಲ ಮಾಧ್ಯಮಗಳಲ್ಲಿ ಒಟ್ಟು 824 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. 29 ಮಂದಿ ಶಿಕ್ಷಕರು ಗುಣಮಟ್ಟದ ಶಿಕ್ಷಣ ನೀಡುತ್ತಿದ್ದಾರೆ ಎಂದು ಹೇಳಿದರು.

ಶಾಲೆಯು ಶಿಕ್ಷಣ, ಕ್ರೀಡೆ ಮತ್ತು ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಗಮನಾರ್ಹ ಸಾಧನೆ ಮಾಡಿದ್ದು, ಇಲ್ಲಿನ ಹಳೆಯ ವಿದ್ಯಾರ್ಥಿಗಳು ವೈದ್ಯಕೀಯ, ನ್ಯಾಯಾಂಗ, ಶಿಕ್ಷಣ, ಮಾಧ್ಯಮ, ಆಡಳಿತ ಹಾಗೂ ರಾಜಕೀಯ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಉನ್ನತ ಹುದ್ದೆಗಳನ್ನು ಅಲಂಕರಿಸಿ ಸಂಸ್ಥೆಯ ಕೀರ್ತಿಯನ್ನು ಹೆಚ್ಚಿಸಿದ್ದಾರೆ ಎಂದು ತಿಳಿಸಿದರು.

ಶತಮಾನೋತ್ಸವದ ವಿಶೇಷ ಆಕರ್ಷಣೆಯಾಗಿ ಆರ್ಥಿಕವಾಗಿ ಹಿಂದುಳಿದ ಮಕ್ಕಳಿಗಾಗಿ ಉಚಿತ ವಿದ್ಯಾರ್ಥಿ ವಸತಿ ನಿಲಯ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಲಾಗುವುದು. ಇದು ವೀರಶೈವ ವಿದ್ಯಾವರ್ಧಕ ಸಂಘದ ಮಹತ್ವದ ಸಾಮಾಜಿಕ ಸೇವಾ ಯೋಜನೆಯಾಗಿದ್ದು, ಬಡ ಪ್ರತಿಭಾವಂತ ವಿದ್ಯಾರ್ಥಿಗಳ ಶೈಕ್ಷಣಿಕ ಬೆಳವಣಿಗೆಗೆ ಸಹಕಾರಿಯಾಗಲಿದೆ ಎಂದು ತಿಳಿಸಿದರು.

ಪ್ರಸ್ತುತ ವೀರಶೈವ ವಿದ್ಯಾವರ್ಧಕ ಸಂಘದ ಅಧ್ಯಕ್ಷರಾಗಿ ಯಾಳಿಮೇಟಿ ಪಂಪನಗೌಡ ಕಾರ್ಯನಿರ್ವಹಿಸುತ್ತಿದ್ದು, ಶಾಲೆಯ ಸಮಗ್ರ ಅಭಿವೃದ್ಧಿಗೆ ದಾನಿಗಳು, ಶಿಕ್ಷಕರು, ಸಿಬ್ಬಂದಿ, ಹಳೆಯ ವಿದ್ಯಾರ್ಥಿಗಳು ಹಾಗೂ ಆಡಳಿತ ಮಂಡಳಿಯ ಸಹಕಾರ ಶ್ಲಾಘನೀಯವಾಗಿದೆ ಎಂದು ಅವರು ಹೇಳಿದರು.

ಶತಮಾನೋತ್ಸವ ಸಮಾರಂಭದ ಅಂಗವಾಗಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು, ಹಳೆಯ ವಿದ್ಯಾರ್ಥಿಗಳ ಸಮ್ಮಿಲನ, ಗಣ್ಯರ ಸನ್ಮಾನ ಹಾಗೂ ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಸಂಘದ ಪದಾಧಿಕಾರಿಗಳು ಮನವಿ ಮಾಡಿದರು.

ಈ ಸಂದರ್ಭದಲ್ಲಿ ವಿವಿ ಸಂಘದ ಅಧ್ಯಕ್ಷ ಕಣೆಕಲ್ ಮಹಾಂತೇಶ್, ಕಾರ್ಯದರ್ಶಿ, ಖಜಾಂಚಿ ಬೈಲು ಹೊದ್ದಿಗೆರೆ ಎರಿಸ್ವಾಮಿ, ಪಲ್ಲೇದ್ ಪಂಪಾಪತಿ , ಜಾನೇ ಕುಂಟೆ ಬಸವರಾಜ್,

ಹೀರದ ಸುಗಮ ಶಾಲೆಯ ಆಡಳಿತ ಮಂಡಳಿಯ ಅಧ್ಯಕ್ಷ ಹ್ಯಾಳ್ಯಿ ಪಂಪನಗೌಡ, ಜಿಬಿ ಮೆಂಬರ್ ಗಳಾದ ಮಹೇಶ್ ಬದ್ರಿನಾಥ್ ಎಸ್ ಬಿ ವೀರನಗೌಡ ಜಂಬನಗೌಡ ಶಾಲೆಯ ಮುಖ್ಯೋಪಾಧ್ಯಾಯ ಎಚ್ ಎಮ್ ಮರಿಸ್ವಾಮಿ ಸೇರಿದಂತೆ ಇತರರಿದ್ದರು

# SIR ಪ್ರಕ್ರಿಯೆ ತಕ್ಷಣ ಮರುಪರಿಶೀಲಿಸಬೇಕು: ಸಮಾತಾಲ್ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಕರ್ನಾಟಕದಲ್ಲಿ ನಡೆಯುತ್ತಿರುವ ವಿಶೇಷ ಮತದಾರರ ಪಟ್ಟಿಯ ಪರಿಷ್ಕರಣೆ (SIR) ಪ್ರಕ್ರಿಯೆ ಪ್ರಜಾಪ್ರಭುತ್ವಕ್ಕೆ ಧಕ್ಕೆ ತರುವ ರೀತಿಯಲ್ಲಿ ನಡೆಯುತ್ತಿದ್ದು, ಜೀವಂತ ಮತದಾರರ ಹೆಸರನ್ನೇ ಮತದಾರರ ಪಟ್ಟಿಯಿಂದ ತೆಗೆದುಹಾಕುವ ಮೂಲಕ ಕೋಟ್ಯಂತರ ಜನರ ಮತದಾನದ ಹಕ್ಕನ್ನು ಕಸಿಯುವ ಪ್ರಯತ್ನ ನಡೆಯುತ್ತಿದೆ ಎಂದು ಎದ್ದೇಳು ಕರ್ನಾಟಕ ಸಂಘದ ಸಹವರ್ತಿ ಕುಮಾರ್ ಸಮಾತಾಲ್ ಆರೋಪಿಸಿದರು.ನಗರದ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿರುವ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚುನಾವಣಾ ಆಯೋಗವೇ ಪ್ರಕಟಿಸಿರುವ ಅಂಕಿ–ಅಂಶಗಳ ಪ್ರಕಾರ ರಾಜ್ಯದ 1,10,59,288 ಮತದಾರರು ಡಿಲೀಟ್ ಪಟ್ಟಿಯಲ್ಲಿ ಇದ್ದು, ಇದು ಒಟ್ಟು ಮತದಾರರ ಸುಮಾರು 20 ಶೇಕಡಾ ಆಗಿದೆ. ಈ ಪ್ರಕ್ರಿಯೆ ಮುಂದುವರಿದರೆ ಪ್ರತಿ ಐದು ಮತದಾರರಲ್ಲಿ ಒಬ್ಬರು ತಮ್ಮ ಮತದಾನದ ಹಕ್ಕನ್ನು ಕಳೆದುಕೊಳ್ಳುವ ಪರಿಸ್ಥಿತಿ ನಿರ್ಮಾಣವಾಗಲಿದೆ ಎಂದು ಆತಂಕ ವ್ಯಕ್ತಪಡಿಸಿದರು.




ಬೆಂಗಳೂರು ಸೇರಿದಂತೆ ವಲಸೆ ಹೆಚ್ಚಿರುವ ಹಾಗೂ ಗಡಿ ಜಿಲ್ಲೆಗಳಲ್ಲಿ ಹೆಚ್ಚಿನ ಸಂಖ್ಯೆಯ ಮತದಾರರು ಪಟ್ಟಿಯಿಂದ ಹೊರಗುಳಿಯುವ ಸಾಧ್ಯತೆ ಇದೆ. ಇದಲ್ಲದೆ ಸುಮಾರು 34 ಲಕ್ಷ ಮಂದಿ "ಮ್ಯಾಪಿಂಗ್ ಆಗದವರು" ಎಂದು ಗುರುತಿಸಲಾಗಿದ್ದು, ಅವರಿಗೆ ನೋಟಿಸ್ ನೀಡಲಾಗುತ್ತಿದೆ. ಇದೇ ವೇಳೆ ಃಐಔಗಳ ಮೊಬೈಲ್ ???ಪ್‌ನಲ್ಲಿ ಬಳಸುತ್ತಿರುವ "ಲಾಜಿಕಲ್ ಡಿಸ್ಕ್ರೆಪೆನ್ಸಿ" ವ್ಯವಸ್ಥೆಯ ಬಗ್ಗೆ ಚುನಾವಣಾ ಆಯೋಗ ಯಾವುದೇ ಸ್ಪಷ್ಟನೆ ನೀಡುತ್ತಿಲ್ಲ ಎಂದು ಟೀಕಿಸಿದರು.

ಚುನಾವಣಾ ಆಯೋಗದ ಅಂಕಿ–ಅಂಶಗಳ ಪ್ರಕಾರ ಡಿಲೀಟ್ ಪಟ್ಟಿಯಲ್ಲಿರುವ ಬಹುತೇಕರು "ಶಿಫ್ಟೆಡ್" ಹಾಗೂ "ಅಬ್ಸೆಂಟ್" ವರ್ಗಕ್ಕೆ ಸೇರಿದ್ದು, ಅವರು ಸತ್ತವರೂ ಅಲ್ಲ, ನಕಲಿ ಮತದಾರರೂ ಅಲ್ಲ. ಉದ್ಯೋಗ, ಶಿಕ್ಷಣ ಅಥವಾ ಇತರೆ ಕಾರಣಗಳಿಂದ ಬೇರೆಡೆಗೆ ತೆರಳಿರುವ ಜೀವಂತ ಮತದಾರರನ್ನು ಪಟ್ಟಿಯಿಂದ ತೆಗೆದುಹಾಕುವುದು ಅಸಂವಿಧಾನಿಕ ಮತ್ತು ಅಪ್ರಜಾತಾಂತ್ರಿಕ ಕ್ರಮವಾಗಿದೆ ಎಂದು ಹೇಳಿದರು.ಎನ್ಯುಮರೇಷನ್ ಫಾರಂಗಳನ್ನು ಶೇ.100ರಷ್ಟು ವಿತರಣೆ ಹಾಗೂ ಶೇ.99.56ರಷ್ಟು ಡಿಜಿಟಲೀಕರಣ ಪೂರ್ಣಗೊಂಡಿದೆ ಎಂದು ಚುನಾವಣಾ ಆಯೋಗ ಹೇಳುತ್ತಿರುವುದಾದರೂ, ಇನ್ನೂ ಅನೇಕ ಮತದಾರರಿಗೆ ಫಾರಂಗಳು ಸಿಗದೆ ಪರದಾಡುತ್ತಿರುವ ಉದಾಹರಣೆಗಳಿವೆ. ಹೀಗಾಗಿ ಆಯೋಗದ ಹೇಳಿಕೆ ಮತ್ತು ನೆಲಮಟ್ಟದ ವಾಸ್ತವ ಸ್ಥಿತಿ ನಡುವೆ ವ್ಯತ್ಯಾಸವಿದೆ ಎಂದು ಆರೋಪಿಸಿದರು.

ಖಐಖ ಪ್ರಕ್ರಿಯೆಯೇ ಅವೈಜ್ಞಾನಿಕ, ಅಪ್ರಜಾತಾಂತ್ರಿಕ ಹಾಗೂ ದುರುದ್ದೇಶಪೂರಿತವಾಗಿದೆ. ಸೂಕ್ತ ತರಬೇತಿ ಇಲ್ಲದೆ ಃಐಔಗಳ ಮೇಲೆ ಒತ್ತಡ ಹೇರಿ ಅವ್ಯವಸ್ಥಿತವಾಗಿ ಪ್ರಕ್ರಿಯೆ ನಡೆಸಲಾಗಿದೆ. ಸ್ಥಳಾಂತರಗೊಂಡವರು ಮತ್ತು ಃಐಔ ಭೇಟಿ ವೇಳೆ ಮನೆಯಲ್ಲಿ ಇಲ್ಲದವರನ್ನು ನೇರವಾಗಿ ಡಿಲೀಟ್ ಪಟ್ಟಿಗೆ ಸೇರಿಸುವುದು ಈ ಪ್ರಕ್ರಿಯೆಯಲ್ಲಿನ ದೊಡ್ಡ ದೋಷವಾಗಿದೆ ಎಂದು ಹೇಳಿದರು.

ಚುನಾವಣಾ ಆಯೋಗಕ್ಕೆ ಒತ್ತಾಯಗಳು

ಡಿಲೀಟ್ ಪಟ್ಟಿಯ ಕುರಿತು ಸಮಗ್ರ ಪರಿಶೀಲನೆ ನಡೆಸಿ ಸಾಮಾಜಿಕ ಸಂಘಟನೆಗಳಿಗೂ ಅಭಿಪ್ರಾಯ ಮಂಡಿಸಲು ಅವಕಾಶ ನೀಡಬೇಕು. ಸ್ಥಳಾಂತರಗೊಂಡ ಹಾಗೂ ಮನೆಯಲ್ಲಿ ಇಲ್ಲದಿದ್ದ ಮತದಾರರನ್ನು ಯಾವುದೇ ಕಾರಣಕ್ಕೂ ಡಿಲೀಟ್ ಮಾಡದೆ, ಅವರು ಇರುವ ಸ್ಥಳದಲ್ಲೇ ಫಾರಂ–8 ಸಲ್ಲಿಸಿ ಹೊಸ ವಿಳಾಸಕ್ಕೆ ವರ್ಗಾವಣೆ ಮಾಡಿಕೊಳ್ಳಲು ಅವಕಾಶ ಕಲ್ಪಿಸಬೇಕು. ಎನ್ಯುಮರೇಷನ್ ಪ್ರಕ್ರಿಯೆಯ ಅವಧಿಯನ್ನು ಕನಿಷ್ಠ ಒಂದು ತಿಂಗಳ ಕಾಲ ವಿಸ್ತರಿಸಬೇಕು. ಕರಡು ಮತದಾರರ ಪಟ್ಟಿ ಪ್ರಕಟವಾದ ಬಳಿಕ ಪ್ರತಿ ಮತಗಟ್ಟೆ ವ್ಯಾಪ್ತಿಯಲ್ಲಿ ಸಾರ್ವಜನಿಕ ಪರಿಶೀಲನಾ ಸಭೆ ನಡೆಸಿ ಜನರ ಸಮ್ಮುಖದಲ್ಲಿ ತಿದ್ದುಪಡಿಗಳನ್ನು ಮಾಡಬೇಕು ಎಂದು ಆಗ್ರಹಿಸಿದರು.

ಚುನಾವಣಾ ಆಯೋಗ ನಾಗರಿಕ ಸಮಾಜದ ಅಭಿಪ್ರಾಯಗಳನ್ನು ನಿರ್ಲಕ್ಷಿಸಿ, ಅಕ್ರಮ ಡಿಲೀಷನ್ ಪ್ರಕ್ರಿಯೆ ಮುಂದುವರಿಸಿದರೆ ರಾಜ್ಯಾದ್ಯಂತ ತೀವ್ರ ಹೋರಾಟ ನಡೆಸುವುದು ಅನಿವಾರ್ಯವಾಗುತ್ತದೆ. ಇದಕ್ಕೆ ಚುನಾವಣಾ ಆಯೋಗವೇ ಸಂಪೂರ್ಣ ಹೊಣೆಗಾರವಾಗಲಿದೆ ಎಂದು ಎಚ್ಚರಿಕೆ ನೀಡಿದರು.

SIR ವಿರೋಧಿ ಕರ್ನಾಟಕವು ರೈತ, ಕಾರ್ಮಿಕ, ದಲಿತ, ಸಾಮಾಜಿಕ ಸಂಘಟನೆಗಳು ಹಾಗೂ ವಿವಿಧ ಜಾತ್ಯಾತೀತ ರಾಜಕೀಯ ಪಕ್ಷಗಳ ಒಕ್ಕೂಟವಾಗಿದ್ದು, ರಾಜ್ಯದ ಪ್ರತಿಯೊಬ್ಬ ಮತದಾರರ ಹಕ್ಕು ಸುರಕ್ಷಿತವಾಗುವವರೆಗೆ ಅಭಿಯಾನ ಹಾಗೂ ಹೋರಾಟ ಮುಂದುವರಿಯಲಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾಧವ ರೆಡ್ಡಿ, ಎಲ್. ಮಾರಣ್ಣ, ಯರುಕಾಲ ಸ್ವಾಮಿ, ಹುಸೇನಪ್ಪ ಸಮಂತಾ, ಹುಸೇನ್ ಸಾಬ್ ಅಯೂಬ್, ಓಂಕಾರಪ್ಪ, ರಫೀಕ್, ಎನ್.ಡಿ. ವೆಂಕಮ್ಮ, ಪರ್ವೀನ್ ಬಾನು, ಎ.ಕೆ. ಗಂಗಾಧರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಬಿ. ನಾಗೇಂದ್ರ ಸಚಿವರಾಗಿದ್ದಕ್ಕೆ ವಿಶೇಷ ಪೂಜೆ, ವಿನಾಯಕನಗರದಲ್ಲಿ ಸಂಭ್ರಮ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಕರ್ನಾಟಕ ರಾಜ್ಯ ಸಚಿವ ಸಂಪುಟದಲ್ಲಿ ಬಳ್ಳಾರಿ ಗ್ರಾಮೀಣ ಕ್ಷೇತ್ರದ ಶಾಸಕ ಬಿ. ನಾಗೇಂದ್ರ ಅವರು ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿರುವ ಹಿನ್ನೆಲೆಯಲ್ಲಿ ನಗರದ 33ನೇ ವಾರ್ಡಿನ ವಿನಾಯಕ ನಗರ (ದಾರದ ಮಿಲ್) ಪ್ರದೇಶದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಸಂಭ್ರಮಾಚರಣೆ ನಡೆಸಿದರು. ಇದೇ ಸಂದರ್ಭದಲ್ಲಿ ಶ್ರೀ ಮಾರೆಮ್ಮ ದೇವಿ, ಶ್ರೀ ಸದ್ಗುರು ಮಹಾದೇವತಾತ ಹಾಗೂ ಶ್ರೀ ಆಂಜಿನೇಯಸ್ವಾಮಿ ಸನ್ನಿಧಿಯಲ್ಲಿ ವಿಶೇಷ ಪೂಜೆ ಸಲ್ಲಿಸಿ ಹರಕೆಯನ್ನು ತೀರಿಸಲಾಯಿತು.

ಕೆಲವು ತಿಂಗಳಗಳ ಹಿಂದೆ ಶಾಸಕ ಬಿ. ನಾಗೇಂದ್ರ ಅವರು ಸಚಿವರಾಗಬೇಕೆಂದು ಶ್ರೀ ಮಾರೆಮ್ಮ ದೇವಿಗೆ ಹರಕೆ ಹೊತ್ತು ಪ್ರಾರ್ಥಿಸಲಾಗಿತ್ತು. ದೇವರ ಕೃಪೆಯಿಂದ ಅವರು ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದ ಹಿನ್ನೆಲೆಯಲ್ಲಿ ಹರಕೆ ತೀರಿಸುವ ಉದ್ದೇಶದಿಂದ ವಿಶೇಷ ಪೂಜೆ ಹಾಗೂ ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ವಿನಾಯಕ ನಗರ ಕಾಂಗ್ರೆಸ್ ಮುಖಂಡ ಸೂರಿ (ದಾರದ ಮಿಲ್), "ನಮ್ಮ ಜನನಾಯಕ ಬಿ. ನಾಗೇಂದ್ರ ಅಣ್ಣ ಅವರು ಸಚಿವರಾಗಬೇಕೆಂದು ನಾವು ಹಲವು ತಿಂಗಳಗಳಿಂದ ಅನೇಕ ದೇವಾಲಯಗಳಲ್ಲಿ ಪ್ರಾರ್ಥನೆ ಸಲ್ಲಿಸಿ ಹರಕೆ ಹೊತ್ತಿದ್ದೆವು. ಶ್ರೀ ಮಾರೆಮ್ಮ ದೇವಿ, ಶ್ರೀ ಸದ್ಗುರು ಮಹಾದೇವತಾತ ಹಾಗೂ ಶ್ರೀ ಆಂಜಿನೇಯಸ್ವಾಮಿಯ ಆಶೀರ್ವಾದದಿಂದ ಇಂದು ಅವರು ಕರ್ನಾಟಕ ರಾಜ್ಯದ ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿರುವುದು ನಮ್ಮೆಲ್ಲ ಕಾರ್ಯಕರ್ತರಿಗೆ ಅಪಾರ ಸಂತೋಷವನ್ನುಂಟು ಮಾಡಿದೆ," ಎಂದು ಹೇಳಿದರು.

ಮುಂದುವರಿದು ಅವರು, "ಕಾಂಗ್ರೆಸ್ ಪಕ್ಷದಲ್ಲಿ ಪ್ರಾಮಾಣಿಕವಾಗಿ ದುಡಿಯುವ ಕಾರ್ಯಕರ್ತರು ಹಾಗೂ ನಾಯಕರಿಗೆ ಸೂಕ್ತ ಗೌರವ ಮತ್ತು ಅವಕಾಶ ದೊರೆಯುತ್ತದೆ ಎಂಬುದಕ್ಕೆ ಬಿ. ನಾಗೇಂದ್ರ ಅವರ ಸಚಿವ ಸ್ಥಾನವೇ ಸಾಕ್ಷಿಯಾಗಿದೆ. ಅವರ ನೇತೃತ್ವದಲ್ಲಿ ಕ್ಷೇತ್ರದ ಅಭಿವೃದ್ಧಿಗೆ ಮತ್ತಷ್ಟು ವೇಗ ಸಿಗಲಿದ್ದು, ಜನರ ನಿರೀಕ್ಷೆಗಳು ಈಡೇರುತ್ತವೆ ಎಂಬ ವಿಶ್ವಾಸ ನಮ್ಮದು," ಎಂದು ತಿಳಿಸಿದರು.

ವಿಶೇಷ ಪೂಜೆಯಲ್ಲಿ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಹಾಗೂ ಸ್ಥಳೀಯ ಭಕ್ತರು ಭಾಗವಹಿಸಿ ದೇವರಿಗೆ ವಿಶೇಷ ಪೂಜೆ ಸಲ್ಲಿಸಿ ಸಚಿವ ಬಿ. ನಾಗೇಂದ್ರ ಅವರ ಯಶಸ್ವಿ ರಾಜಕೀಯ ಜೀವನ ಹಾಗೂ ಜನಸೇವೆಗೆ ಪ್ರಾರ್ಥಿಸಿದರು. ಬಳಿಕ ಸಿಹಿ ಹಂಚಿ ಸಂಭ್ರಮಾಚರಣೆ ನಡೆಸಲಾಯಿತು.

# ಕೆಪಿಎಸ್‌ಸಿ ಹಗರಣ ಖಂಡಿಸಿ, ಪೊಲೀಸ್ ಕಾನ್ಸ್‌ಟೇಬಲ್ ಪರೀಕ್ಷೆ ಮರುನಡೆಸಲು ಆಗ್ರಹಿಸಿ ಎಬಿವಿಪಿ ಪ್ರತಿಭಟನೆ




• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಕೆಪಿಎಸ್‌ಸಿಯಲ್ಲಿ ನಡೆದಿರುವ ನೇಮಕಾತಿ ಅಕ್ರಮಗಳ ಕುರಿತು ಉನ್ನತ ಮಟ್ಟದ ತನಿಖೆ ನಡೆಸಬೇಕು, ವಿಜಯಪುರ ಜಿಲ್ಲೆಯ ತಿಕೋಟಾದಲ್ಲಿ ನಡೆದ ಪೊಲೀಸ್ ಕಾನ್ಸ್‌ಟೇಬಲ್ ನೇಮಕಾತಿ ಪರೀಕ್ಷೆಯ ಲೋಪದಿಂದ ಸಮಸ್ಯೆಗೆ ಒಳಗಾದ ಅಭ್ಯರ್ಥಿಗಳಿಗೆ ನ್ಯಾಯ ಒದಗಿಸಿ ಮರು ಪರೀಕ್ಷೆ ನಡೆಸಬೇಕು ಹಾಗೂ ಶಿಕ್ಷಣ ಇಲಾಖೆಯ ಖಾಲಿ ಹುದ್ದೆಗಳನ್ನು ಶೀಘ್ರ ಖಾಯಂ ನೇಮಕಾತಿ ಮಾಡಬೇಕು ಎಂದು ಆಗ್ರಹಿಸಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ (ಎಬಿವಿಪಿ) ನೇತೃತ್ವದಲ್ಲಿ ಬುಧವಾರ ಬಳ್ಳಾರಿಯಲ್ಲಿ ಬೃಹತ್ ಪ್ರತಿಭಟನೆ ನಡೆಯಿತು.

ನಗರದ ಹೃದಯಭಾಗವಾದ ರಾಯಲ್ ಸರ್ಕಲ್‌ನಿಂದ ಆರಂಭವಾದ ಪ್ರತಿಭಟನಾ ಮೆರವಣಿಗೆ ವಿವಿಧ ಪ್ರಮುಖ ರಸ್ತೆಗಳಲ್ಲಿ ಸಾಗಿದು ಜಿಲ್ಲಾಧಿಕಾರಿ ಕಚೇರಿಗೆ ತಲುಪಿತು. ಬಳಿಕ ಜಿಲ್ಲಾಡಳಿತದ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.

ಪ್ರತಿಭಟನೆಯಲ್ಲಿ ಮಾತನಾಡಿದ ಎಬಿವಿಪಿ ಮುಖಂಡರು, ಸರ್ಕಾರಿ ಉದ್ಯೋಗವು ಲಕ್ಷಾಂತರ ಯುವಜನರ ಕನಸಾಗಿದ್ದು, ಕೆಪಿಎಸ್‌ಸಿ ನೇಮಕಾತಿಯಲ್ಲಿ ಭ್ರಷ್ಟಾಚಾರದ ಆರೋಪಗಳು ಕೇಳಿಬಂದಿರುವುದು ರಾಜ್ಯದ ಯುವಕರ ವಿಶ್ವಾಸಕ್ಕೆ ದೊಡ್ಡ ಹೊಡೆತವಾಗಿದೆ ಎಂದು ಆರೋಪಿಸಿದರು.

ಇತ್ತೀಚೆಗೆ ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆಯ ಪಶುವೈದ್ಯಾಧಿಕಾರಿ ಹುದ್ದೆಗಳ ನೇಮಕಾತಿ ಪರೀಕ್ಷೆಯಲ್ಲಿ ಅಕ್ರಮ ನಡೆದಿರುವ ಆರೋಪಗಳು ಕೇಳಿಬಂದಿದ್ದು, ಒಂದು ಹುದ್ದೆಗೆ ಲಕ್ಷಾಂತರ ರೂಪಾಯಿ ಪಡೆದು ನೇಮಕಾತಿ ನಡೆಸಲಾಗಿದೆ, ಔಒಖ ಶೀಟ್‌ಗಳಲ್ಲಿ ತಿರುವು–ಮರುವು ಮಾಡಲಾಗಿದೆ ಎಂಬ ಆರೋಪಗಳು ಗಂಭೀರವಾಗಿವೆ. ಈ ಹಿನ್ನೆಲೆಯಲ್ಲಿ ಕೆಪಿಎಸ್‌ಸಿ ಪ್ರಕರಣವನ್ನು ಉನ್ನತ ಮಟ್ಟದ ತನಿಖಾ ಸಂಸ್ಥೆಗೆ ವಹಿಸಿ ಸಮಗ್ರ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.

ವಿಜಯಪುರ ಜಿಲ್ಲೆಯ ತಿಕೋಟಾದಲ್ಲಿ ಆಗಸ್ಟ್ 3ರಂದು ನಡೆದ ಪೊಲೀಸ್ ಕಾನ್ಸ್‌ಟೇಬಲ್ ನೇಮಕಾತಿ ಪರೀಕ್ಷೆಯಲ್ಲಿ ಪ್ರಶ್ನೆಪತ್ರಿಕೆಗಳನ್ನು ನಿಗದಿತ ಸಮಯಕ್ಕೆ ವಿತರಿಸದ ಕಾರಣ ಅನೇಕ ಅಭ್ಯರ್ಥಿಗಳು ಮಾನಸಿಕ ಒತ್ತಡಕ್ಕೆ ಒಳಗಾಗಿ ಸಮರ್ಪಕವಾಗಿ ಪರೀಕ್ಷೆ ಬರೆಯಲು ಸಾಧ್ಯವಾಗಿಲ್ಲ. ಹೀಗಾಗಿ ಪರೀಕ್ಷೆಯನ್ನು ರದ್ದುಪಡಿಸಿ ಮರು ಪರೀಕ್ಷೆ ನಡೆಸಬೇಕು. ಜೊತೆಗೆ ಈ ಅವ್ಯವಸ್ಥೆಗೆ ಹೊಣೆಗಾರರಾದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಹಾಗೂ ಗೃಹ ಸಚಿವರು ಮತ್ತು ಕೆಇಎ ನಿರ್ದೇಶಕರು ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು.

ರಾಜ್ಯದ ಸುಮಾರು 450 ಸರ್ಕಾರಿ ಶಾಲೆ ಮತ್ತು ಕಾಲೇಜುಗಳಲ್ಲಿ ಶೂನ್ಯ ಪ್ರವೇಶಾತಿ ದಾಖಲಾಗಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಶಿಕ್ಷಣ ಇಲಾಖೆಯಲ್ಲಿ ಸಾವಿರಾರು ಶಿಕ್ಷಕರ ಹುದ್ದೆಗಳು ಖಾಲಿ ಇರುವುದೇ ಇದಕ್ಕೆ ಪ್ರಮುಖ ಕಾರಣವಾಗಿದ್ದು, ಅವುಗಳನ್ನು ತಕ್ಷಣ ಖಾಯಂ ನೇಮಕಾತಿ ಮೂಲಕ ಭರ್ತಿ ಮಾಡಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯ ನಂತರ ಜಿಲ್ಲಾಧಿಕಾರಿ ಕಚೇರಿಯಲ್ಲಿ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು. ರಾಜ್ಯ ಸರ್ಕಾರ ವಿದ್ಯಾರ್ಥಿಗಳ ಭವಿಷ್ಯಕ್ಕೆ ಸಂಬಂಧಿಸಿದ ಈ ಗಂಭೀರ ವಿಷಯಗಳನ್ನು ನಿರ್ಲಕ್ಷಿಸಿದರೆ ರಾಜ್ಯಾದ್ಯಂತ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಎಬಿವಿಪಿಯ ಪದಾಧಿಕಾರಿಗಳು, ಕಾರ್ಯಕರ್ತರು ಹಾಗೂ ನೂರಾರು ವಿದ್ಯಾರ್ಥಿಗಳು ಭಾಗವಹಿಸಿದ್ದರು.

# 10 ರಂದು ಕಲಬುರಗಿ ತಾಲೂಕು ಕೆ.ಡಿ.ಪಿ. ಸಭೆ

ಕಲಬುರಗಿ,ಆ.05.:ಕಲಬುರಗಿ ತಾಲೂಕಿನ ಕೆ.ಡಿ.ಪಿ. ಪ್ರಗತಿ ಪರಿಶೀಲನಾ ಸಭೆಯ ಇದೇ ಆಗಸ್ಟ್ 10 ರಂದು ಬೆಳಿಗ್ಗೆ 11 ಗಂಟೆಗೆ ಕಲಬುರಗಿ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಕಲಬುರಗಿ ದಕ್ಷಿಣ ಮತಕ್ಷೇತ್ರದ ಶಾಸಕರಾದ ಅಲ್ಲಮ್ಮಪ್ರಭು ಪಾಟೀಲ ಇವರ ಅಧ್ಯಕ್ಷತೆಯಲ್ಲಿ ಜರುಗಲಿದೆ ಕಲಬುರಗಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ತಿಳಿಸಿದ್ದಾರೆ. ಈ ಮೇಲ್ಕಂಡ ದಿನದಂದು ನಡೆಯುವ ಕೆ.ಡಿ.ಪಿ.

ಪ್ರಗತಿ ಪರಿಶೀಲನಾ ಸಭೆಗೆ ಕಲಬುರಗಿ ದಕ್ಷಿಣ ಮತಕ್ಷೇತ್ರದ ವ್ಯಾಪ್ತಿಯ ಕಲಬುರಗಿ ತಾಲೂಕಿನ ಎಲ್ಲಾ ಅನುಷ್ಠಾನ ಅಧಿಕಾರಿಗಳು ತಮ್ಮ ಇಲಾಖೆಯ ಪ್ರಗತಿ ವರದಿಯೊಂದಿಗೆ ಖುದ್ದಾಗಿ ಹಾಜರಾಗಬೇಕೆಂದು ಅವರು ತಿಳಿಸಿದ್ದಾರೆ.

# ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ: ಡಾ. ಹನುಮಂತಪ್ಪ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು ಎಂದು ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ. ಹನುಮಂತಪ್ಪ ಅವರು ನಿರ್ದೇಶನ ನೀಡಿದರು.



ಬಳ್ಳಾರಿ ತಾಲೂಕಿನ ಮೋಕಾ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಕ್ಷೇತ್ರ ಆರೋಗ್ಯ ಸಿಬ್ಬಂದಿಗಳೊಂದಿಗೆ ಬುಧವಾರ ಹಮ್ಮಿಕೊಂಡಿದ್ದ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.*ಡೆಂಗ್ಯೂ ಹಾಗೂ ಸಾಂಕ್ರಾಮಿಕ ರೋಗ ತಡೆ:*

ಆಶಾ ಕಾರ್ಯಕರ್ತೆಯರು ಪ್ರತಿದಿನ ಕಡ್ಡಾಯವಾಗಿ ಲಾರ್ವಾ ಸಮೀಕ್ಷೆ ನಡೆಸಬೇಕು. ಇದರ ಮೇಲ್ವಿಚಾರಣೆಯನ್ನು ಆರೋಗ್ಯ ನಿರೀಕ್ಷಣಾಧಿಕಾರಿಗಳು ಹಾಗೂ ಪ್ರಾಥಮಿಕ ಸುರಕ್ಷಾಧಿಕಾರಿಗಳು ವಹಿಸಬೇಕು. ಗ್ರಾಮಗಳಲ್ಲಿ ನಿಯಮಿತವಾಗಿ ಆರೋಗ್ಯ ಜಾಗೃತಿ ಮೂಡಿಸುವುದರ ಜೊತೆಗೆ ಕುಡಿಯುವ ನೀರಿನ ಪರೀಕ್ಷೆಯನ್ನು ಕಡ್ಡಾಯಗೊಳಿಸಬೇಕು ಎಂದು ತಿಳಿಸಿದರು.*ಆಯುಷ್ಮಾನ್ ಆರೋಗ್ಯ ಕೇಂದ್ರ ಹಾಗೂ ಯೋಗ:*ಯೋಗ ಶಿಬಿರಗಳು ಮತ್ತು ಆರೋಗ್ಯ ಶಿಬಿರಗಳನ್ನು ಸಕ್ರಿಯವಾಗಿ ನಡೆಸಿ ಸಾರ್ವಜನಿಕರಿಗೆ ಗುಣಾತ್ಮಕ ಸೇವೆ ನೀಡಬೇಕು. ಅಸಾಂಕ್ರಾಮಿಕ ರೋಗಗಳ ನಿಯಂತ್ರಣಕ್ಕಾಗಿ ಮಧುಮೇಹ ಮತ್ತು ಅಧಿಕ ರಕ್ತದೊತ್ತಡ ಪ್ರಕರಣಗಳ ಮರು–ಪರೀಕ್ಷೆ ನಡೆಸಿ, ಅಂಕಿ–ಅಂಶಗಳನ್ನು ಆನ್‌ಲೈನ್‌ನಲ್ಲಿ ನಮೂದಿಸಬೇಕು ಎಂದು ಹೇಳಿದರು.*ಕ್ಷಯ ಮತ್ತು ಏಡ್ಸ್ ಜಾಗೃತಿ:*'ಕ್ಷಯಮುಕ್ತ ಭಾರತ' ಅಭಿಯಾನದಡಿ ಕ್ಷಯರೋಗಿಗಳ ಮನೆ ಹಾಗೂ ಸುತ್ತಮುತ್ತಲ ಜನರ ಕಫ ಪರೀಕ್ಷೆ ಮಾಡಿಸಬೇಕು. ಕಾಲೇಜು ಮತ್ತು ಸಮುದಾಯ ಮಟ್ಟದಲ್ಲಿ ಹೆಚ್.ಐ.ವಿ ಏಡ್ಸ್, ಹಾವು ಕಡಿತ ಹಾಗೂ ನಾಯಿ ಕಡಿತದಂತಹ ಪ್ರಕರಣಗಳ ತಡೆಗೆ ಜಾಗೃತಿ ಕಾರ್ಯಕ್ರಮಗಳನ್ನು ರೂಪಿಸಬೇಕು ಎಂದು ಸೂಚಿಸಿದರು.*ಮಾತೃ ಮತ್ತು ಮಗುವಿನ ಆರೋಗ್ಯ:*ಗರ್ಭಿಣಿಯರ ನೋಂದಣಿಯನ್ನು 3 ತಿಂಗಳ ಒಳಗಾಗಿ ಶೇ.100 ರಷ್ಟು ಪೂರ್ಣಗೊಳಿಸಬೇಕು. ಇದರಿಂದ ಅಪಾಯಕಾರಿ ಗರ್ಭಧಾರಣೆ ಹಾಗೂ ಹೆಣ್ಣು ಭ್ರೂಣ ಹತ್ಯೆಯನ್ನು ಪರಿಣಾಮಕಾರಿಯಾಗಿ ತಡೆಯಬಹುದು. ಗರ್ಭಿಣಿಯರ ಬಿ.ಎಮ್.ಐ ಮತ್ತು ಗೆಸ್ಟೋಸಿಸ್ ಸ್ಕೋರ್ ಕುರಿತು ನಿಯಮಿತ ನಿಗಾ ವಹಿಸಬೇಕು ಎಂದು ಸಲಹೆ ನೀಡಿದರು.

*ಪೌಷ್ಟಿಕಾಂಶ ಮತ್ತು ಲಸಿಕಾ ಕಾರ್ಯಕ್ರಮ:*6 ತಿಂಗಳಿಂದ 5 ವರ್ಷದೊಳಗಿನ ಮಕ್ಕಳಿಗೆ ನೀಡುವ ಕಬ್ಬಿಣಾಂಶದ ಸಿರಪ್ ಬಳಕೆಯ ಕುರಿತು ತಾಯಿ ಕಾರ್ಡ್‌ನಲ್ಲಿ ನಮೂದಿಸಿ, ಗೃಹ ಭೇಟಿ ನೀಡಿ ಪರಿಶೀಲಿಸಬೇಕು. 60 ರಿಂದ 70 ವರ್ಷದ ಹಿರಿಯ ನಾಗರಿಕರಿಗೂ ಕಬ್ಬಿಣಾಂಶ ಮಾತ್ರೆ ವಿತರಿಸಬೇಕು ಎಂದರು.

*ಯು–ವಿನ್ ಪೋರ್ಟಲ್ ಮತ್ತು ಹೆಚ್.ಪಿ.ವಿ ಲಸಿಕೆ:*ಲಸಿಕಾ ಕಾರ್ಯಕ್ರಮದಲ್ಲಿ ಲಸಿಕೆ ಪಡೆದ ಪ್ರತಿಯೊಬ್ಬ ಫಲಾನುಭವಿಯ ವಿವರವನ್ನು 'ಯು–ವಿನ್' ಆನ್‌ಲೈನ್ ಪೋರ್ಟಲ್‌ನಲ್ಲಿ ನಮೂದಿಸುವುದು ಕಡ್ಡಾಯ. 14 ವರ್ಷದ ಎಲ್ಲಾ ಕಿಶೋರಿಯರಿಗೆ ಹೆಚ್.ಪಿ.ವಿ ಲಸಿಕೆ ನೀಡಿ ಶೇ.100 ರಷ್ಟು ಪ್ರಗತಿ ಸಾಧಿಸಬೇಕು. ಅಲ್ಲದೆ, ಆಗಸ್ಟ್ 7 ರವರೆಗೆ ನಡೆಯುವ ವಿಶ್ವ ಸ್ತನ್ಯಪಾನ ಸಪ್ತಾಹ'ವನ್ನು ಯಶಸ್ವಿಗೊಳಿಸಲು ಸೂಚಿಸಿದರು.ಆರು ತಿಂಗಳಿನಿಂದ 5 ವರ್ಷದವರೆಗೆ ಕಬ್ಬಿಣಾಂಶದ ಮಕ್ಕಳಿಗೆ ನೀಡುವ ಸಿರಫ್ ಅನ್ನು ತಾಯಿ ಕಾರ್ಡ್‌ನಲ್ಲಿ ನಮೂದಿಸಲು ಹಾಗೂ 5 ವರ್ಷದೊಳಗಿನ ಮಕ್ಕಳ ಮನೆಯಲ್ಲಿ ಭೇಟಿ ನೀಡಿ ಸಿರಫ್ ತೆಗೆದುಕೊಳ್ಳುವ ಬಗ್ಗೆ ಅನುಸರಣೆ ಮಾಡಲು ತಿಳಿಸಿದರು.

# ಹೈಕಮಾಂಡ್ ನಡೆ ಬಗ್ಗೆ ಆಕ್ಷೇಪ.. ಸ್ಫೋಟಕ ಆಡಿಯೋ ವೈರಲ್..!

**ಬಾಗಲಕೋಟೆ:** ಸಚಿವ ಸಂಪುಟ ವಿಸ್ತರಣೆ ಬೆನ್ನಲ್ಲೇ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಸ್.ಜಿ.ನಂಜಯ್ಯನಮಠ ಹಾಗೂ ಮುಧೋಳ ಶಾಸಕ ಮಾಜಿ ಸಚಿವ ಆರ್.ಬಿ.ತಿಮ್ಮಾಪೂರ ಅವರುಗಳು ಹೈಕಮಾಂಡ್ ನಡೆಯ ಬಗ್ಗೆ ಮಾತನಾಡಿದ್ದಾರೆನ್ನಲಾದ ಸ್ಫೋಟಕ ಆಡಿಯೋ ವೈರಲ್ ಆಗಿದೆ. ಸಚಿವ ಸಂಪುಟ ವಿಸ್ತರಣೆಯಲ್ಲಿ ಗಂಭೀರ ಆರೋಪಗಳಿದ್ದರೂ ಬಿ.ನಾಗೇಂದ್ರಗೆ ಸಚಿವ ಸ್ಥಾನ ನೀಡಿದಕ್ಕೆ ಇಬ್ಬರೂ ಅಚ್ಚರಿ ವ್ಯಕ್ತಪಡಿಸಿದ್ದಾರೆ.

ಜಿಲ್ಲೆಯ ನೂತನ ಸಚಿವ ವಿಜಯಾನಂದ ಕಾಶಪ್ಪನವರಗೆ ಜಿಲ್ಲಾ ಉಸ್ತುವಾರಿ ನೀಡದಂತೆ ಎಲ್ಲ ಶಾಸಕರು ಒಟ್ಟಾಗಿ ಸಿಎಂ ಡಿ.ಕೆ.ಶಿವಕುಮಾರಗೆ ಪತ್ರ ನೀಡುವ ಬಗ್ಗೆಯೂ ಚರ್ಚೆ ಮಾಡಿದ್ದಾರೆ. ಈ ಆಡಿಯೋ ಅವರದೇ ಎಂಬುದಕ್ಕೆ ಈವರೆಗೆ ಇಬ್ಬರೂ ನಾಯಕರಿಂದಲೂ ಖಚಿತತೆ ಸಿಕ್ಕಿಲ್ಲ. ಆಡಿಯೋದಲ್ಲಿ ಹಿರಿಯ ನಾಯಕ ಎಚ್.ಕೆ.ಪಾಟೀಲ ಅವರಿಗೆ ಸಚಿವ ಸ್ಥಾನ ಸಿಗದಿರುವುದರ ಬಗ್ಗೆಯೂ ಚರ್ಚೆ ನಡೆಸಿ ಬಹುಷ ಅವರು ಹೈಕಮಾಂಡ್ ಗೆ ಹಣ ನೀಡಿರಲಿಕ್ಕಿಲ್ಲ, ಹೈಕಮಾಂಡ್ ನವರು ನಿಮಗೇನು ನಾವು ಪ್ರಾಮಾಣಿಕರಾಗಿ ಇರಿ ಎಂದು ಹೇಳುತ್ತೇವೆಯೇ ಎಂದು ಹೇಳಿದ್ದಾರೆ ಎಂಬ ಬಗ್ಗೆಯೂ ಚರ್ಚಿಸಲಾಗಿದೆ.

ಸಧ್ಯ ವಿಡಿಯೋ ಜಿಲ್ಲೆಯಾದ್ಯಂತ ಚರ್ಚೆಗೆ ಗ್ರಾಸವಾಗಿದ್ದು, ಈ ಬಗ್ಗೆ ಪ್ರತಿಕ್ರಿಯಿಸಿರುವ ನೂತನ ಸಚಿವ ವಿಜಯಾನಂದ ಕಾಶಪ್ಪನವರ, ಇದನ್ನು ಪಕ್ಷದ ನಾಯಕರ ಗಮನಕ್ಕೆ ತರುವುದಾಗಿ ಹೇಳಿದ್ದಾರೆ.

# ವಿಬಿಜಿ ರಾಮಜಿ ಯೋಜನೆ ಸದುಪಯೋಗಕ್ಕೆ ಸಿಇಓ ಕರೆ



**ಬಾಗಲಕೋಟೆ:** ತಾಲೂಕಿನ ಮುಗಳೊಳ್ಳಿ ಗ್ರಾಮ ಪಂಚಾಯತಿಯಲ್ಲಿ ವಿಬಿಜಿ ರಾಮಜಿ ಯೋಜನೆಯ ಕುರಿತಾಗಿ ಗ್ರಾಮ ಸಭೆ ಜರುಗಿತು.

ಗ್ರಾಮ ಸಭೆಯನ್ನು ಉದ್ಘಾಟಿಸಿದ ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಜಾನನ ಬಾಲೆ, ಯೋಜನೆಯ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಿ, ಅದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು. ಮಾರ್ಪಾಡಾದ ಯೋಜನೆಯಲ್ಲಿ ವಾರ್ಷಿಕ 125 ಮಾನವ ದಿನಗಳು ಲಭ್ಯವಿದ್ದು, ದಿನಗೂಲಿ ಮೊತ್ತ ₹370 ರಿಂದ 382ಕ್ಕೆ ಹೆಚ್ಚಳವಾಗಿದೆ. ಒಟ್ಟಾರೆ ವಾರ್ಷಿಕ ಒಂದು ಗ್ರಾಮೀಣ ರೋಜ್ ಗಾರ ಗ್ಯಾರಂಟಿ ಕಾರ್ಡ್‌ಗೆ ₹47, 750 ಗಳಿಸಲು ಅವಕಾಶವಿದೆ ಎಂದರು. ಯೋಜನೆಯಡಿಯ 318 ಕಾಮಗಾರಿಗಳ ಕುರಿತು ತಿಳಿಸಿದ ಸಿಇಓ, ವೈಯಕ್ತಿಕ ಹಾಗೂ ಸಮುದಾಯ ಕಾಮಗಾರಿಗಳ ಮಾಹಿತಿ ನೀಡಿದರಲ್ಲದೇ, ಗ್ರಾಮೀಣ ಜನರು ಯೋಜನೆ ಸೌಲಭ್ಯವನ್ನು ಸದುಪಯೋಗ ಪಡಿಸಿಕೊಳ್ಳುವಂತೆ ತಿಳಿಸಿದರು.

ಕಾರ್ಯಕ್ರಮದ ನಂತರ ಸ್ಥಳೀಯ ಎಲ್.ಟಿ.1ರ ಸರ್ಕಾರಿ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ, ಶಾಲಾ ಕಟ್ಟಡ ಹಾಗೂ ಶುದ್ಧ ಕುಡಿಯುವ ನೀರಿನ ಘಟಕ ಪರಿಶೀಲನೆ ಮಾಡಿದರು. ಉಪ ಆರೋಗ್ಯ ಕೇಂದ್ರಕ್ಕೂ ಭೇಟಿ ನೀಡಿ ಪರಿಶೀಲಿಸಿದರು.

ತಾಲೂಕ ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಸುಭಾಷ ಸಂಪಗಾಂವಿ, ಸಹಾಯಕ ನಿರ್ದೇಶಕ ಸಿದ್ದು ನಕ್ಕರಗುಂದಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ ರಮಜಾನಬಿ ನದಾಫ ಇದ್ದರು.

# ಸಮಗ್ರ ತನಿಖೆಗೆ ಸಚಿವ ಸೂಚನೆ



**ಯಾದಗಿರಿ:** ಜಿಲ್ಲೆಯ ಕಡೆಚೂರು ಕೈಗಾರಿಕಾ ಪ್ರದೇಶದಲ್ಲಿರುವ ಸಿಐಎಲ್ ಲ್ಯಾಬೊರೇಟರೀಸ್ ಘಟಕದಲ್ಲಿ ಸಂಭವಿಸಿದ ಸಲ್ಫರ್ ಡೈಆಕ್ಸೈಡ್ ಅನಿಲ ಸೋರಿಕೆ ದುರಂತದಲ್ಲಿ ಮೂವರು ಕಾರ್ಮಿಕರು ಮೃತಪಟ್ಟಿರುವುದು ಹಾಗೂ ಇಬ್ಬರು ಕಾರ್ಮಿಕರು ಗಾಯಗೊಂಡಿರುವ ಘಟನೆ ಅತ್ಯಂತ ದುಃಖಕರವಾಗಿದೆ ಎಂದು ಗೃಹ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಇ-ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಮೃತ ಕಾರ್ಮಿಕರ ಕುಟುಂಬಗಳಿಗೆ ಸಚಿವರು ತಮ್ಮ ತೀವ್ರ ಸಾಂತ್ವನವನ್ನು ಸೂಚಿಸಿದ್ದು, ಗಾಯಾಳುಗಳು ಶೀಘ್ರ ಗುಣಮುಖರಾಗಲೆಂದು ಹಾರೈಸಿದ್ದಾರೆ.

ಘಟನೆ ನಡೆದ ತಕ್ಷಣ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಸ್ಥಿತಿಯನ್ನು ಪರಿಶೀಲಿಸಿದ್ದು, ಗಾಯಾಳುಗಳಿಗೆ ತುರ್ತು ಚಿಕಿತ್ಸೆ ಒದಗಿಸಲಾಗಿದೆ. ಸಂಬಂಧಿಸಿದ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ ರಕ್ಷಣಾ ಹಾಗೂ ಪರಿಹಾರ ಕ್ರಮಗಳನ್ನು ಕೈಗೊಂಡಿವೆ ಎಂದು ಸಚಿವರು ತಿಳಿಸಿದ್ದಾರೆ.

ಅನಿಲ ಸೋರಿಕೆಗೆ ನಿಖರ ಕಾರಣವನ್ನು ಸಮಗ್ರವಾಗಿ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಕಾರ್ಖಾನೆಗಳಲ್ಲಿ ಕಾರ್ಮಿಕರ ಸುರಕ್ಷತಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದು ಅತ್ಯಗತ್ಯವಾಗಿದ್ದು, ಈ ಘಟನೆಯ ಹಿನ್ನೆಲೆಯಲ್ಲಿ ರಾಜ್ಯದ ಕೈಗಾರಿಕಾ ಘಟಕಗಳಲ್ಲಿ ಸುರಕ್ಷತಾ ಮಾನದಂಡಗಳ ಅನುಷ್ಠಾನದ ಕುರಿತು ಅಗತ್ಯ ಪರಿಶೀಲನೆ ನಡೆಸಲಾಗುವುದು ಎಂದು ಸಚಿವರು ತಿಳಿಸಿದ್ದಾರೆ.

ಅನಿಲ ಸೋರಿಕೆಗೆ ನಿಖರ ಕಾರಣವನ್ನು ಸಮಗ್ರವಾಗಿ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಕಾರ್ಖಾನೆಗಳಲ್ಲಿ ಕಾರ್ಮಿಕರ ಸುರಕ್ಷತಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದು ಅತ್ಯಗತ್ಯವಾಗಿದ್ದು, ಈ ಘಟನೆಯ ಹಿನ್ನೆಲೆಯಲ್ಲಿ ರಾಜ್ಯದ ಕೈಗಾರಿಕಾ ಘಟಕಗಳಲ್ಲಿ ಸುರಕ್ಷತಾ. ಮೃತರ ಕುಟುಂಬಗಳಿಗೆ ಕಾನೂನು ಪ್ರಕಾರ ದೊರೆಯಬೇಕಾದ ಪರಿಹಾರವನ್ನು ತ್ವರಿತವಾಗಿ ಒದಗಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಅಲ್ಲದೆ, ಮೃತಪಟ್ಟ ಪ್ರತಿಯೊಬ್ಬ ಕಾರ್ಮಿಕರ ಕುಟುಂಬಕ್ಕೆ ಕಂಪನಿಯು ತಲಾ 20 ಲಕ್ಷ ರೂಪಾಯಿ ಪರಿಹಾರ ನೀಡುವುದಾಗಿ ಭರವಸೆ ನೀಡಿದ್ದು, ಕಾರ್ಮಿಕರ ಹಕ್ಕುಗಳಿಗೆ ಅನುಗುಣವಾಗಿ ಇಎಸ್‌ಐಸಿ ಹಾಗೂ ಕಾರ್ಖಾನೆಗಳ ಕಾಯ್ದೆಯಡಿ ದೊರೆಯಬೇಕಾದ ಇತರೆ ಪರಿಹಾರಗಳನ್ನೂ ವಿಳಂಬವಿಲ್ಲದೆ ಒದಗಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

# ಆದರ್ಶ ವ್ಯಕ್ತಿತ್ವ ರೂಪಿಸುವ ಕ್ರೀಡೆ, ಸಾಂಸ್ಕೃತಿಕ ಚಟುವಟಿಕೆ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ**



ವಿದ್ಯಾರ್ಥಿಗಳು ಪಠ್ಯದೊಂದಿಗೆ ಪಠ್ಯೇತರ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವ ಮನೋಭಾವ ಬೆಳೆಸಿಕೊಳ್ಳಬೇಕು. ಕ್ರೀಡೆ ಮತ್ತು ಸಾಂಸ್ಕೃತಿಕ ಚಟುವಟಿಕೆಗಳು ಆದರ್ಶ ವ್ಯಕ್ತಿತ್ವ ರೂಪಿಸುತ್ತವೆ ಎಂದು ಜಿಲ್ಲಾ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕ ಅಜೀತ ಮನ್ನಿಕೇರಿ ಹೇಳಿದರು.

ಜಿಲ್ಲೆಯ ಗುಳೇದಗುಡ್ಡ ತಾಲ್ಲೂಕಿನ ಕೆಲವಡಿ ಗ್ರಾಮದಲ್ಲಿ ಲಕ್ಷ್ಮೀ ರಂಗನಾಥ ಸರ್ಕಾರಿ ಪ್ರೌಢ ಶಾಲೆಯ 2026-27 ನೇ ಸಾಲಿನ ಪಠ್ಯೇತರ ಚಟುವಟಿಕೆಗಳ ಉದ್ಘಾಟನೆ ಮತ್ತು ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಪರಿಶ್ರಮದಿಂದ ಓದುವ ಹವ್ಯಾಸವನ್ನು ರೂಡಿಸಿಕೊಳ್ಳಬೇಕು. ಶಿಕ್ಷಕರು ತರಗತಿಯಲ್ಲಿ ಕಲಿಸಿರುವ ಪಾಠ ಬೋಧನೆ ಮನನ ಮಾಡಿಕೊಳ್ಳಬೇಕು. ಪಠ್ಯೇತರ ಚಟುವಟಿಕೆಗಳಿಂದ ವಿದ್ಯಾರ್ಥಿಗಳಲ್ಲಿ ಹೆಚ್ಚಿನ ಆತ್ಮವಿಶ್ವಾಸ ಬರುತ್ತದೆ. ಎಂದು ಮನ್ನಿಕೇರಿ ಹೇಳಿದರು.

ಅತಿಥಿ ಸಾಹಿತಿ ಡಾ.ಚಂದ್ರಶೇಖರ ಕಾಳನ್ನವರ ಮಾತನಾಡಿ, ವಿದ್ಯಾರ್ಥಿಗಳು ಜೀವನದಲ್ಲಿ ಸಾಮಾಜಿಕ, ಶೈಕ್ಷಣಿಕ, ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಂಡು, ವಿದ್ಯೆ ಕಲಿಸುವ ಗುರುಗಳ ಕೀರ್ತಿ, ಗೌರವ ತರಬೇಕು. ಅಭ್ಯಾಸ, ಪ್ರತಿಭೆಯ ಮೂಲಕ ಸಮಾಜದಲ್ಲಿ ಉತ್ತಮ ವ್ಯಕ್ತಿತ್ವವನ್ನು ಬೆಳೆಸಿಕೊಳ್ಳಬೇಕು. ಶಾಲೆಯ ಶಿಕ್ಷಕರು ಕಲಿಸಿರುವ ಪಾಠಗಳು ಭವಿಷ್ಯತ್ತಿನ ಬದುಕಿಗೆ ದಾರಿದೀಪವಾಗಿರುತ್ತವೆ. ಕ್ರೀಡೆ ಮತ್ತು ಸಾಂಸ್ಕೃತಿಕ ಚಟುವಟಿಕೆಗಳು ಉತ್ತಮ ನಾಯಕತ್ವದ ಗುಣಗಳನ್ನು ಬೆಳೆಸುತ್ತವೆ ಎಂದು ಹೇಳಿದರು.


ಅಧ್ಯಕ್ಷತೆ ವಹಿಸಿದ್ದ ಮುಖ್ಯೋಪಾಧ್ಯಾಯ ಸಂಗಮೇಶ ಕಲ್ಲೂರ ಮಾತನಾಡಿ, ನಮ್ಮ ಪ್ರೌಢ ಶಾಲೆ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಒಟ್ಟು 95.16 ರಷ್ಟು ಉತ್ತಮ ಫಲಿತಾಂಶ ಪಡೆದಿದ್ದು, 9 ಜನ ವಿದ್ಯಾರ್ಥಿಗಳು ಶೇಕಡಾ 90ಕ್ಕಿಂತ ಹೆಚ್ಚಿನ ಫಲಿತಾಂಶ ಪಡೆದಿದ್ದಾರೆ. ಇದರಿಂದ ಈ ವರ್ಷದ ವಿದ್ಯಾರ್ಥಿಗಳಿಗೆ ಸ್ಫೂರ್ತಿ ಮತ್ತು ಪ್ರೇರಣೆ ಆಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಬಹುಮಾನ ನೀಡಿರುವ ದಾನಿಗಳಾದ ಅನ್ನಪೂರ್ಣ ಮುತ್ತನಗೌಡ ಪಾಟೀಲ, ಬಸನಗೌಡ ವೀರನಗೌಡ ಪಾಟೀಲ, ಎಸ್.ಡಿ.ಎಂ.ಸಿ ಅಧ್ಯಕ್ಷ ಉಮೇಶ ಮಾದರ, ಉಪಾಧ್ಯಕ್ಷ ಮುಕ್ಕಣ್ಣ ಕೆಂಗಾರ ಹಾಗೂ ಸರ್ವ ಸದಸ್ಯರು, ರಮೇಶ ಗೌಡರ, ಪ್ರೊ.ಸಂಗಮೇಶ ಬ್ಯಾಳಿ, ಡಾ.ಸಂತೋಷ ಕಾಳನ್ನವರ ಪುಂಡಲೀಕ ಬಡಕನ್ನವರ ಹಾಗೂ ಶಿಕ್ಷಕರಾದ ಬಿ.ಆರ್.ಪಾಟೀಲ, ಶರೀಪಾ ಸುಲ್ತಾನ, ಗೀರಿಶ ಕೊಣ್ಣುರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಶಿಕ್ಷಕಿ ಜಯಶ್ರೀ ಕೊವಳ್ಳಿ ಪ್ರಾಸ್ತಾವಿಕವಾಗಿ ಮಾತನಾಡಿದರು. 2026-27 ನೇ ಸಾಲಿನ ವಿದ್ಯಾರ್ಥಿ ಸಂಸತ್ತಿಗೆ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಶಿಕ್ಷಕ ನಾಗರಾಜ ಸಲಕಿ ಪ್ರಮಾಣ ವಚನ ಬೋಧಿಸಿದರು. ವಿದ್ಯಾರ್ಥಿಗಳು ಪ್ರಾರ್ಥಿಸಿದರು. ಶಿಕ್ಷಕಿ ಶಕುಂತಲಾ ಬಾದಾಮಿ ಸ್ವಾಗತಿಸಿದರು. ಶಿಕ್ಷಕ ರಮೇಶ ಬೀಳಗಿ ನಿರೂಪಿಸಿದರು. ಶಿಕ್ಷಕ ಬಸವರಾಜ ರಕ್ಕಸಗಿ ವಂದಿಸಿದರು.

2025-26 ನೇ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಶಾಲೆಗೆ ಪ್ರಥಮ ಸ್ಥಾನ ಪಡೆದ ಶ್ರೀರಕ್ಷಾ ಗೌಡರ, ದ್ವಿತೀಯ ಸ್ಥಾನ ಪಡೆದ ಅನ್ನಪೂರ್ಣ ಪೂಜಾರಿ, ತೃತೀಯ ಸ್ಥಾನ ಪಡೆದ ಚೈತ್ರಾ ಕಾಳನ್ನವರ ಮತ್ತು ಸರಸ್ವತಿ ಜೂಳಿ ಅವರಿಗೆ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ನೀಡಿ ಸನ್ಮಾನಿಸಲಾಯಿತು.

# ವಿಪ್ರಸಿರಿ ಸೌಹಾರ್ದ ಸಹಕಾರ ಸಂಘದ 7ನೇ ವಾರ್ಷಿಕ ಮಹಾಸಭೆ

• **ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ**



ನಗರದ ಶ್ರೀ ಯೋಗೀಶ್ವರ ಯಾಜ್ಞವಲ್ಕ್ಯ ಆವರಣದಲ್ಲಿ ಬುಧವಾರ ನಡೆದ ವಿಪ್ರಸಿರಿ ಸೌಹಾರ್ದ ಸಹಕಾರ ಸಂಘದ 7ನೇ ವಾರ್ಷಿಕ ಮಹಾಸಭೆಯಲ್ಲಿ 2025-26ನೇ ಸಾಲಿನಲ್ಲಿ ಸಂಘವು ₹17.88 ಲಕ್ಷಗಳ ನಿವ್ವಳ ಲಾಭ ಗಳಿಸಿರುವುದಾಗಿ ಕರ್ನಾಟಕ ರಾಜ್ಯ ಸಹಕಾರಿ ನಿರ್ದೇಶಕ ಜಿ. ಶ್ರೀಧರ ಕೆಸರಹಟ್ಟಿ ತಿಳಿಸಿದರು.

ಜ್ಯೋತಿ ಬೆಳಗಿಸುವ ಮೂಲಕ ಮಹಾಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಕೊಪ್ಪಳ ಜಿಲ್ಲೆಯ ಸಹಕಾರಿ ಸಂಘಗಳಲ್ಲಿ ವಿಪ್ರಸಿರಿ ಸಂಘವು ಪಾರದರ್ಶಕ ಆಡಳಿತ ಹಾಗೂ ಉತ್ತಮ ಹಣಕಾಸು ನಿರ್ವಹಣೆಯ ಮೂಲಕ ಪ್ರಗತಿಯ ಹಾದಿಯಲ್ಲಿ ಸಾಗುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

**ಪಾರದರ್ಶಕ ಆಡಳಿತಕ್ಕೆ ಶ್ಲಾಘನೆ**

ಜಿಲ್ಲಾ ಮಟ್ಟದ ಸಹಕಾರಿ ರಸಪ್ರಶ್ನೆ ಸ್ಪರ್ಧೆಯಲ್ಲಿ ಸಂಘದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಾಯತ್ರಿ ರಂಗನಾಥ ವಟಗಲ್ ಪ್ರಥಮ ಸ್ಥಾನ ಪಡೆದಿರುವುದು ಸಂಘದ ಕಾರ್ಯವೈಖರಿ ಮತ್ತು ಪಾರದರ್ಶಕ ಆಡಳಿತಕ್ಕೆ ಸಾಕ್ಷಿಯಾಗಿದೆ ಎಂದು ಅವರು ಹೇಳಿದರು.

**ಕಿರು ಸಾಲ ಯೋಜನೆಗೆ ಆದ್ಯತೆ ನೀಡಿ:** ಸಂಘದ ಗೌರವಾಧ್ಯಕ್ಷ ನಾರಾಯಣರಾವ್ ವೈದ್ಯ ಮಾತನಾಡಿ, 30 ಕೋಟಿಗೂ ಅಧಿಕ ವ್ಯವಹಾರ ನಡೆಸಿರುವ ವಿಪ್ರಸಿರಿ ಸಂಘವು ಗ್ರಾಹಕರಿಗೆ ಕಿರು ಸಾಲ ಯೋಜನೆಗಳನ್ನು ಇನ್ನಷ್ಟು ವಿಸ್ತರಿಸಿ, ಹೆಚ್ಚಿನ ಷೇರುದಾರರು ಹಾಗೂ ಠೇವಣಿದಾರರನ್ನು ಸೆಳೆಯುವ ಮೂಲಕ ಸಹಕಾರಿ ಕ್ಷೇತ್ರದಲ್ಲಿ ಮತ್ತಷ್ಟು ಬೆಳವಣಿಗೆ ಸಾಧಿಸಬೇಕು ಎಂದು ಕರೆ ನೀಡಿದರು.

**2422 ಸದಸ್ಯರೊಂದಿಗೆ ಸಂಘದ ಬೆಳವಣಿಗೆ**

ಸಂಘದ ಅಧ್ಯಕ್ಷ ರಾಘವೇಂದ್ರ ಮೇಗೂರು ವಾರ್ಷಿಕ ವರದಿ ಮಂಡಿಸಿ ಮಾತನಾಡಿ, "ಗ್ರಾಹಕರ ಸೇವೆಯೇ ನಿಜವಾದ ಸೇವೆ" ಎಂಬ ಧ್ಯೇಯದೊಂದಿಗೆ ಕೃಷಿ ಸಾಲ, ಶೈಕ್ಷಣಿಕ ಸಾಲ, ಚಿನ್ನಾಭರಣ ಮೇಲಿನ ಸಾಲ ಸೇರಿದಂತೆ ವಿವಿಧ ಹಣಕಾಸು ಸೇವೆಗಳನ್ನು ನೀಡಲಾಗುತ್ತಿದೆ. ಸಾಲ ವಸೂಲಾತಿಗಾಗಿ 8ಕ್ಕೂ ಹೆಚ್ಚು ಪಿಗ್ಮಿ ಏಜೆಂಟರು ಕಾರ್ಯನಿರ್ವಹಿಸುತ್ತಿದ್ದು, ಪ್ರಸ್ತುತ ಸಂಘದಲ್ಲಿ 2422 ಸದಸ್ಯರಿದ್ದು, ಮುಂದಿನ ದಿನಗಳಲ್ಲಿ ಸದಸ್ಯರ ಸಂಖ್ಯೆಯನ್ನು ಇನ್ನಷ್ಟು ಹೆಚ್ಚಿಸುವ ಗುರಿ ಹೊಂದಿದ್ದೇವೆ ಎಂದು ತಿಳಿಸಿದರು.

**ಗೌರವ ಸನ್ಮಾನ:** ಜಿಲ್ಲಾ ಮಟ್ಟದ ಸಹಕಾರಿ ರಸಪ್ರಶ್ನೆ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಾಯತ್ರಿ ರಂಗನಾಥ ವಟಗಲ್ ಅವರನ್ನು ಇದೇ ಸಂದರ್ಭದಲ್ಲಿ ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಸಂಘದ ಉಪಾಧ್ಯಕ್ಷ ಗುರುರಾಜ ಚಿಚ್ಚನಗುಡ್ಡ, ನಿರ್ದೇಶಕರಾದ ರಮೇಶ್ ಕುಲಕರ್ಣಿ, ಮುರುಳಿಧರ ಗಂಗನಾಳ, ಪ್ರಾಣೇಶ ಅಂತರಗಂಗೆ ಸೇರಿದಂತೆ ನಿರ್ದೇಶಕ ಮಂಡಳಿ ಸದಸ್ಯರು, ಸಿಬ್ಬಂದಿ ವರ್ಗ ಹಾಗೂ ಅನೇಕ ಷೇರುದಾರರು ಉಪಸ್ಥಿತರಿದ್ದರು.

# ಬೆಳೆ ಹಾನಿ ಖುದ್ದು ಪರಿಶೀಲಿಸಿದ ಸಚಿವ ಶಿವರಾಜ ತಂಗಡಗಿ

• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ**



ಸರ್ಕಾರದ ಸಂಪುಟ ದರ್ಜೆ ಸಚಿವರಾದ ಶ್ರೀ ಶಿವರಾಜ ಎಸ್. ತಂಗಡಗಿ ಅವರು ಪೂರ್ವ ನಿಗದಿಯಂತೆ ಆಗಸ್ಟ್ 5ರಂದು ಕೊಪ್ಪಳ ಗ್ರಾಮೀಣ ಭಾಗದಲ್ಲಿ ಪ್ರವಾಸ ಕೈಗೊಂಡು ಬರ ಪರಿಸ್ಥಿತಿಯ ಅವಲೋಕನ ನಡೆಸಿದರು.

ಮೊದಲಿಗೆ ಗಂಗಾವತಿ ತಾಲ್ಲೂಕಿನ ವೆಂಕಟಗಿರಿ ಹೋಬಳಿಯ ವ್ಯಾಪ್ತಿಯ ಬಂಡ್ರಾಳ ಗ್ರಾಮಕ್ಕೆ ತೆರಳಿ ಬೆಳೆ ಹಾನಿ ಹಾಗೂ ಬರ ವೀಕ್ಷಣೆ ನಡೆಸಿದರು. ಬಂಡ್ರಾಳ ಗ್ರಾಮದ ಹನುಮಮ್ಮ ಗಂಡ ಮಲಿಯಪ್ಪ ನಾಯಕ ಅವರ ಒಂದು ಎಕರೆ 36 ಗುಂಟೆಯಲ್ಲಿ ಬೆಳೆದ ಸಜ್ಜಿ ಬೆಳೆ ವೀಕ್ಷಣೆ ನಡೆಸಿದರು. ಮಳೆಯಿಲ್ಲದೇ ಬೆಳೆ ಹಾಳಾಗಿದೆ ಎಂದು ಹನುಮಮ್ಮ ಮತ್ತು ಅವರ ಮಕ್ಕಳು ಸಚಿವರ ಎದುರು ತಮ್ಮ ಅಳಲು ತೋಡಿಕೊಂಡರು.

ಗಡ್ಡಿ ಗ್ರಾಮದ ಮದ್ದಾನಪ್ಪ ತಂದೆ ನಾಗಪ್ಪ ಭಜಂತ್ರಿ ಅವರ ಹೊಲದಲ್ಲಿನ ಮೆಕ್ಕೆ ಜೋಳ ಬೆಳೆಯು ಸಹ ಮಳೆಯಿಲ್ಲದೆ ಹಾಳಾಗಿದೆ ಎಂದು ಗಡ್ಡಿ ಗ್ರಾಮಸ್ಥರು ಸಚಿವರಿಗೆ ತಿಳಿಸಿದರು.

*ಕಂದಾಯ ಇಲಾಖೆಗೆ ವರದಿ:* ನಾಳೆ ಆಗಸ್ಟ್ 06ರಂದು ಕೊಪ್ಪಳದಲ್ಲಿ ಅಧಿಕಾರಿಗಳೊಂದಿಗೆ ಸಭೆ ಮಾಡುತ್ತೇನೆ. ಸಿಎಂ ಅವರು ಎಲ್ಲ ಸಚಿವರಿಗೆ ಸೂಚನೆ ನೀಡಿ ಬರ ವೀಕ್ಷಣೆ ನಡೆಸಲು ಹೇಳಿದ್ದಾರೆ. ಜಿಲ್ಲೆಯಲ್ಲಿ ಇಂದು, ನಾಳೆ, ನಾಡಿದ್ದು ವಿವಿಧೆಡೆ ಸಂಚರಿಸಿ ಮುಂಗಾರು ಋತುವಿನ ಎಲ್ಲ ಬೆಳೆಗಳ ಪರಿಸ್ಥಿತಿ ಅವಲೋಕಿಸುತ್ತೇನೆ. ಬೆಳೆ ಹಾನಿಗೆ ಏನು ಪರಿಹಾರ ಕೊಡಬೇಕು. ಇದಕ್ಕಾಗಿ ಅಧಿಕಾರಿಗಳು ಏನು ಮಾಡಿದ್ದಾರೆ ಎಂದು ಪರಿಶೀಳಿಸುತ್ತೇನೆ. ಬರ ಘೋಷಣೆಗೆ ಸಂಬಂಧಿಸಿದಂತೆ ಯಾವ ರೈತರಿಗೂ, ಯಾವ ತಾಲೂಕಿನ ರೈತರಿಗೂ ಅನ್ಯಾಯವಾಗದಂತೆ ಕ್ರಮವಹಿಸಲಾಗುವುದು. ಈ ಬಗ್ಗೆ ಕಂದಾಯ ಇಲಾಖೆಗೆ ವರದಿ ಒಪ್ಪಿಸಲಾಗುವುದು ಎಂದು ಸಚಿವರು ಇದೆ ವೇಳೆ ಸುದ್ದಿಗಾರರಿಗೆ ತಿಳಿಸಿದರು.

*ಗ್ರಾಮಸ್ಥರಿಂದ ಸ್ವಾಗತ:* ಸಂಪುಟ ದರ್ಜೆ ಸಚಿವರಾದ ಮೇಲೆ ಮೊದಲ ಬಾರಿಗೆ ತವರು ಜಿಲ್ಲೆಗೆ ಆಗಮಿಸಿದ ಸಚಿವರಾದ ಶಿವರಾಜ ತಂಗಡಗಿ ಅವರಿಗೆ ಬಂಡ್ರಾಳ ಹಾಗೂ ಗಡ್ಡಿ ಗ್ರಾಮಸ್ಥರು ಆತ್ಮೀಯ ಸ್ವಾಗತ ಕೋರಿದರು. ಪಟಾಕಿ ಸಿಡಿಸಿ, ಹೂವಿನ ಹಾರ ಹಾಕಿ ಸಂಭ್ರಮಿಸಿದರು.

ಈ ವೇಳೆ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ, ಜಿಲ್ಲಾಧಿಕಾರಿಗಳಾದ ಡಾ.ಸುರೇಶ ಇಟ್ನಾಳ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಡಾ.ರಾಮ್ ಎಲ್ ಅರಸಿದ್ದಿ, ಕೊಪ್ಪಳ ಸಹಾಯಕ ಆಯುಕ್ತರಾದ ಮೆಹಬೂಬ ಜಿಲಾನಿ, ಜಿಪಂ ಉಪ ಕಾರ್ಯದರ್ಶಿ ಕೃಷ್ಣಮೂರ್ತಿ, ಗಂಗಾವತಿ ಡಿವೈಎಸ್ಪಿ ಜೆ ಎಸ್ ನ್ಯಾಮಗೌಡರ, ಜಂಟಿ ಕೃಷಿ ನಿರ್ದೇಶಕರಾದ ಕೃಷ್ಣಮೂರ್ತಿ, ಜಂಟಿ ತೋಟಗಾರಿಕಾ ನಿರ್ದೇಶಕರಾದ ಕೃಷ್ಣ ಉಕ್ಕುಂದ, ಮೀನುಗಾರಿಕಾ ಇಲಾಖೆಯ ಉಪ ನಿರ್ದೇಶಕರಾದ ಶ್ರೀನಿವಾಸ ಕುಲಕರ್ಣಿ, ಪಶುಪಾಲನಾ ಇಲಾಖೆಯ ಉಪ ನಿರ್ದೇಶಕರಾದ ಮಲ್ಲಯ್ಯ, ಕೆವಿಕೆಯ ರಾಘವೇಂದ್ರ ಯಲಿಗಾರ, ಕೃಷಿ ವಿಸ್ತರಣಾ ಶಿಕ್ಷಣ ಘಟಕದ ಡಾ.ಬದ್ರಿಪ್ರಸಾದ, ಗಂಗಾವತಿಯ ಸಹಾಯಕ ಕೃಷಿ ನಿರ್ದೇಶಕರಾದ ಡಾ.ಅಭಿಲಾಷ ಸಿ ಸೇರಿದಂತೆ ಇತರರು ಇದ್ದರು.

# ಬೆಳೆಹಾನಿ ಸಮಗ್ರ ವರದಿ ಸಲ್ಲಿಸಲು ಸಚಿವ ಕಾಶಪ್ಪನವರ ಸೂಚನೆ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ**



ಜಿಲ್ಲೆಯಲ್ಲಿ ಮಳೆ ಕೊರತೆಯಿಂದ ಉಂಟಾಗಿರುವ ಬರ ಪರಿಸ್ಥಿತಿ ಪರಿಶೀಲನೆಗೆ ನೂತನ ಸಚಿವ ವಿಜಯಾನಂದ ಕಾಶಪ್ಪನವರ ಜಿಲ್ಲೆಯ ವಿವಿಧ ಗ್ರಾಮಗಳ ರೈತರ ಜಮೀನುಗಳಿಗೆ ಬುಧವಾರ ಭೇಟಿ ನೀಡಿ ಹಾನಿಗೊಳಗಾದ ಬೆಳೆಗಳ ಪರಿವೀಕ್ಷಣೆ ಮಾಡಿದರು.

ಜಿಲ್ಲೆಯ ಇಳಕಲ್ಲ ತಾಲೂಕಿನ ಹೆರೂರ ಗ್ರಾಮದ ರೈತ ಗಿರಿರಾಜ ದರಕ ಅವರ ಜಮೀನಿನಲ್ಲಿ ಬೆಳೆದ ತೊಗರಿ, ರಕ್ಕಸಗಿ ಗ್ರಾಮದ ರೈತ ಹುಲಗಪ್ಪ ತಳವಾರ ಹೆಸರು ಬೆಳೆ, ಬಾದಾಮಿ ಮತಕ್ಷೇತ್ರ ವ್ಯಾಪ್ತಿಯ ಗುಳೇದಗುಡ್ಡ ತಾಲೂಕಿನ ಬೂದನಗಡ ಗ್ರಾಮದ ಜಮೀನುಗಳಲ್ಲಿ ಬೆಳೆಯಲಾದ ತೊಗರಿ, ಸೂರ್ಯಕಾಂತಿ, ಸಜ್ಜೆ, ಈರುಳ್ಳಿ ಹಾಗೂ ಬಾಗಲಕೋಟೆ ತಾಲೂಕಿನ ಶಿರೂರ ಗ್ರಾಮದ ಅರುಣಾ ಕಟ್ಟಿಮನಿ ಅವರ ಜಮೀನಿನಲ್ಲಿ ಬೆಳೆದ ಮೆಣಸಿನಕಾಯಿ ಬೆಳೆಗಳನ್ನು ವೀಕ್ಷಿಸಿ ರೈತರ ಸಮಸ್ಯೆಗಳನ್ನು ಆಲಿಸಿದರು.

ಮಳೆಯ ಅಭಾವದಿಂದ ಬೆಳೆಗಳಿಗೆ ಉಂಟಾಗಿರುವ ನಷ್ಟದ ಕುರಿತು ರೈತರಿಂದ ಮಾಹಿತಿ ಪಡೆದು ಅಧಿಕಾರಿಗಳೊಂದಿಗೆ ಚರ್ಚಿಸಿದರು. ಈ ಸಂದರ್ಭದಲ್ಲಿ ಕೃಷಿ ಮತ್ತು ತೋಟಗಾರಿಕೆ ಇಲಾಖೆಯ ಅಧಿಕಾರಿಗಳಿಗೆ ಮಳೆಯ ಕೊರತೆ ಎದುರಾದ ಸಂದರ್ಭದಲ್ಲಿ ರೈತರಿಗೆ ಬೆಳೆ ನಿರ್ವಹಣೆ, ಪರ್ಯಾಯ ಬೆಳೆ ಹಾಗೂ ನಷ್ಟ ತಗ್ಗಿಸುವ ಕುರಿತು ಸೂಕ್ತ ತಾಂತ್ರಿಕ ಸಲಹೆಗಳನ್ನು ನೀಡುವ ಕೆಲಸವಾಗಬೇಕೆಂದು ಸಚಿವರು ಸೂಚಿಸಿದರು. ಬೆಳೆವಿಮೆ ಯೋಜನೆಯಡಿ ಎಷ್ಟು ರೈತರು ನೋಂದಣಿ ಮಾಡಿಕೊಂಡಿದ್ದಾರೆ ಎಮಬ ಮಾಹಿತಿಯನ್ನು ಪಡೆದು ವಿಮೆ ಸೌಲಭ್ಯ ಪ್ರತಿಯೊಬ್ಬ ಅರ್ಹ ರೈತನಿಗೂ ತಲುಪುವಂತೆ ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದರು.

ಪರಿವೀಕ್ಷಣೆ ಸಂದರ್ಭದಲ್ಲಿ ಜಂಟಿ ಕೃಷಿ ನಿರ್ದೇಶಕ ಟಿ.ಎಸ್.ರುದ್ರೇಶಪ್ಪ ಹಾಗೂ ತೋ-ಟಗಾರಿಕೆ ಜಂಟಿ ನಿರ್ದೇಶಕ ರವಿಂದ್ರ ಹಕಾಟಿ ಅವರು ಜಿಲ್ಲೆಯ ಬೆಳೆಹಾನಿ, ಮಳೆಯ ಕೊರತೆ ಹಾಗೂ ಕೃಷಿ ಪರಿಸ್ಥಿತಿಯ ಕುರಿತು ಸಚಿವರಿಗೆ ವಿವರಿಸಿದರು. ಈ ಸಂದರ್ಭದಲ್ಲಿ ರೈತರೊಂದಿಗೆ ಸಮಾಲೋಚಣೆ ನಡೆಸಿದ ಸಚಿವರು ಮಳೆಯ ಕೊರತೆಯಿಂದ ಹಾನಿಗೊಳಗಾದ ಬೆಳೆಗಳ ಕುರಿತು ಸಮಗ್ರ ಸಮೀಕ್ಷೆ ನಡೆಸಿ, ರೈತರಿಗೆ ಸೂಕ್ತ ಪರಿಹಾರ ದೊರಕುವ ನಿಟ್ಟಿನಲ್ಲಿ ಎರಡು ದಿನಗಳೊಳಗಾಗಿ ವಿಸ್ತೃತ ವರದಿ ಸಿದ್ದಪಡಿಸಿ, ಸರಕಾರಕ್ಕೆ ಸಲ್ಲಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸಚಿವ ವಿಜಯಾನಂದ ಕಾಶಪ್ಪನವರ ಸೂಚಿಸಿದರು.

ಬದಾಮಿ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಬೂದನಗಡ ಗ್ರಾಮದಲ್ಲಿರುವ ಸೂರ್ಯಕಾಂತಿ ಬೆಳೆದ ರೈತರ ಜಮೀನಿಗೆ ಸಚಿವರು ಭೇಟಿ ನೀಡಿದ ಸಂದರ್ಭದಲ್ಲಿ ಬಾದಾಮಿ ಶಾಸಕ ಭೀಮಸೇನ ಚಿಮ್ಮನಕಟ್ಟಿ, ಬಾಗಲಕೋಟೆ ಶಾಸಕ ಉಮೇಶ ಮೇಟಿ ಉಪಸ್ಥಿತರಿದ್ದು, ರೈತರಿಗೆ ಉಂಟಾದ ಬೆಳೆ ಹಾನಿಯ ಬಗ್ಗೆ ಮನವರಿಕೆ ಮಾಡಿಕೊಟ್ಟರು. ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಮಳೆಯ ಕೊರತೆಯಿಂದ ರೈತರಿಗೆ ಸರಿಯಾಗಿ ಬೆಳೆ ಬರದೇ ಸಂಕಷ್ಟಕ್ಕೆ ಒಳಗಾಗಿದ್ದಾರೆ. ಈಗಾಗಲೇ ರೈತರು ಬೆಳೆದ ಬೆಳೆಗಳಿಗೆ ವಿಮೆಗೆ ಒಳಪಡಿಸಿದ್ದು, ಸೂಕ್ತ ಪರಿಹಾರ ದೊರಕುವಂತೆ ಆಗಬೇಕು ಎಂದು ಶಾಸಕರು ಹೇಳಿದರು.

**ಮುಖ್ಯಮಂತ್ರಿಗಳ ಸೂಚನೆಯಂತೆ ಜಿಲ್ಲೆಯಲ್ಲಿ ಮಳೆಯ ಕೊರತೆಯಿಂದ ಉಂಟಾಗಿರುವ ಬೆಳೆಹಾನಿ ಹಾಗೂ ಬರ ಪರಿಸ್ಥಿತಿಯ ಕುರಿತು ಪರಿವೀಕ್ಷಣೆ ಮಾಡಲು ಪ್ರಾರಂಭಿಸಲಾಗಿದ್ದು, ಪರಿವೀಕ್ಷಣೆ ವೇಳೆ ಸಂಗ್ರಹವಾಗುವ ಮಾಹಿತಿ ಹಾಗೂ ಅಧಿಕಾರಿಗಳ ವರದಿಗಳ ಆಧಾರದ ಮೇಲೆ ಸಮಗ್ರ ವರದಿಯನ್ನು ಸರಕಾರಕ್ಕೆ ಸಲ್ಲಿಸಲಾಗುವುದು. ವರದಿಯ ಆಧಾರದ ಮೇಲೆ ರೈತರಿಗೆ ಸೂಕ್ತ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಲಿದೆ ಎಂದು ಸಚಿವ ವಿಜಯಾನಂದ ಕಾಶಪ್ಪನವರ ತಿಳಿಸಿದರು.**

ಜಿಲ್ಲಾಧಿಕಾರಿ ಸಂಗಪ್ಪ, ಜಿಪಂ ಸಿಇಓ ಗಜಾನನ ಬಾಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಜಿಪಂ ಉಪಕಾರ್ಯದರ್ಶಿ ಎನ್.ವೈ.ಬಸರಿಗಿಡದ, ಉಪ ವಿಭಾಗಾಧಿಕಾರಿ ಮಹೇಶಕುಮಾರ ಮಾಲಗಿತ್ತಿ, ತಹಶೀಲ್ದಾರರಾದ ಅಮರೇಶ ಪಮ್ಮಾರ, ಪ್ರದೀಪಕುಮಾರ ಹಿರೇಮಠ, ಶಿವಾನಂದ ಬೊಮ್ಮನಗಿ, ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಮುರಳಿಧರ ದೇಶಪಾಂಡೆ, ಎಸ್ ಬಿ.ಐ ಜನರಲ್ ಇನ್ಸೂರೆನ್ಸ್ ಕಂಪನಿಯ ಜಿಲ್ಲಾ ವ್ಯವಸ್ಥಾಪಕ ಜನಾರ್ಧನ ತಿವಾರಿ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಸುಸ್ಥಿರ ಅಭಿವೃದ್ಧಿಗೆ ಕೃತಕ ಬುದ್ಧಿಮತ್ತೆ ಶಕ್ತಿವರ್ಧಕವಾಗಬೇಕು: ಸಚಿವ

• **ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು**

ಸುಸ್ಥಿರ ಅಭಿವೃದ್ಧಿ ಗುರಿಗಳ (Sustainable Development Goals - SDGs) ಸಾಧನೆಗೆ ಕೃತಕ ಬುದ್ಧಿಮತ್ತೆ (Artificial Intelligence - AI) ಶಕ್ತಿವರ್ಧಕವಾಗಿ ಕಾರ್ಯನಿರ್ವಹಿಸಬೇಕು ಎಂದು ಗೃಹ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಇ-ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಬೆಂಗಳೂರುದಲ್ಲಿರುವ ವೋಲ್ವರ್‌ಹ್ಯಾಂಪ್ಟನ್–ಬೆಂಗಳೂರು ಸೆಂಟರ್ ಫಾರ್ ರಿಸರ್ಚ್ ಅಂಡ್ ಇನೋವೇಷನ್ (1WBCR&I) ವತಿಯಿಂದ ಆಯೋಜಿಸಿದ್ದ ಸುಸ್ಥಿರ ಅಭಿವೃದ್ಧಿ ಗುರಿಗಳ ಸಾಧನೆಗೆ ಕೃತಕ ಬುದ್ಧಿಮತ್ತೆಯ ಪರಿಣಾಮಕಾರಿ ಬಳಕೆ" (Leveraging Artificial Intelligence to Advance Sustainable Development Goals)ಕುರಿತ ಅಂತರರಾಷ್ಟ್ರೀಯ ಸಮ್ಮೇಳನವನ್ನು ಉದ್ಘಾಟಿಸಿ, ಸಂಶೋಧಕರು, ಶಿಕ್ಷಣ ತಜ್ಞರು, ಕೈಗಾರಿಕಾ ವಲಯದ ಪ್ರತಿನಿಧಿಗಳು ಹಾಗೂ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಸಚಿವರು, ಕೃತಕ ಬುದ್ಧಿಮತ್ತೆಯನ್ನು ಜವಾಬ್ದಾರಿಯುತವಾಗಿ ಬಳಸುವ ಮೂಲಕ ಸಮಾಜಮುಖಿ ಅಭಿವೃದ್ಧಿಗೆ ವೇಗ ನೀಡಬೇಕು ಹಾಗೂ ಮುಂದಿನ ತಲೆಮಾರಿನ ನವೋದ್ಯಮಿಗಳನ್ನು ರೂಪಿಸಬೇಕೆಂದು ಕರೆ ನೀಡಿದರು.




ಸಂಯುಕ್ತ ರಾಷ್ಟ್ರಗಳ ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಉಲ್ಲೇಖಿಸಿದ ಅವರು, ಬಡತನ ನಿರ್ಮೂಲನೆ, ಉತ್ತಮ ಆರೋಗ್ಯ ಸೇವೆ, ಗುಣಮಟ್ಟದ ಶಿಕ್ಷಣ, ಅಸಮಾನತೆ ನಿವಾರಣೆ ಹಾಗೂ ಹವಾಮಾನ ಬದಲಾವಣೆಯಂತಹ ಜಾಗತಿಕ ಸವಾಲುಗಳನ್ನು ಎದುರಿಸುವಲ್ಲಿ ಇನ್ನೂ ಸಾಕಷ್ಟು ಅಂತರವಿದೆ. ಈ ಅಂತರವನ್ನು ಕಡಿಮೆ ಮಾಡುವಲ್ಲಿ ಕೃತಕ ಬುದ್ಧಿಮತ್ತೆ ಅಪೂರ್ವ ಅವಕಾಶವನ್ನು ಒದಗಿಸುತ್ತಿದ್ದು, ಅದನ್ನು ಮಾನವ ಕಲ್ಯಾಣದ ದೃಷ್ಟಿಯಿಂದ ಜವಾಬ್ದಾರಿಯುತವಾಗಿ ಬಳಸಬೇಕಾಗಿದೆ ಎಂದು ಹೇಳಿದರು.

"ಕೃತಕ ಬುದ್ಧಿಮತ್ತೆ ಯಾವುದೇ ರಕ್ಷಕನಲ್ಲ. ಅದಕ್ಕೆ ಆತ್ಮಸಾಕ್ಷಿ, ಧೈರ್ಯ ಅಥವಾ ಕರುಣೆ ಇಲ್ಲ. ಆದರೆ ಆತ್ಮಸಾಕ್ಷಿ, ಧೈರ್ಯ ಮತ್ತು ಕರುಣೆ ಹೊಂದಿರುವ ಮನುಷ್ಯನ ಕೈಯಲ್ಲಿ ಅದು ಅತ್ಯಂತ ಶಕ್ತಿಯುತ ಸಾಧನವಾಗುತ್ತದೆ. ಎಐ ನಮ್ಮ ಸಮಸ್ಯೆಗಳನ್ನು ಪರಿಹರಿಸಬಹುದೇ ಎಂಬುದಕ್ಕಿಂತ, ಸಮಾಜಕ್ಕೆ ಅತ್ಯಂತ ಅಗತ್ಯವಿರುವ ಸಮಸ್ಯೆಗಳ ಪರಿಹಾರಕ್ಕಾಗಿ ನಾವು ಅದನ್ನು ಎಷ್ಟು ಜವಾಬ್ದಾರಿಯಿಂದ ಬಳಸುತ್ತೇವೆ ಎಂಬುದೇ ಮುಖ್ಯ," ಎಂದು ಸಚಿವರು ಹೇಳಿದರು.

"ಸುಸ್ಥಿರ ಅಭಿವೃದ್ಧಿ ಗುರಿಗಳ ಸಾಧನೆಯತ್ತ ಸಾಗುವ ಸಂದರ್ಭದಲ್ಲಿ ತಂತ್ರಜ್ಞಾನ ಸದಾ ಮಾನವ ಕೇಂದ್ರಿತವಾಗಿರಬೇಕು. ವೈದ್ಯರಿಗೆ ಜೀವ ಉಳಿಸಲು, ರೈತರಿಗೆ ಉತ್ಪಾದಕತೆ ಹೆಚ್ಚಿಸಲು, ಸರ್ಕಾರಗಳಿಗೆ ನಾಗರಿಕ ಸೇವೆಗಳನ್ನು ಇನ್ನಷ್ಟು ಪರಿಣಾಮಕಾರಿಯಾಗಿ ನೀಡಲು ಹಾಗೂ ಯುವ ನವೋದ್ಯಮಿಗಳಿಗೆ ಸಮಾಜಮುಖಿ ಪರಿಹಾರಗಳನ್ನು ರೂಪಿಸಲು ಎಐ ನೆರವಾಗಬೇಕು. ಇದೇ ನಮ್ಮ ಭವಿಷ್ಯದ ದಿಕ್ಕಾಗಬೇಕು," ಎಂದು ಪ್ರಿಯಾಂಕ್ ಖರ್ಗೆ ಹೇಳಿದರು.

ಭಾಷಣದ ಸಮಾರೋಪದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಅವರು, ವಿದ್ಯಾರ್ಥಿಗಳು, ಸಂಶೋಧಕರು ಹಾಗೂ ನವೋದ್ಯಮಿಗಳು ತಂತ್ರಜ್ಞಾನ ಅಭಿವೃದ್ಧಿಯ ಕೇಂದ್ರಬಿಂದುವಾಗಿ ಮಾನವನನ್ನು ಪರಿಗಣಿಸಬೇಕು ಎಂದು ಕರೆ ನೀಡಿದರು. ಕೃತಕ ಬುದ್ಧಿಮತ್ತೆಯನ್ನು ಕೇವಲ ತಾಂತ್ರಿಕ ಸಾಧನವಾಗಿ ಮಾತ್ರವಲ್ಲದೆ, ಸಮಾನತೆ, ಒಳಗೊಳ್ಳುವಿಕೆ ಮತ್ತು ಸುಸ್ಥಿರ ಅಭಿವೃದ್ಧಿಯನ್ನು ಸಾಧಿಸುವ ಸಾಧನವಾಗಿ ಬಳಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದು ಹೇಳಿದರು.

ಕರ್ನಾಟಕ ಸರ್ಕಾರ ದೇಶದ ಮೊದಲ ವಿಶೇಷ ಎಐ ವಿಶ್ವವಿದ್ಯಾಲಯ, ವಿಶ್ವದ ಅತ್ಯಂತ ಕೈಗೆಟಕುವ ಎಐ ಸಿದ್ಧ ವೈಯಕ್ತಿಕ ಕಂಪ್ಯೂಟರ್ ಅಭಿವೃದ್ಧಿ, ಇಐಇಗಿಂಖಿಇ ಓಜಥಣ ಮೂಲಕ ಡೀಪ್–ಟೆಕ್ ಸ್ಟಾರ್ಟ್‌ಅಪ್‌ಗಳಿಗೆ ಉತ್ತೇಜನ, ನಿಪುಣ ಕರ್ನಾಟಕ ಜಾಗತಿಕ ನಾವೀನ್ಯತಾ ಸಹಭಾಗಿತ್ವಗಳು ಹಾಗೂ ಎಐ ಆಧಾರಿತ ಇ–ಆಡಳಿತ ಕಾರ್ಯಕ್ರಮಗಳ ಮೂಲಕ ಜವಾಬ್ದಾರಿಯುತ ಹಾಗೂ ಭವಿಷ್ಯೋನ್ಮುಖಿ ಎಐ ಪರಿಸರ ವ್ಯವಸ್ಥೆಯನ್ನು ನಿರ್ಮಿಸುವ ಬದ್ಧತೆಯನ್ನು ಮುಂದುವರಿಸಿದೆ ಎಂದು ಸಚಿವರು ವಿವರಿಸಿದರು.

ಡಾ.ಮನಮೋಹನ್‌ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾಲಯದ ಉಪ ಕುಲಪತಿ ಪ್ರೊ. ರಮೇಶ್ ಬಿ ಅಧ್ಯಕ್ಷತೆವಹಿಸಿದ್ದ ಕಾರ್ಯಕ್ರಮದಲ್ಲಿ ವಿಶ್ವವಿದ್ಯಾಲಯಗಳ ಉಪ ಕುಲಪತಿಗಳು, ಶಿಕ್ಷಣ–ತಜ್ಞರು ಪಾಲ್ಗೊಂಡಿದ್ದರು.

## ಹಣ ದುರ್ಬಳಕೆ: ತನಿಖೆಗೆ ದಲಿತ ಸಂಘರ್ಷ ಸಮಿತಿ ಆಗ್ರಹ



**ಕೆಂಭಾವಿ:** ಇಲ್ಲಿನ ಪುರಸಭೆಯಲ್ಲಿ ಸಾರ್ವಜನಿಕ ಅಭಿವೃದ್ಧಿ ಕಾಮಗಾರಿಗಳ ಹಣ ದುರ್ಬಳಕೆಯಾಗಿದೆ ಎಂದು ಆರೋಪಿಸಿ, ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿಯು ಯೋಜನಾ ನಿರ್ದೇಶಕರಿಗೆ ಮನವಿ ಸಲ್ಲಿಸಿದೆ. ಸಾರ್ವಜನಿಕ ಮೂಲಸೌಕರ್ಯಗಳ ಅಭಿವೃದ್ಧಿಗೆ ಮೀಸಲಿಟ್ಟ ಹಣವನ್ನು ದುರುಪಯೋಗಪಡಿಸಿಕೊಂಡಿರುವ ಶಂಕೆ ವ್ಯಕ್ತವಾಗಿದ್ದು, ಈ ಬಗ್ಗೆ ತಕ್ಷಣವೇ ಸ್ಥಳ ಪರಿಶೀಲನೆ ಹಾಗೂ ಸೂಕ್ತ ತನಿಖೆ ನಡೆಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ವಾರ್ಡ್ ನಂ. 2ರ ಡಾ. ಬಿ.ಆರ್. ಅಂಬೇಡ್ಕರ್ ಚೌಕ್ ಬಳಿ ಇರುವ ಚರಂಡಿ ಮೇಲೆ ಆರ್‌ಸಿಸಿ ಸ್ಲ್ಯಾಬ್ ಹಾಕುವುದಾಗಿ ಹೇಳಿ, ಕೆಲಸ ಪೂರ್ಣಗೊಳಿಸದೇ ಹಣ ಎತ್ತಲಾಗಿದೆ ಎಂದು ಸಮಿತಿ ನೇರ ಆರೋಪ ಮಾಡಿದೆ. ಸಾರ್ವಜನಿಕರಿಗೆ ಅಗತ್ಯವಿರುವ ಮೂಲಸೌಕರ್ಯ ಹಾಗೂ ನೈರ್ಮಲ್ಯ ವ್ಯವಸ್ಥೆ ಕಲ್ಪಿಸುವಲ್ಲಿ ಪುರಸಭೆ ವಿಫಲವಾಗಿದೆ.

ಕಾಮಗಾರಿಗಳ ಲೋಪದೋಷಗಳ ಕುರಿತು ಜಿಲ್ಲಾಡಳಿತ ಹಾಗೂ ಸಂಬಂಧಪಟ್ಟ ಅಧಿಕಾರಿಗಳು ತಕ್ಷಣವೇ ಸ್ಥಳ ಪರಿಶೀಲನೆ ನಡೆಸಬೇಕು. ಸಾರ್ವಜನಿಕರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳಬೇಕು. ಅಭಿವೃದ್ಧಿ ಕಾರ್ಯಗಳಲ್ಲಿ ಪಾರದರ್ಶಕತೆ ಕಾಯ್ದುಕೊಂಡು, ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ಕ್ರಮ ವಹಿಸಬೇಕು. ಸಾರ್ವಜನಿಕರ ಹಿತದೃಷ್ಟಿಯಿಂದ ಈ ದೂರನ್ನು ನಿರ್ಲಕ್ಷಿಸದೇ, ಕಾನೂನುಬದ್ಧವಾಗಿ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ದಲಿತ ಸಂಘರ್ಷ ಸಮಿತಿಯ ಪದಾಧಿಕಾರಿಗಳು ಜಿಲ್ಲಾಡಳಿತವನ್ನು ಒತ್ತಾಯಿಸಿದ್ದಾರೆ.

## ಹಳ್ಳಕ್ಕೆ ವಿಷಯುಕ್ತ ರಾಸಾಯನಿಕ ತ್ಯಾಜ್ಯ: ಕ್ರಮಕ್ಕೆ ಈಶ್ವರ ಖಂಡ್ರೆ ಸೂಚನೆ



**ಬೀದರ್:** ಮಾಣಿಕನಗರದ ಹಳ್ಳಕ್ಕೆ ಹಾಗೂ ಗುರುಗಂಗಾ ಮತ್ತು ಮೀರಜಾ ನದಿಗೆ ಹುಮನಾಬಾದ್ ಕೈಗಾರಿಕಾ ಪ್ರದೇಶದ ಕೆಲವು ಕಾರ್ಖಾನೆಗಳಿಂದ ವಿಷಯುಕ್ತ ರಾಸಾಯನಿಕ ತ್ಯಾಜ್ಯ ಹರಿಸಲಾಗುತ್ತಿರುವ ಕುರಿತಂತೆ ಪರಿಶೀಲಿಸಿ ನಿಯಮಾನುಸಾರ ಕಠಿಣ ಕ್ರಮ ಜರುಗಿಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಜಿಲ್ಲಾಡಳಿತಕ್ಕೆ ಸೂಚನೆ ನೀಡಿದ್ದಾರೆ. ಜಿಲ್ಲಾಧಿಕಾರಿಯವರಿಗೆ ಈ ಸಂಬಂಧ ಲಿಖಿತ ಸೂಚನೆ ನೀಡಿರುವ ಅವರು, ಮಾಣಿಕನಗರ, ಹುಮನಾಬಾದ್, ಗಡವಂತಿ, ಮೊಳಕೇರಾ, ಧುಮ್ಮನ್ ಸೂರ್ ಹಾಗೂ ಹುಡುಗಿ ಸೇರಿದಂತೆ ಸುತ್ತಮುತ್ತಲಿನ ಅಂತರ್ಜಲ ಸಂಪೂರ್ಣ ಮಲಿನಗೊಂಡಿದೆ ಎಂಬ ಮಾಧ್ಯಮ ವರದಿಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ ಎಂದು ತಿಳಿಸಿದ್ದಾರೆ. ಮಾಣಿಕಪ್ರಭು ದೇವಸ್ಥಾನಕ್ಕೆ ರಾಜ್ಯ ಮತ್ತು ಹೊರರಾಜ್ಯದಿಂದ ಕೂಡ ಸಾವಿರಾರು ಭಕ್ತರು ಆಗಮಿಸಿ ನಂದಿಯಲ್ಲಿ ಸ್ನಾನ ಮಾಡುವುದರ ಜೊತೆಗೆ ತೀರ್ಥ ಎಂದು ನೀರನ್ನು ಸೇವಿಸುತ್ತಾರೆ. ಜಲ ಮೂಲಗಳಿಗೆ ಈ ರೀತಿ ವಿಷಯುಕ್ತ ತ್ಯಾಜ್ಯ ಸೇರ್ಪಡೆಯಾದರೆ ಕುಡಿಯುವ ನೀರೂ ವಿಷವಾಗುತ್ತದೆ. ಈ ಹಿನ್ನೆಲೆಯಲ್ಲಿ ನೀರಿನ ಪರೀಕ್ಷೆ ಮಾಡಿಸಿ, ತ್ಯಾಜ್ಯ ಹರಿಸುತ್ತಿರುವ ಕೈಗಾರಿಕೆಗಳ ವಿರುದ್ಧ ನಿಯಮಾನುಸಾರ ಕಠಿಣ ಕ್ರಮ ಜರುಗಿಸಿ, ಜಲ ಮೂಲ ಸಂರಕ್ಷಿಸಲು ಮತ್ತು 48 ಗಂಟೆಗಳ ಒಳಗಾಗಿ ಕೈಗೊಂಡ ಕ್ರಮದ ವರದಿ ಸಲ್ಲಿಸಲು ಈಶ್ವರ ಖಂಡ್ರೆ ಸೂಚಿಸಿದ್ದಾರೆ.

## ವ್ಯಕ್ತಿತ್ವ ವಿಕಸನಕ್ಕೆ ಕ್ರೀಡೆ ಸಹಕಾರಿ



**ಬಾಗಲಕೋಟೆ:** ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ ಕ್ರೀಡೆ ಮತ್ತು ಸಂಸ್ಕೃತಿ ಭದ್ರ ಬುನಾದಿಯಾಗಿದ್ದು, ಸಾಂಸ್ಕೃತಿಕ ಚಟುವಟಿಕೆಗಳು ಸಮಾಜದಲ್ಲಿ ಭಾವೈಕ್ಯತೆಯನ್ನು ಬೆಳೆಸುತ್ತವೆ ಎಂದು ಬಸವೇಶ್ವರ ವಿಜ್ಞಾನ ಮಹಾವಿದ್ಯಾಲಯದ ವಿಶ್ರಾಂತ ಪ್ರಾಚಾರ್ಯ ಡಾ. ಎನ್.ಎಂ.ಕೂಗಲಿ ಹೇಳಿದರು. ವಿದ್ಯಾಗಿರಿಯ ಬಸವೇಶ್ವರ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಸಭಾಭವನದಲ್ಲಿ ಬುಧವಾರ ನಡೆದ ಸಾಂಸ್ಕೃತಿಕ ಹಾಗೂ ಕ್ರೀಡಾ ಚಟುವಟಿಕೆಗಳ ಉದ್ಘಾಟನಾ ಸಮಾರಂಭವನ್ನು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು. ನಮ್ಮ ಪೂರ್ವಜರಿಂದ ಬಂದ ಕಲೆ, ಸಂಸ್ಕೃತಿ ಮತ್ತು ಸಾಂಸ್ಕೃತಿಕ ಪರಂಪರೆಗಳು ನಮ್ಮ ದೇಶದ ಶ್ರೀಮಂತ ಪರಂಪರೆಯನ್ನು ಬಿಂಬಿಸುತ್ತವೆ. ಸಾಂಸ್ಕೃತಿಕ ಕಾರ್ಯಕ್ರಮಗಳು ಸಮಾಜದಲ್ಲಿ ಏಕತೆ ಮತ್ತು ಭಾವೈಕ್ಯತೆಯನ್ನು ಮೂಡಿಸುತ್ತವೆ, ಕ್ರೀಡಾ ಚಟುವಟಿಕೆಗಳು ದೈನಂದಿನ ಒತ್ತಡವನ್ನು ಕಡಿಮೆ ಮಾಡಿ ಮನಸ್ಸಿಗೆ ಉಲ್ಲಾಸ ನೀಡುತ್ತವೆ. ಜೊತೆಗೆ, ವಿದ್ಯಾರ್ಥಿಗಳನ್ನು ಭವಿಷ್ಯದ ಸವಾಲುಗಳನ್ನು ಎದುರಿಸಲು ಸಜ್ಜುಗೊಳಿಸುತ್ತವೆ ಎಂದ ಅವರು, ವಿದ್ಯಾರ್ಥಿಗಳು ಶಿಕ್ಷಣದೊಂದಿಗೆ ಕ್ರೀಡೆ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಲ್ಲಿಯೂ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಕರೆ ನೀಡಿದರು. ಮಹಾವಿದ್ಯಾಲಯದ ಪ್ರಾಚಾರ್ಯ ಬಿ.ಆರ್.ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ಇದೇ ಸಂದರ್ಭದಲ್ಲಿ ಹಿಂದಿನ ಶೈಕ್ಷಣಿಕ ವರ್ಷದಲ್ಲಿ ಅತ್ಯಧಿಕ ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಹಾಗೂ ಅತಿಥಿಗಳನ್ನು ಸನ್ಮಾನಿಸಲಾಯಿತು. ವೇದಿಕೆಯಲ್ಲಿ ವಿದ್ಯಾರ್ಥಿ ಪ್ರತಿನಿಧಿಗಳಾದ ಮಂಜುನಾಥ ಗೌಡರ, ಕುಮಾರಿ ಸಾನಿಕಾ ಬಿರಾದಾರ ಹಾಗೂ ಎಂ.ಎಂ.ಮುತ್ನದ್ದಿ ಉಪಸ್ಥಿತರಿದ್ದರು. ಶ್ರೇಯಾ ಸಾಲಿಮಠ ಪ್ರಾರ್ಥಿಸಿದರು. ಎಂ.ಸಿ. ಹಳ್ಳೂರ ಸ್ವಾಗತಿಸಿ, ಪರಿಚಯಿಸಿದರು. ಚಂದ್ರಕಾಂತ ಚೌಕಿಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಸ್.ಪಿ. ಹೆರಕಲ್ ವಂದಿಸಿದರು. ಗಂಗಾದೇವಿ ಬಡಿಗೇರ ಕಾರ್ಯಕ್ರಮ ನಿರೂಪಿಸಿದರು.

## ಸಂತೋಷ ಲಾಡ್‌ಗೆ ಮಂತ್ರಿಗಿರಿ: ಬೀದರ್‌ನಲ್ಲಿ ಮರಾಠ ಸಮಾಜದಿಂದ ವಿಜಯೋತ್ಸವ

• **ಮಲ್ಲಮ್ಮ ನುಡಿ ವಾರ್ತೆ ಬೀದರ್**

ಸಿಎಂ ಡಿ.ಕೆ ಶಿವಕುಮಾರ ಅವರ ಸಚಿವ ಸಂಪುಟದಲ್ಲಿ ಇತ್ತಿಚೀಗೆ ಸಂತೋಷ ಲಾಡ್ ಅವರಿಗೆ ಸಚಿವ ಸ್ಥಾನ ನೀಡಿದ ಹಿನ್ನೆಲೆ ರಾಜ್ಯದ ಗಡಿ ಜಿಲ್ಲೆ ಬೀದರ್‌ನಲ್ಲಿ ಸಕಲ ಮರಾಠಾ ಸಮಾಜ ವತಿಯಿಂದ ವಿಜಯೋತ್ಸವ ಜರುಗಿತು.

ಬುಧವಾರ ನಗರದ ಶಿವಾಜಿ ಚೌಕ್‌ನಲ್ಲಿ ಸಮಾಜದ ಮುಖಂಡರು ಸೇರಿ ಪಟಾಕಿ ಸಿಡಿಸಿ ಸಿಹಿ ಹಂಚಿ ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ಸಮಾಜದ ಪೂಜ್ಯರಾದ ದಾದಾ ಮಹಾರಾಜ ನಗರಕರ್ ಮಾತನಾಡಿ, ಭಗವಂತನ ಸೃಷ್ಟಿಯಲ್ಲಿ ಪ್ರತಿಯೊಬ್ಬರಿಗೂ ಸಮಾಜದಲ್ಲಿ ಒಂದೊಂದು ಕರ್ಮವನ್ನು ನಿರ್ವಹಿಸುವ ಜವಾಬ್ದಾರಿ ಇರುತ್ತದೆ. ಅಧಿಕಾರವನ್ನು ಜನಸೇವೆಯ ಅವಕಾಶವನ್ನಾಗಿ ಪರಿಗಣಿಸಿ, ತಳಮಟ್ಟದ ಸ್ಥಳೀಯ ಸಂಸ್ಥೆಯಿಂದ ರಾಜಕೀಯ ಜೀವನ ಆರಂಭಿಸಿ ರಾಜ್ಯ ಸಚಿವ ಸ್ಥಾನದ ವರೆಗೆ ಬೆಳೆದಿರುವ ಸಂತೋಷ್ ಲಾಡ್



ಅವರ ರಾಜಕೀಯ ಪಯಣ ಗಮನಾರ್ಹವಾಗಿದೆ ಎಂದರು. ಪತ್ರಕರ್ತ ಪ್ರದೀಪ ಬಿರಾದಾರ ಮಾತನಾಡಿ, 2004ರಲ್ಲಿ ಸಂಡೂರು ವಿಧಾನಸಭಾ ಕ್ಷೇತ್ರದಿಂದ ಜನತಾ ದಳದ ಅಭ್ಯರ್ಥಿಯಾಗಿ ಸ್ಪರ್ಧಿಸಿ ಮೊದಲ ಬಾರಿಗೆ ಶಾಸಕರಾಗಿ ಆಯ್ಕೆಯಾದರು. ಬಳಿಕ ಧಾರವಾಡ ಜಿಲ್ಲೆಯ ಕಲಘಟಗಿ ವಿಧಾನಸಭಾ ಕ್ಷೇತ್ರವನ್ನು ತಮ್ಮ ರಾಜಕೀಯ ಕರ್ಮಭೂಮಿಯನ್ನಾಗಿಸಿಕೊಂಡ ಅವರು ಕಾಂಗ್ರೆಸ್ ಪಕ್ಷದಿಂದ 2008, 2013 ಹಾಗೂ 2023ರ ವಿಧಾನಸಭಾ ಚುನಾವಣೆಗಳಲ್ಲಿ ಗೆಲುವು ಸಾಧಿಸಿದರು. ಈ ಮೂಲಕ ಒಟ್ಟು ನಾಲ್ಕು ಬಾರಿ ಶಾಸಕರಾಗಿ, ಮಾತ್ರವಲ್ಲದೆ ರಾಜ್ಯ ಸರ್ಕಾರದಲ್ಲಿ ಸಚಿವರಾಗಿಯೂ ಸಂತೋಷ್ ಲಾಡ್ ವಿವಿಧ ಜವಾಬ್ದಾರಿಗಳನ್ನು ನಿರ್ವಹಿಸಿದ್ದಾರೆ. ವಾರ್ತಾ ಮತ್ತು ಪ್ರಸಾರ ಇಲಾಖೆ ಸೇರಿದಂತೆ ಕಾರ್ಮಿಕ ಇಲಾಖೆಯ ಹೊಣೆಯನ್ನು ವಿವಿಧ ಅವಧಿಗಳಲ್ಲಿ ನಿರ್ವಹಿಸಿರುವ ಅವರು, ಸಚಿವರಾಗಿ ಆಡಳಿತ ಮತ್ತು ಸಾರ್ವಜನಿಕ ಸೇವೆಯಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದಾರೆ ಎಂದರು.

ಅಧಿಕಾರವು ಜನಸೇವೆಗೆ ದೊರೆತ ಅವಕಾಶ ಎಂಬ ಮನೋಭಾವದೊಂದಿಗೆ ಸಾರ್ವಜನಿಕ ಜೀವನದಲ್ಲಿ ಮತ್ತಷ್ಟು ಪ್ರಾಮಾಣಿಕವಾಗಿ ಸೇವೆ ಸಲ್ಲಿಸಲು ಭಗವಂತನು ಅವರಿಗೆ ಸದ್ಬುದ್ಧಿ ಮತ್ತು ಶಕ್ತಿಯನ್ನು ಕರುಣಿಸಲಿ ಎಂಬುದು ಅವರ ಅಭಿಮಾನಿಗಳು ಹಾಗೂ ಹಿತೈಷಿಗಳ ಆಶಯವಾಗಿದೆ ಎಂದರು.

ಸಮಾಜದ ಮುಖಂಡರಾದ ಸತೀಶ ಮುಳೆ ಮಾತನಾಡಿ, 1975ರಲ್ಲಿ ಬಳ್ಳಾರಿ ಜಿಲ್ಲೆಯ ಸಂಡೂರಿನಲ್ಲಿ ಶಿವಾಜಿ ಹಾಗೂ ಶೈಲಜಾ ದಂಪತಿಯ ಪುತ್ರರಾಗಿ ಜನಿಸಿದ ಸಂತೋಷ್ ಲಾಡ್ ಅವರು ಬಿ.ಕಾಂ ಪದವಿ ಪಡೆದಿದ್ದಾರೆ. ವೃತ್ತಿಯಲ್ಲಿ ಉದ್ಯಮಿಯಾಗಿರುವ ಅವರು ನಂತರ ಸಾರ್ವಜನಿಕ ಹಾಗೂ ರಾಜಕೀಯ ಕ್ಷೇತ್ರದಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡರು. ಪಟ್ಟಣ ಪಂಚಾಯಿತಿಯಿಂದ ರಾಜಕೀಯ ಪಯಣ ಆರಂಭಿಸಿರುವ ಅವರು, 2002ಲಾಡ್ ರಲ್ಲಿ ಸಂಡೂರು ಪಟ್ಟಣ ಪಂಚಾಯಿತಿ ಸದಸ್ಯರಾಗಿ ಆಯ್ಕೆಯಾಗುವ ಮೂಲಕ ಸಂತೋಷ್ ಲಾಡ್ ಅವರು ತಮ್ಮ ರಾಜಕೀಯ ಜೀವನಕ್ಕೆ ಚಾಲನೆ ನೀಡಿದರು. ಸ್ಥಳೀಯ ಸಂಸ್ಥೆಯ ಸದಸ್ಯರಾಗಿ ಆರಂಭವಾದ ಅವರ ರಾಜಕೀಯ ಪಯಣ ಕ್ರಮೇಣ ವಿಧಾನಸಭೆಯ ವರೆಗೆ ವಿಸ್ತರಿಸಿತು ಎಂದವರು ತಿಳಿಸಿದರು.

## ಪಬ್ಲಿಕ್ ಕ್ಲಬ್ ಆಸ್ತಿ ಪ್ರಕರಣ: 7 ದಿನಗಳಲ್ಲಿ ಮಳಿಗೆ ಖಾಲಿ ಮಾಡಲು ಸೂಚನೆ

• **ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ**

ಕೊಪ್ಪಳ ಜಿಲ್ಲೆಯ ಗಂಗಾವತಿ ನಗರಸಭೆ ವ್ಯಾಪ್ತಿಯ ವಾರ್ಡ್ ಸಂಖ್ಯೆ 19ರಲ್ಲಿರುವ ಪಬ್ಲಿಕ್ ರಿಕ್ರಿಯೇಶನ್ ಅಸೋಸಿಯೇಷನ್ (ಪಬ್ಲಿಕ್ ಕ್ಲಬ್)ಗೆ ಸಂಬಂಧಿಸಿದ ಆಸ್ತಿ ವಿವಾದದಲ್ಲಿ ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರ ನ್ಯಾಯಾಲಯ ಮಹತ್ವದ ಆದೇಶ ನೀಡಿದೆ. ನಗರಸಭೆ 2019ರಲ್ಲಿ ನೀಡಿದ್ದ ಖಾತಾ (ನಮೂನೆ–3) ಹಾಗೂ ಅದರ ಆಧಾರದ ಮೇಲೆ ಸೃಷ್ಟಿಯಾಗಿದ್ದ ದಾಖಲೆಗಳನ್ನು ರದ್ದುಗೊಳಿಸಲಾಗಿದೆ.

ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಶ್ರೀಮತಿ ಜಹೀರಾ ನಸೀಮ್ (ಭಾ.ಆ.ಸೇ.) ಅವರ ನ್ಯಾಯಾಲಯದಲ್ಲಿ ಕರ್ನಾಟಕ ಪೌರಸಭೆಗಳ ಅಧಿನಿಯಮ–1964ರ ಕಲಂ 322ರಡಿ ಸಲ್ಲಿಕೆಯಾಗಿದ್ದ ಪರಿಷ್ಕರಣೆ ಅರ್ಜಿಯ ವಿಚಾರಣೆ ನಡೆಸಿ ಈ ಆದೇಶ ಪ್ರಕಟಿಸಲಾಗಿದೆ.

ಪ್ರಕರಣವು ಗಂಗಾವತಿ ನಗರಸಭೆ ವ್ಯಾಪ್ತಿಯ ವಾರ್ಡ್ ನಂ.19, ಸ್ವತ್ತು ಸಂಖ್ಯೆ 5–3–51/1/5–3–47/1, ಕಟಳ ಓಂ.19–2–8–2680 ಹಾಗೂ



ಸುಮಾರು 5,411.7855 ಚದರ ಮೀಟರ್ ವಿಸ್ತೀರ್ಣದ ಆಸ್ತಿಗೆ ಸಂಬಂಧಿಸಿದೆ. ಈ ಆಸ್ತಿಗೆ ಸಂಬಂಧಿಸಿದಂತೆ ಗಂಗಾವತಿ ನಗರಸಭೆಯ ಪೌರಾಯುಕ್ತರು 06–07–2019ರಂದು ನೀಡಿದ್ದ ಖಾತಾ (ನಮೂನೆ–3) ಹಾಗೂ ಅದರ ಆಧಾರದ ಮೇಲೆ ಮಾಡಲಾಗಿದ್ದ ಇತರೆ ದಾಖಲೆಗಳನ್ನು ರದ್ದುಗೊಳಿಸುವಂತೆ ಪರಿಷ್ಕರಣೆ ಅರ್ಜಿ ಸಲ್ಲಿಸಲಾಗಿತ್ತು.

ಪ್ರಕರಣದಲ್ಲಿ ಗಂಗಾವತಿ ನಗರಸಭೆಯ ಪೌರಾಯುಕ್ತರು ಎದುರುದಾರರಾಗಿದ್ದು, ಪಬ್ಲಿಕ್ ರಿಕ್ರಿಯೇಶನ್ ಅಸೋಸಿಯೇಷನ್ ಅಧ್ಯಕ್ಷರು ಮೇಲ್ಮನವಿದಾರರಾಗಿದ್ದರು. ಮೇಲ್ಮನವಿದಾರರ ಪರವಾಗಿ ನ್ಯಾಯವಾದಿ ಯು.ಆರ್. ವಿವೇಕಾನಂದ ಹಾಗೂ ಎದುರುದಾರರ ಪರವಾಗಿ ಮಹಾಬಲೇಶ್ವರ ಹಸಿನಾಳ ವಾದ ಮಂಡಿಸಿದರು.

ಅರ್ಜಿಯು ವಿಳಂಬವಾಗಿ ಸಲ್ಲಿಕೆಯಾಗಿದ್ದ ಹಿನ್ನೆಲೆಯಲ್ಲಿ ಭಾರತೀಯ ಪರಿಮಿತಿ ಕಾಯ್ದೆಯ ಕಲಂ 5ರಡಿ ವಿಳಂಬ ಮನ್ನಾ ಕೋರಿ ಅರ್ಜಿ ಸಲ್ಲಿಸಲಾಗಿತ್ತು. ನ್ಯಾಯಾಲಯವು ವಿಳಂಬವನ್ನು ಮನ್ನಾ ಮಾಡಿ ಅರ್ಜಿಯನ್ನು ವಿಚಾರಣೆಗೆ ಸ್ವೀಕರಿಸಿ, ಎಲ್ಲಾ ಪಕ್ಷಗಳಿಗೆ ನೋಟಿಸ್ ಜಾರಿಗೊಳಿಸಿ ವಿವಿಧ ದಿನಾಂಕಗಳಲ್ಲಿ ವಿಚಾರಣೆ ನಡೆಸಿತು.

ವಿಚಾರಣೆಯ ಬಳಿಕ ದಾಖಲೆಗಳು ಹಾಗೂ ವಾದಗಳನ್ನು ಪರಿಶೀಲಿಸಿದ ಪ್ರಾದೇಶಿಕ ಆಯುಕ್ತರು, 06–07–2019ರಂದು ಗಂಗಾವತಿ ನಗರಸಭೆಯಿಂದ ನೀಡಲಾಗಿದ್ದ ಖಾತಾ (ನಮೂನೆ–3) ಹಾಗೂ ಅದರ ಅನ್ವಯ ಮಾಡಲಾಗಿದ್ದ ದಾಖಲೆಗಳನ್ನು ರದ್ದುಗೊಳಿಸುವಂತೆ ಆದೇಶ ನೀಡಿದರು.

ಈ ಆದೇಶದ ಹಿನ್ನೆಲೆಯಲ್ಲಿ ಗಂಗಾವತಿ ನಗರಸಭೆ ಪೌರಾಯುಕ್ತರು ಮಾಧ್ಯಮದೊಂದಿಗೆ ಮಾತನಾಡಿ, ಪ್ರಸ್ತುತ ಪಬ್ಲಿಕ್ ಕ್ಲಬ್ ಆವರಣದಲ್ಲಿರುವ ಮಳಿಗೆಗಳಲ್ಲಿ ವ್ಯಾಪಾರ ನಡೆಸುತ್ತಿರುವ ವ್ಯಾಪಾರಸ್ಥರು 7 ದಿನಗಳೊಳಗೆ ಮಳಿಗೆಗಳನ್ನು ಖಾಲಿ ಮಾಡಬೇಕು ಎಂದು ಸೂಚನೆ ನೀಡಿರುವುದಾಗಿ ತಿಳಿಸಿದರು.

ಅಲ್ಲದೆ, ಪುಟ್ಟರಾಜ್ ಗವಾಯಿಗಳ ಖಾಸಗಿ ಶಾಲೆಯನ್ನು ಹೊರತುಪಡಿಸಿ, ಉಳಿದ ಎಲ್ಲಾ ಅಂಗಡಿಗಳು, ವಿವಿಧ ಖಾಸಗಿ ಆಸ್ಪತ್ರೆಗಳು, ಔಷಧಿ ಅಂಗಡಿಗಳು ಹಾಗೂ ಇತರೆ ವಾಣಿಜ್ಯ ಮಳಿಗೆಗಳಿಗೆ ಏಳು ದಿನಗಳ ಗಡುವು ನೀಡಲಾಗಿದ್ದು, ನಿಗದಿತ ಅವಧಿಯೊಳಗೆ ಸ್ಥಳವನ್ನು ಖಾಲಿ ಮಾಡದಿದ್ದರೆ ಕಾನೂನುಬದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಪೌರಾಯುಕ್ತರು ಎಚ್ಚರಿಕೆ ನೀಡಿದ್ದಾರೆ.

## ಸಮಾಜದ ಒಳಿತಿಗೆ ಬದುಕು ಸಮರ್ಪಿಸಿದ ಗುರುಬಸವ ಪಟ್ಟದ್ದೇವರು



**ಶಿಕ್ಷಣ–ಮಹತ್ವ**

• ಪರಶುರಾಮ ಕರಣಂ

ಭಾಲ್ಕಿ

"ಸಮಾಜದ ಬದಲಾವಣೆ ಕೇವಲ ಮಾತುಗಳಿಂದಲ್ಲ, ಮಾದರಿಯ ಬದುಕಿನಿಂದ ಸಾಧ್ಯ" ಎಂಬ ಸತ್ಯವನ್ನು ತಮ್ಮ ಜೀವನದ ಮೂಲಕ ಸಾಬೀತುಪಡಿಸುತ್ತಿರುವವರು ಭಾಲ್ಕಿಯ ಹಿರೇಮಠ ಸಂಸ್ಥಾನದ ಪೀಠಾಧಿಪತಿಗಳಾದ ಪೂಜ್ಯ ಗುರುಬಸವ ಪಟ್ಟದೇವರು. ಬಸವಣ್ಣನವರ ಕಾಯಕ, ದಾಸೋಹ, ಸಮಾನತೆ ಮತ್ತು ಮಾನವೀಯ ಮೌಲ್ಯಗಳನ್ನು ಜೀವನದ ಆದರ್ಶವಾಗಿಸಿಕೊಂಡಿರುವ ಅವರು, ಇಂದು ದುಶ್ಚಟಗಳ ನಿರ್ಮೂಲನೆಗಾಗಿ ಜೋಳಿಗೆ ಹಿಡಿದು ಜನಜಾಗೃತಿ ಮೂಡಿಸುವ ಅಪರೂಪದ ಸಮಾಜಮುಖಿ ಚಳವಳಿಗೆ ನಾಯಕತ್ವ ವಹಿಸಿದ್ದಾರೆ.

ಇಂದಿನ ಸಮಾಜವನ್ನು ಕಾಡುತ್ತಿರುವ ಮದ್ಯಪಾನ, ತಂಬಾಕು, ಗುಟ್ಕಾ, ಮಾದಕ ವಸ್ತುಗಳ ವ್ಯಸನ, ಜೂಜಾಟ ಹಾಗೂ ಇತರೆ ದುಶ್ಚಟಗಳು ಸಾವಿರಾರು ಕುಟುಂಬಗಳ ನೆಮ್ಮದಿಯನ್ನು ಕಸಿದುಕೊಳ್ಳುತ್ತಿವೆ. ಆರ್ಥಿಕ ಸಂಕಷ್ಟ, ಕೌಟುಂಬಿಕ ಕಲಹ, ಆರೋಗ್ಯ ಸಮಸ್ಯೆಗಳು ಮತ್ತು ಅಪರಾಧಗಳಿಗೂ ಈ ದುಶ್ಚಟಗಳೇ ಮೂಲ ಕಾರಣವಾಗುತ್ತಿರುವುದು ಕಳವಳಕಾರಿ ಸಂಗತಿ. ಇಂತಹ ಸಂದರ್ಭದಲ್ಲಿ ಸಮಾಜವನ್ನು ವ್ಯಸನಮುಕ್ತಗೊಳಿಸುವ ಸಂಕಲ್ಪದೊಂದಿಗೆ ಗುರು ಬಸವ ಪಟ್ಟದೇವರು ಗ್ರಾಮದಿಂದ ಗ್ರಾಮಕ್ಕೆ ತೆರಳಿ ಜನರಲ್ಲಿ ಜಾಗೃತಿ ಮೂಡಿಸುತ್ತಿದ್ದಾರೆ.

ಬಸವಣ್ಣನವರು ಸಾರಿದ "ಕಾಯಕವೇ ಕೈಲಾಸ" ಹಾಗೂ "ದಾಸೋಹವೇ ಧರ್ಮ" ಎಂಬ ತತ್ವಗಳನ್ನು ಬದುಕಿನ ಮಾರ್ಗವನ್ನಾಗಿ ಮಾಡಿಕೊಂಡಿರುವ ಗುರು ಬಸವ ಪಟ್ಟದೇವರು, ಧರ್ಮವೆಂದರೆ ಕೇವಲ ದೇವಸ್ಥಾನ, ಪೂಜೆ ಮತ್ತು ಆಚರಣೆಗಳಿಗೆ ಸೀಮಿತವಲ್ಲ; ಮನುಷ್ಯನ ಬದುಕು ಉತ್ತಮವಾಗಲು ದಾರಿದೀಪವಾಗಬೇಕು ಎಂಬ ಸಂದೇಶವನ್ನು ನಿರಂತರವಾಗಿ ಸಾರುತ್ತಿದ್ದಾರೆ. ನಿಜವಾದ ಭಕ್ತಿ ಎಂದರೆ ದುಶ್ಚಟಗಳನ್ನು ತೊರೆದು ಸದಾಚಾರದ ಬದುಕು ನಡೆಸುವುದೇ ಎಂಬುದನ್ನು ಅವರು ತಮ್ಮ ಪ್ರವಚನಗಳಲ್ಲಿ ಮನಮುಟ್ಟುವ ರೀತಿಯಲ್ಲಿ ವಿವರಿಸುತ್ತಾರೆ.



ವ್ಯಸನಮುಕ್ತ ಸಮಾಜ ನಿರ್ಮಾಣಕ್ಕಾಗಿ ಅವರು ಕೈಗೊಂಡಿರುವ 'ಜೋಳಿಗೆ ಅಭಿಯಾನ' ವಿಶಿಷ್ಟವಾಗಿದೆ. ಜೋಳಿಗೆ ಹಿಡಿದು ಮನೆಮನೆಗೆ ತೆರಳಿ ಜನರಿಂದ ದೇಣಿಗೆ ಸಂಗ್ರಹಿಸುವುದಷ್ಟೇ ಅಲ್ಲ, ಪ್ರತಿಯೊಬ್ಬರಿಗೂ ವ್ಯಸನದ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸಿ, ದುಶ್ಚಟಗಳನ್ನು ತ್ಯಜಿಸುವಂತೆ ಮನವಿ ಮಾಡುತ್ತಾರೆ. ಈ ಅಭಿಯಾನದಲ್ಲಿ ಸಂಗ್ರಹವಾಗುವ ದೇಣಿಗೆಯನ್ನು ಬಡವರ ನೆರವು, ಶಿಕ್ಷಣ, ಆರೋಗ್ಯ ಹಾಗೂ ಸಮಾಜಮುಖಿ ಕಾರ್ಯಕ್ರಮಗಳಿಗೆ ವಿನಿಯೋಗಿಸುವ ಮೂಲಕ ಸೇವೆಯ ಮಹತ್ವವನ್ನು ಜನರಿಗೆ ಮನವರಿಕೆ ಮಾಡಿಕೊಡುತ್ತಿದ್ದಾರೆ.

ಯುವಜನತೆ ದೇಶದ ಶಕ್ತಿಯಾಗಿದ್ದು, ಅವರು ದುಶ್ಚಟಗಳಿಗೆ ಬಲಿಯಾಗದೆ ಶಿಕ್ಷಣ, ಸಂಸ್ಕಾರ ಮತ್ತು ಕಾಯಕದ ಮೂಲಕ ಸಮಾಜ ನಿರ್ಮಾಣದಲ್ಲಿ ತೊಡಗಿಸಿಕೊಳ್ಳಬೇಕು ಎಂಬುದು ಗುರು ಬಸವ ಪಟ್ಟದೇವರ ಆಶಯವಾಗಿದೆ. ಅವರ ಪ್ರೇರಣೆಯಿಂದ ಅನೇಕ ಯುವಕರು ವ್ಯಸನ ತೊರೆದು ಹೊಸ ಬದುಕಿನತ್ತ ಹೆಜ್ಜೆಯಿಟ್ಟಿರುವುದು ಈ ಅಭಿಯಾನದ ಯಶಸ್ಸಿಗೆ ಸಾಕ್ಷಿಯಾಗಿದೆ.

ಮಹಿಳೆಯರು, ವಿದ್ಯಾರ್ಥಿಗಳು, ರೈತರು, ಕಾರ್ಮಿಕರು ಹಾಗೂ ವಿವಿಧ ಸಂಘ–ಸಂಸ್ಥೆಗಳ ಸಹಭಾಗಿತ್ವದೊಂದಿಗೆ ಈ ಜಾಗೃತಿ ಅಭಿಯಾನ ಜನಾಂದೋಲನದ ರೂಪ ಪಡೆಯುತ್ತಿದೆ. ವ್ಯಸನದಿಂದ ನಲುಗಿದ ಕುಟುಂಬಗಳಲ್ಲಿ ಆಶಾಕಿರಣ ಮೂಡಿಸುವ ಕೆಲಸವನ್ನು ಗುರು ಬಸವ ಪಟ್ಟದೇವರು ಅತ್ಯಂತ ನಿಸ್ವಾರ್ಥವಾಗಿ ಮಾಡುತ್ತಿದ್ದಾರೆ. "ವ್ಯಸನ ಬಿಡಿ, ಜೀವನ ಕಟ್ಟಿಕೊಳ್ಳಿ" ಎಂಬ ಅವರ ಸಂದೇಶ ಸಾವಿರಾರು ಜನರ ಮನಸ್ಸಿನಲ್ಲಿ ಹೊಸ ಭರವಸೆ ಮೂಡಿಸಿದೆ.

ಶೀ ಗುರುಬಸವ ಪಟ್ಟದೇವರ ಈ ಸೇವೆ ಕೇವಲ ಧಾರ್ಮಿಕ ಕಾರ್ಯವಲ್ಲ; ಅದು ಮಾನವೀಯತೆ, ಸಾಮಾಜಿಕ ಜವಾಬ್ದಾರಿ ಮತ್ತು ನೈತಿಕ ಮೌಲ್ಯಗಳನ್ನು ಬೆಳೆಸುವ ಪರಿವರ್ತನೆಯ ಚಳವಳಿಯಾಗಿದೆ. ಸಮಾಜದ ಒಳಿತಿಗಾಗಿ ಜೋಳಿಗೆ ಹಿಡಿದು ಹೊರಟಿರುವ ಅವರ ಈ ಪಾದಯಾತ್ರೆ ಪ್ರತಿಯೊಬ್ಬ ನಾಗರಿಕನಿಗೂ ಆತ್ಮಾವಲೋಕನ ಮಾಡುವಂತೆ ಪ್ರೇರೇಪಿಸುತ್ತದೆ.

ಇಂದು ಸಮಾಜಕ್ಕೆ ಇಂತಹ ಆಧ್ಯಾತ್ಮಿಕ ನಾಯಕತ್ವದ ಅಗತ್ಯ ಅತ್ಯಂತ ಹೆಚ್ಚಿದೆ. ದುಶ್ಚಟಗಳನ್ನು ತೊರೆದು ಸದಾಚಾರ, ಶಿಸ್ತು, ಸೇವೆ ಮತ್ತು ಸಂಸ್ಕಾರದ ಬದುಕನ್ನು ಅಳವಡಿಸಿಕೊಂಡಾಗ ಮಾತ್ರ ಸುಂದರ ಕುಟುಂಬ, ಆರೋಗ್ಯವಂತ ಸಮಾಜ ಮತ್ತು ಸದೃಢ ರಾಷ್ಟ್ರ ನಿರ್ಮಾಣ ಸಾಧ್ಯ. ಈ ಮಹತ್ಕಾರ್ಯಕ್ಕಾಗಿ ಅವಿರತವಾಗಿ ಶ್ರಮಿಸುತ್ತಿರುವ ಗುರು ಬಸವ ಪಟ್ಟದೇವರ ಜೋಳಿಗೆ ಅಭಿಯಾನ ಬಸವ ತತ್ವದ ಜೀವಂತ ರೂಪವಾಗಿದ್ದು, ಮುಂದಿನ ಪೀಳಿಗೆಗೂ ಪ್ರೇರಣೆಯ ದಾರಿದೀಪವಾಗಿದೆ. ಸಮಾಜಮುಖಿ ಸೇವೆಯ ಮೂಲಕ ಅವರು ಮೂಡಿಸುತ್ತಿರುವ ಜಾಗೃತಿ ಚಿರಸ್ಥಾಯಿಯಾಗಿ ಉಳಿಯಲಿ ಎಂಬುದು ಪ್ರತಿಯೊಬ್ಬರ ಹಾರೈಕೆಯಾಗಿದೆ.

Printed, Published and Owned by: Ramesh Reddy and Printed at Kalyani Printers, Ground Floor, Flat No 12/1, 1st Cross Road Mysore Road Old Tollgate, Near By Gopalan Mall Tollgate Mysore Road, Old Guddadahalli, Bengaluru, Karnataka-560026. Published at No25, 4th Main, Behind GK Naidu SCHL, Ananthapura Yelahanka Newtown, Bangalore North, PO: Yalahanka, Bengaluru, Karnataka-560064. Editor: Ramesh Reddy, Ph. No: +91 9449732000

PRGI NO. (RNI NO: KNKAN/26/A5871)